ಸಂಪುಟ : 8 ಸಂಚಿಕೆ : 153 ಪುಟ : 4 ಬೆಲೆ : 3.00 ಗುರುವಾರ ಜುಲೈ 20, 2023 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ...

VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 8 Issue : 153 Pages : 4 Price : 3.00 Thursday July 20, 2023 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಟಾಪ್‌ಕ್ಲಾಸ್ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2023-24ನೇ ಸಾಲಿನ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ಕೇಂದ್ರ ಪುರಸ್ಕೃತ ಟಾಪ್‌ಸ್ಕೂಲ್ ಸ್ಕಾಲರ್‌ಶಿಪ್ ಕಾರ್ಯಕ್ರಮದ ಕುರಿತಂತೆ ಟಾಪ್‌ಕ್ಲಾಸ್ ವಿದ್ಯಾರ್ಥಿ ವೇತನವನ್ನು ಪಡೆಯಲು ರಾಜ್ಯದ ಟಾಪ್‌ಸ್ಕೂಲ್ ಸಂಸ್ಥೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನ್ಯಾಶನಲ್ ಟೆಸ್ಟಿಂಗ್ ಏಜೆನ್ಸಿ ಮುಖಾಂತರ ಸೆಪ್ಟೆಂಬರ್ 29 ರಂದು ಪರೀಕ್ಷೆ ನಡೆಸಲಾಗುವುದು. ಈ ಯೋಜನೆಗೆ ಅರ್ಹರಿರುವ ವಿದ್ಯಾರ್ಥಿಗಳು ಆಗಸ್ಟ್ 10 ರೊಳಗಾಗಿ ್ಠಣಣಾಿ://ಥಿಜಣ.ಟಣಚಿ.ಚಿಛಿ.ಎಟ ಮುಖಾಂತರ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಅಧಿಕಾರಿಗಳ ಕಚೇರಿ ದೂರವಾಣಿ ಸಂಖ್ಯೆ 08372-237414 ಸಂಪರ್ಕಿಸಬಹುದಾಗಿದೆ.

## ಜು.22 ರಂದು ನೀರು ಪೂರೈಕೆಯಲ್ಲಿ ವ್ಯತ್ಯಯ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ಮುಂಡರಗಿ ತಾಲೂಕಿನ ಜಾಲವಾಡಗಿ ಗ್ರಾಮದಲ್ಲಿರುವ ನೀರು ಶುದ್ಧೀಕರಣ ಘಟಕದಲ್ಲಿ ಪಂಪ್ ನಿರ್ವಹಣೆ ಕೆಲಸ ಕೈಗೊಳ್ಳುವುದರಿಂದ ಜುಲೈ 22 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 5:30ರವರೆಗೆ ಗದಗ, ಮುಂಡರಗಿ, ಶಿರಹಟ್ಟಿ ತಾಲೂಕು ವ್ಯಾಪ್ತಿಯ 212 ಜನವಸತಿಗಳಿಗೆ ಹಾಗೂ ಮುಂಡರಗಿ ಪಟ್ಟಣಕ್ಕೆ ನೀರು ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ. ಸಾರ್ವಜನಿಕರು ಸಹಕರಿಸಬೇಕೆಂದು ಪ್ರಕಟಣೆ ತಿಳಿಸಿದೆ.

### ಲೀಡ್ ಬ್ಯಾಂಕ್‌ನ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ ಸಭೆಯಲ್ಲಿ ಡಿಸಿ ವೈಶಾಲಿ ಸೂಚನೆ

# ಅರ್ಹ ಫಲಾನುಭವಿಗಳಿಗೆ ಸಾಲ ವಿತರಣೆಗೆ ವಿಳಂಬ ಬೇಡ

■ವಿಜಯಸಾಕ್ಷಿ ಸುದ್ದಿ, ಗದಗ

ಬಿಪಿಎಲ್ ಪಡಿತರದಾರರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ವಿವಿಧ ರೀತಿಯ ತರಬೇತಿಗಳನ್ನು ಸರ್ಕಾರದಿಂದ(ಆರ್‌ಸೆಟಿ) ನೀಡಲಾಗುತ್ತಿದ್ದು ಬಡತನ ರೇಖೆ-ಗಿಂತ ಕೆಳಗಿರುವವರು ಆರ್ಥಿಕವಾಗಿ ಸಬಲೀಕರಣ ಹೊಂದಬೇಕೆನ್ನುವುದೇ ಇದರ ಉದ್ದೇಶವಾಗಿದ್ದು ತರಬೇತಿದಾರರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಸಾಲ ನೀಡುವಲ್ಲಿ ವಿನಾಕಾರಣ ವಿಳಂಬ ಮಾಡಬಾರದು ಎಂದು ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ತಿಳಿಸಿದರು.

ಗದಗ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜರುಗಿದ ಲೀಡ್ ಬ್ಯಾಂಕ್‌ನ ಜಿಲ್ಲಾ ಮಟ್ಟದ ಪರಿಶೀಲನಾ ಸಮಿತಿ ಸಭೆ (ಡಿಎಲ್‌ಆರ್‌ಸಿ) ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬ್ಯಾಂಕ್ ಅಧಿಕಾರಿಗಳು ಪಿಎಂ ಸ್ವನಿಧಿ (ಬೀದಿ ಬದಿ ವ್ಯಾಪಾರಸ್ಥರ ಉನ್ನತಿಗೆ ಸಾಲ ಯೋಜನೆ), ಉದ್ಯೋಗಿನಿ, ಪಿಎಂಎಸ್‌ಬಿವೈ, ಸೇರಿದಂತೆ ಸರ್ಕಾರದ ವಿವಿಧ ಯೋಜನೆಗಳ ಅರ್ಹ ಫಲಾನುಭವಿಗಳಿಗೆ ಸಾಲ ವಿತರಣೆಯಲ್ಲಿ ಇನ್ನಷ್ಟು ಪ್ರಗತಿ ಸಾಧಿಸಬೇಕು.




ಫಲಾನುಭವಿಗಳು ಅರ್ಜಿಗಳೊಂದಿಗೆ ಸೂಕ್ತ ದಾಖಲಾತಿಗಳನ್ನು ಹಾಜರುಪಡಿಸದೇ ಇದ್ದಲ್ಲಿ ಸಕಾರಣದೊಂದಿಗೆ ಅರ್ಜಿಯನ್ನು ತಿರಸ್ಕೃತಗೊಳಿಸಬಹುದು ಮತ್ತು ಫಲಾನುಭವಿಗಳಿಗೆ ಯೋಜನೆಯ ಕುರಿತು ಬ್ಯಾಂಕ್‌ನವರು ಸೂಕ್ತ ಮಾಹಿತಿ ಒದಗಿಸಬೇಕು. ಈಗಾಗಲೇ ಅಂಬೇಡ್ಕರ್ ನಿಗಮ, ಕೈಮಗ್ಗ ಇಲಾಖೆಯ ಯೋಜನೆಯ ಬಾಕಿ ಇರುವ ಅರ್ಜಿಗಳನ್ನು ಪುನ: ಪರಿಶೀಲಿಸಿ ಸೂಕ್ತ ಕ್ರಮ ಕೈಗೊಳ್ಳಲು ಮುಂದಾಗಬೇಕು ಎಂದು ಸಲಹೆ ನೀಡಿದರು.

ಲೀಡ್ ಬ್ಯಾಂಕ್ ಮ್ಯಾನೇಜರ್ ಜಬ್ಬಾರ್ ಅಹ್ಮದ್ ಸಾರವಾಡ ಮಾತನಾಡಿ, ಜಿಲ್ಲೆಯಲ್ಲಿ ಜೂನ್ 2023 ರ ಅಂತ್ಯಕ್ಕೆ ಲೀಡ್ ಬ್ಯಾಂಕ್‌ನ 176 ಶಾಖೆಗಳು ಕಾರ್ಯನಿರ್ವಹಿಸುತ್ತಿವೆ. ಜಿಲ್ಲೆಯ ಸಾಲ ಠೇವಣಿ ಅನುಪಾತ ಜೂನ್ 2023 ರ ಅಂತ್ಯದವರೆಗೆ ಶೇ.91.93 ರಷ್ಟಾಗಿದೆ. ಎಲ್ಲ ಬ್ಯಾಂಕ್‌ನ ನಿಯಂತ್ರಣಾಧಿಕಾರಿಗಳು

> ಬ್ಯಾಂಕ್ ಸಿಬ್ಬಂದಿಗಳಿಗೆ ಕೆವೈಸಿ ಅಪಡೇಟ್ ಮಾಡುವ ಪ್ರಕ್ರಿಯೆಯಲ್ಲಿ ಅಂಗವಿಕಲರಿಗೆ ಹಾಗೂ ಹಿರಿಯ ನಾಗರಿಕರ ಸಮಸ್ಯೆಗಳಿಗೆ ಸ್ಪಂದಿಸಿ ಕಾರ್ಯ ನಿರ್ವಹಿಸಬೇಕು. ಅರ್ಹ ಫಲಾನುಭವಿಗಳು ಬ್ಯಾಂಕ್‌ಗೆ ಉದ್ಯೋಗಿನಿ ಯೋಜನೆಯ ಅರ್ಜಿಗಳನ್ನು ಪ್ರಸ್ತುತಪಡಿಸುವಾಗ ಕನಿಷ್ಟ ಪಕ್ಷ ಅರ್ಜಿಯೊಂದಿಗೆ ಅವಶ್ಯಕವಾಗಿ ಬೇಕಾಗುವ ದಾಖಲೆಗಳ ಕುರಿತು ಸೂಕ್ತ ಮಾಹಿತಿ ಒದಗಿಸಬೇಕು. ವಿನಾಕಾರಣ ಅರ್ಜಿಗಳನ್ನು ತಿರಸ್ಕರಿಸಬಾರದು. ಸರ್ಕಾರದ ಯೋಜನೆಯ ಸೌಲಭ್ಯ ಸಾರ್ವಜನಿಕರಿಗೆ ತಲುಪಬೇಕಾದರೆ ಬ್ಯಾಂಕ್‌ನವರು ವಿಶೇಷ ಆಸಕ್ತಿಯಿಂದ ಕೆಲಸ ಮಾಡಬೇಕು.
>
> -ಎಂ.ವಿ.ಚಳಗೇರಿ, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ.

ತಮ್ಮ ಸಾಲ ಠೇವಣಿ ಅನುಪಾತವನ್ನು ಪರಿಶೀಲಿಸಿ ಸುಧಾರಿಸಲು ನಿರ್ದೇಶನ ನೀಡಲಾಗಿದೆ.

ಜೂನ್ 2023ರ ಅಂತ್ಯಕ್ಕೆ ಆದ್ಯತಾ ಕ್ಷೇತ್ರಕ್ಕೆ 94771.37 ಲಕ್ಷ ರೂ. ಸಾಲ ನೀಡಿಕೆಯಾಗಿದ್ದು ಗದಗ-41304.37 ಲಕ್ಷ ರೂ,ಗಜೇಂದ್ರಗಡ-4189.60 ಲಕ್ಷ ರೂ, ಲಕ್ಷ್ಮೇಶ್ವರ- 3807.92 ಲಕ್ಷ ರೂ, ಮುಂಡರಗಿ-7862.42 ಲಕ್ಷ ರೂ, ನರಗುಂದ-9255.54ಲಕ್ಷ ರೂ, ರೋಣ 21278.58 ಲಕ್ಷ ರೂ, ಶಿರಹಟ್ಟಿ-7072.95 ಲಕ್ಷ ರೂ.ಸಾಲ ನೀಡಿಕೆಯಾಗಿದೆ ಎಂದು ಸಭೆಗೆ ತಿಳಿಸಿದರು.

ಸಭೆಯಲ್ಲಿ ಪಿಎಂಇಜಿಪಿ, ಪಿಎಂಎಂವೈ (ಮುದ್ರಾ), ಸಿಎಂಅಮೃತ ಜೀವನ, ಡೇನಲ್ಮ-ಎಆರೆಲ್‌ಎಂ, ಪಿಎಂಎವೈ, ಪಿಎಂಜೆಜೆವೈ, ಎಪಿವೈ, ಪಿಎಂಎಸ್‌ಬಿವೈ ಸೇರಿದಂತೆ ವಿವಿಧ ಯೋಜನೆಗಳ ಪ್ರಗತಿ ಪರಿಶೀಲನೆ ನಡೆಸಲಾಯಿತು

ಇದೇ ಸಂದರ್ಭದಲ್ಲಿ 2023-24 ನೇ ಸಾಲಿನ ಜಿಲ್ಲಾ ವಾರ್ಷಿಕ ಸಾಲ ಯೋಜನೆ (Annual Credit Plan) ಪುಸ್ತಕ ಬಿಡುಗಡೆಗೊಳಿಸಲಾಯಿತು.

ಸಭೆಯಲ್ಲಿ ನಬಾರ್ಡನ ಡಿಡಿಎಂ ಮಹಾದೇವ ಕೀರ್ತಿ, ಎಸ್‌ಬಿಐದ (ಎಸ್&ಡಿ) ಮುಖ್ಯ ವ್ಯವಸ್ಥಾಪಕ ಮಹಾಂತೇಶ ಆರ್. ಕೆ. ಬ್ಯಾಂಕ್ ಅಧಿಕಾರಿಗಳು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

### ತಹಸೀಲ್ದಾರರ ಅಧ್ಯಕ್ಷತೆಯಲ್ಲಿ ಗೃಹಲಕ್ಷ್ಮೀ ಯೋಜನೆಯ ನೋಂದಣಿ ಕುರಿತು ಪೂರ್ವಭಾವಿ ಸಭೆ

# ಸೇವಾಸಿಂಧು ಪೋರ್ಟಲ್‌ನಲ್ಲಿ ಉಚಿತವಾಗಿ ನೋಂದಾಯಿಸಿ




> ಅರ್ಹ ಫಲಾನುಭವಿಯ ಪಡಿತರ ಚೀಟಿಯ ಸಂಖ್ಯೆ, ಯಜಮಾನಿ ಹಾಗೂ ಯಜಮಾನಿ ಪತಿಯ ಆಧಾರ್ ಕಾರ್ಡ ಸಂಖ್ಯೆ, ಯಜಮಾನಿಯ ಆಧಾರ್‌ಗೆ ಜೋಡಣೆಯಾಗಿರುವ ಬ್ಯಾಂಕ್ ಖಾತೆಯ ಪಾಸ್‌ಬುಕ್/ಫಲಾನುಭವಿಯು ಇಚ್ಛಿಸುವ ಪರ್ಯಾಯ ಬ್ಯಾಂಕ್ ಖಾತೆ ವಿವರ ಹಾಗೂ ಮೊಬೈಲ್ ಸಂಖ್ಯೆ ಅಗತ್ಯವಿರುತ್ತದೆ. ಫಲಾನುಭವಿಗಳ ನೋಂದಣಿಗೆ ನಿಗದಿ ಮಾಡಿರುವ ದಿನಾಂಕ, ಸಮಯ, ಸ್ಥಳದ ವಿವರವನ್ನು 1902ಕ್ಕೆ ಅಥವಾ 8147500500ಗೆ ಎಸ್‌ಎಂಎಸ್ ಮಾಡುವ ಮೂಲಕ ಮಾಹಿತಿ ಪಡೆಯಬಹುದು. ನೋಂದಾಯಿಸಲು ಯಾವುದೇ ಅಂತಿಮ ದಿನಾಂಕ ಮತ್ತು ಸಮಯ ನಿಗದಿಪಡಿಸಿಲ್ಲ.
>
> – ಅನಿಲ ಬಡಿಗೇರ.
> ತಹಸೀಲ್ದಾರರು, ಶಿರಹಟ್ಟಿ.

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ, ಪಟ್ಟಣ ಪಂಚಾಯತ ಹಾಗೂ ಕಂದಾಯ ಇಲಾಖೆಯ ಅಧಿಕಾರಿಗಳು ಶಿರಹಟ್ಟಿಯ ತಹಸೀಲ್ದಾರ ಕಚೇರಿಯಲ್ಲಿ ತಹಸೀಲ್ದಾರ ಅನಿಲ ಬಡಿಗೇರ ಅಧ್ಯಕ್ಷತೆಯಲ್ಲಿ ಗೃಹಲಕ್ಷ್ಮೀ ಯೋಜನೆಯ ನೋಂದಣಿ ಕುರಿತು ಬುಧವಾರ ಪೂರ್ವಭಾವಿ ಸಭೆ ನಡೆಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ತಹಸೀಲ್ದಾರ ಅನಿಲ ಬಡಿಗೇರ, ಗೃಹಲಕ್ಷ್ಮೀ ಯೋಜನೆಗೆ ಜು.20ರಿಂದ ನೋಂದಣಿ ಪ್ರಾರಂಭವಾಗಲಿದ್ದು, ಆಹಾರ ಮತ್ತು ನಾಗರಿಕ ಸರಬರಾಜು ಇಲಾಖೆಯು ವಿತರಿಸುವ ಅಂತ್ಯೋದಯ, ಬಿಪಿಎಲ್ ಮತ್ತು ಎಪಿಎಲ್ ಪಡಿತರ ಚೀಟಿಗಳಲ್ಲಿ ಕುಟುಂಬದ ಯಜಮಾನಿ ಎಂದು ನಮೂದಿಸಿರುವ ಮಹಿಳೆ ಸೌಲಭ್ಯ ಪಡೆಯಲು ಅರ್ಹತೆ ಹೊಂದಿದ್ದಾರೆ. ಕುಟುಂಬದ ಯಜಮಾನಿ ಅಥವಾ ಯಜಮಾನಿಯ ಪತಿ ಆದಾಯ ತೆರಿಗೆ ಪಾವತಿದಾರರಾಗಿದ್ದಲ್ಲಿ ಈ ಯೋಜನೆಗೆ ಅರ್ಹರಾಗುವುದಿಲ್ಲ. ಕುಟುಂಬದ ಯಜಮಾನಿ ಅಥವಾ ಯಜಮಾನಿಯ ಪತಿ ಜಿಎಸ್‌ಟಿ ರಿಟರ್ನ್ಸ್ ಸಲ್ಲಿಸುವವರಾಗಿದ್ದರೂ ಸಹ ಅರ್ಹರಾಗುವುದಿಲ್ಲ ಎಂದು ತಿಳಿಸಿದರು.

ತಾಲೂಕಾ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಮೃತ್ಯುಂಜಯ ಗುಡ್ಡದಾನ್ವೇರಿ ಮಾತನಾಡಿ, ಫಲಾನುಭವಿಗಳು ಗ್ರಾಮ ಒನ್, ಕರ್ನಾಟಕ ಒನ್, ನಗರ ಸ್ಥಳೀಯ ವಾರ್ಡ್ ಕಚೇರಿಗಳು, ಬಾಪೂಜಿ ಸೇವಾ ಕೇಂದ್ರದ ಮೂಲಕ ಸೇವಾಸಿಂಧು ಪೋರ್ಟಲ್‌ನಲ್ಲಿ ಉಚಿತವಾಗಿ ನೋಂದಾಯಿಸಿಕೊಳ್ಳಬಹುದಾಗಿದೆ. ಫಲಾನುಭವಿಯು ಯಾವುದೇ ಶುಲ್ಕವನ್ನು ಪಾವತಿಸುವಂತಿಲ್ಲ. ಈ ಬಗ್ಗೆ ಯಾವುದೇ ಗೊಂದಲಗಳಿದ್ದರೆ ಹಾಗೂ ಹೆಚ್ಚಿನ ಮಾಹಿತಿ ಬಯಸಿದಲ್ಲಿ 1902 ಅಥವಾ 8147500500ನ್ನು ಸಂಪರ್ಕಿಸಬಹುದು ಎಂದರು.

ಪಟ್ಟಣ ಪಂಚಾಯತ ಮುಖ್ಯಾಧಿಕಾರಿ ಸಿದ್ದರಾಯ ಕಟ್ಟಿಮನಿ, ಕಮಲ ಹುಲಕೋಟಿ ಉಪಸ್ಥಿತರಿದ್ದರು.

## ಸ್ವಚ್ಛತೆ, ಕೀಟ ನಿಯಂತ್ರಣಕ್ಕೆ ಕ್ರಮವಹಿಸಲು ಮನವಿ

■ವಿಜಯಸಾಕ್ಷಿ ಸುದ್ದಿ, ಮುಂಡರಗಿ

ಸೊಳ್ಳೆ, ತಿಗಣೆ ಇತ್ಯಾದಿ ಖಾಯಿಲೆಗಳನ್ನು ಹರಡುವ ಕೀಟಗಳನ್ನು ನಿಯಂತ್ರಿಸಲು ಫಾಗಿಂಗ್ ಮಾಡಲು ಹಾಗೂ ಸ್ವಚ್ಛತೆಗೆ ಆದ್ಯತೆ ನೀಡಬೇಕು ಎಂದು ಆಗ್ರಹಿಸಿ ಡಾ. ಬಿ ಆರ್ ಅಂಬೇಡ್ಕರ್ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಸಂಘದ ವತಿಯಿಂದ ಪುರಸಭೆಯ ಮುಖ್ಯಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಂಘದ ಅಧ್ಯಕ್ಷ ಅಡಿವೆಪ್ಪ ಛಲವಾದಿ ಮಾತನಾಡಿ, ಮುಂಡರಗಿ ಪುರಸಭೆ ವ್ಯಾಪ್ತಿಯ ಎಲ್ಲ ವಾರ್ಡ್‌ಗಳಲ್ಲಿ ಸೊಳ್ಳೆ, ನೊರ್ಜು, ನೊಣ, ತಿಗಣೆಗಳು ಹೆಚ್ಚಾಗಿದ್ದು, ಸ್ವಚ್ಛತೆಯೂ ಇಲ್ಲದೆ ದುರ್ನಾತ ಬೀರುತ್ತಿದೆ. ಆದ್ದರಿಂದ ವಾರ್ಡ್‌ಗಳಲ್ಲಿ ಸ್ವಚ್ಛತೆಗೆ ಆದ್ಯತೆ ನೀಡುವುದರೊಂದಿಗೆ ಪ್ರತಿ ಎರಡು ದಿನಕೊಮ್ಮೆಯಾದರೂ ಫಾಗಿಂಗ್ ಮಾಡುವ ಮೂಲಕ ಕೀಟಗಳನ್ನು



ನಿಯಂತ್ರಿಸಬೇಕು. ಪುರಸಭೆಯಲ್ಲಿ ಎರಡು ಫಾಗಿಂಗ್ ಯಂತ್ರಗಳು ಇದ್ದರೂ ಸಹ ಅಧಿಕಾರಿಗಳ ನಿರ್ಲಕ್ಷ್ಯದಿಂದ ಇಲ್ಲಿವರೆಗೂ ಫಾಗಿಂಗ್ ಮಾಡುವ ಕಾರ್ಯಕ್ಕೆ ಮುಂದಾಗಿಲ್ಲ. ಚರಂಡಿ ಮತ್ತು ಗಲೀಜು ಪ್ರದೇಶದಲ್ಲಿ ಬ್ಲೀಚಿಂಗ್ ಪೌಡರ್ ಸಿಂಪಡಿಸಿ, ಸ್ವಚ್ಛತೆಗೆ ಕ್ರಮ ವಹಿಸಬೇಕು ಎಂದು ಆಗ್ರಹಿಸಿ ಮನವಿ ನೀಡಿದರು.

ಮನವಿ ಸ್ವೀಕರಿಸಿದ ಪುರಸಭೆಯ ಮುಖ್ಯಾಧಿಕಾರಿಗಳು ಎರಡು ದಿನಗಳೊಳಗಾಗಿ ಪಟ್ಟಣದಲ್ಲಿ ಫಾಗಿಂಗ್ ಮಾಡುವ ಭರವಸೆ ನೀಡಿದರು. ಈ ಸಂದರ್ಭದಲ್ಲಿ ಮಂಜುನಾಥ ಕಟ್ಟಿಮನಿ, ಪ್ರಕಾಶ್ ದೊಡ್ಡಮನಿ, ಹುಲಿಗೆಪ್ಪ ಬಂಡಿವಡ್ಡರ, ನಾಗರಾಜ ರಾಮೇನಹಳ್ಳಿ, ಹಸನ್ ಅಳವಂಡಿ, ಹನಮಂತಪ್ಪ ಭಜಂತ್ರಿ, ರವಿ ಭಜಂತ್ರಿ, ಜಾಫರಾಸಾಬ್, ರಮೇಶ ಕೊಪ್ಪಳ, ಎಲ್ಲಪ್ಪ ಭಜಂತ್ರಿ, ಮಂಜುನಾಥ್ ಅಳವಂಡಿ, ಸುರೇಶ್ ಬಂಡಿವಡ್ಡರ, ಪ್ರವೀಣ್ ಭಜಂತ್ರಿ ಮುಂತಾದವರಿದ್ದರು.

## ಗೃಹಲಕ್ಷ್ಮೀ ಯೋಜನೆಯ ನೋಂದಣಿ ಕೇಂದ್ರಗಳ ಉದ್ಘಾಟನೆ



■ವಿಜಯಸಾಕ್ಷಿ ಸುದ್ದಿ, ಗದಗ

ನಗರಸಭೆ ವ್ಯಾಪ್ತಿಯಲ್ಲಿ ಗೃಹಲಕ್ಷ್ಮೀ ಯೋಜನೆಯ ನೋಂದಣಿಗಾಗಿ 7 ಕೇಂದ್ರಗಳನ್ನು ಬುಧವಾರ ನಗರಸಭಾಧ್ಯಕ್ಷೆ ಉಷಾ ದಾಸರ ಉದ್ಘಾಟಿಸಿದರು.

ಕಾರ್ಯಕ್ರಮದಲ್ಲಿ ಉಪಾಧ್ಯಕ್ಷೆ ಸುನಂದಾ ಬಾಕಳೆ, ವಿರೋಧಪಕ್ಷದ ನಾಯಕರಾದ ಎಲ್ ಡಿ ಚಂದಾವರಿ, ರಾಘವೇಂದ್ರ ಯಳವತ್ತಿ, ಪೌರಾಯುಕ್ತ ರಮೇಶ ಸುಣಗಾರ, ಕಚೇರಿಯ ವ್ಯವಸ್ಥಾಪಕ ಪಿ ಎಫ್ ಶೇರಖಾನೆ, ಎಸ್ ವಾಯ್ ಸಂಕನಗೌಡರ, ಶೀಲಾ ಎಸ್ ಬೆಳ್ಳಿಕೊಪ್ಪ, ಸಿಎಓ ಮುಜಾವರ, ಎ ಎನ್ ಪುಣೇಕರ, ಕಂದಾಯ ಅಧಿಕಾರಿ ಮಹೇಶ ಹಡಪದ, ಕಂದಾಯ ನಿರೀಕ್ಷಕ ಎಂಎಚ್ ಸೀತಿಮನಿ, ಲೆಕ್ಕಪರಿವೀಕ್ಷಕ ಟಿ ಎಚ್ ದ್ಯಾವನೂರ, ಎಲ್ಲಾ ವಾರ್ಡುಗಳ ಸದಸ್ಯರು, ಸ್ವ-ಸಹಾಯ ಗುಂಪಿನ ಸದಸ್ಯರು, ನಗರಸಭೆ ಸದಸ್ಯರು ಹಾಗೂ ಎಲ್ಲ ಸಿಬ್ಬಂದಿ ವರ್ಗದವರು ಪಾಲ್ಗೊಂಡಿದ್ದರು. ಎಸ್ ವಾಯ್ ಸಂಕನಗೌಡರ ವಂದಿಸಿದರು.

## ಮತದಾನದ ದಿನದಂದು ಸಂತೆ, ಜಾತ್ರೆ ಮುಂದೂಡಿಕೆ

■ವಿಜಯಸಾಕ್ಷಿ ಸುದ್ದಿ, ಗದಗ

ಗ್ರಾಮ ಪಂಚಾಯತಿಯಲ್ಲಿ ವಿವಿಧ ಕಾರಣಗಳಿಂದ ಖಾಲಿ ಇರುವ / ತೆರವಾಗಿರುವ ಸ್ಥಾನಗಳಿಗೆ ಉಪಚುನಾವಣೆ/ಸಾರ್ವತ್ರಿಕ ಚುನಾವಣೆಗಳಿಗೆ ಸಂಬಂಧಿಸಿದಂತೆ ಮುಂಡರಗಿ ತಾಲೂಕಿನ 17-ಮುರಡಿ ವ ಮುರಡಿ ತಾಂಡಾದ ಸದಸ್ಯರ ಪದಾವಧಿಯು ಮುಕ್ತಾಯವಾಗಿರುವುದರಿಂದ ಸಾರ್ವತ್ರಿಕ ಚುನಾವಣೆಗೆ ಹಾಗೂ ಡೋಣಿ ಗ್ರಾಮ ಪಂಚಾಯತಿಯ ಖಾಲಿ ಇರುವ ಸ್ಥಾನಗಳಿಗೆ ಉಪ ಚುನಾವಣೆಯು ಜುಲೈ 23ರಂದು ಮತದಾನ ಜರುಗಲಿದೆ. ಮತದಾನದ ದಿನದಂದು ಶಿಸ್ತು ಮತ್ತು ಶಾಂತಿ ಕಾಪಾಡಿಕೊಳ್ಳುವ ಸಲುವಾಗಿ ಜುಲೈ 23ರಂದು ಮತದಾನ ಜರುಗಲಿರುವ ಮುಂಡರಗಿ ತಾಲೂಕು ಡೋಣಿ ಗ್ರಾಮದಲ್ಲಿ ವಾರದ ಸಂತೆಯನ್ನು ಆ ದಿವಸದ'ಮಟ್ಟಿಗೆ ರದ್ದುಪಡಿಸಲಾಗಿದೆ ಎಂದು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ದಂಡಾಧಿಕಾರಿಗಳಾದ ವೈಶಾಲಿ ಎಂ.ಎಲ್. ತಿಳಿಸಿದ್ದಾರೆ.

### 'ಮಕ್ಕಳ ಮನೋವಿಕಾಸಕ್ಕಾಗಿ ವಿವಿಧ ಚಟುವಟಿಕೆಗಳು' ಕಾರ್ಯಕ್ರಮದಲ್ಲಿ ಎಂ.ಎಸ್.ಪೂಜಾರ ಅಭಿಪ್ರಾಯ

# ಮಕ್ಕಳಿಗೆ ಅಂಕ ಗಳಿಕೆಯ ಒತ್ತಡ ಹೇರಬೇಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಕ್ಕಳನ್ನು ಅಂಕ ಗಳಿಕೆಯ ಯಂತ್ರಗಳನ್ನಾಗಿಸದೆ, ಅವರಲ್ಲಿರುವ ಪ್ರತಿಭೆಗಳನ್ನು ಗುರುತಿಸಿ, ಸೃಜನಶೀಲ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳುವಂತೆ ಪ್ರೇರೇಪಿಸಿ ಅವರ ಕಲಿಕಾಸಕ್ತಿಯನ್ನು ಹೆಚ್ಚಿಸಬಹುದು ಎಂದು ಅಣ್ಣಿಗೇರಿಯ ನಿವೃತ್ತ ಶಿಕ್ಷಕ ಎಂ ಎಸ್ ಪೂಜಾರ ಅಭಿಪ್ರಾಯಪಟ್ಟರು.

ನಗರದ ಗಂಗಾಪೂರ ಪೇಟೆಯಲ್ಲಿರುವ ಶ್ರೀ ದುರ್ಗಾದೇವಿ ಶಿಕ್ಷಣ ಸಂಸ್ಥೆಯಲ್ಲಿ 'ಮಕ್ಕಳ



ಮನೋವಿಕಾಸಕ್ಕಾಗಿ ವಿವಿಧ ಚಟುವಟಿಕೆಗಳು' ಕಾರ್ಯಕ್ರಮದಲ್ಲಿ ಅವರು ಮಾತನಾಡಿ, ಬದುಕಿಗೆ ಶಿಕ್ಷಣ ಬೇಕು. ಅದರಿಂದ ಅವರು ಅದ್ಭುತ ಬದುಕನ್ನು ಕಟ್ಟಿಕೊಳ್ಳಬಹುದು. ಆದರೆ, ಪಾಲಕರು ಅವರಲ್ಲಿರುವ ಪ್ರತಿಭೆಗಳನ್ನು ಗುರುತಿಸದೆ ಅವರಿಗೆ ಗರಿಷ್ಠ ಅಂಕಗಳನ್ನು ಪಡೆಯುವಂತೆ ಒತ್ತಾಯ ಹಾಗೂ ಒತ್ತಡ ಹೇರುವುದು ಸರಿಯಲ್ಲ ಎಂದರು.

ಶಾಲೆಯ ಆಡಳಿತಾಧಿಕಾರಿ ಸಾವಿತ್ರಿ ಕವಡಕಿ ಮಾತನಾಡಿ, ಮಕ್ಕಳಿಗೆ ಕಲಿಕಾ ಆಸಕ್ತಿ ಮೂಡಿಸಲು ಪಠ್ಯೇತರ ಚಟುವಟಿಕೆಗಳು ಅಗತ್ಯವಾಗಿವೆ. ಶಿಕ್ಷಕರಾದವರು ಮಕ್ಕಳ ಆಸಕ್ತಿಯನ್ನು ಗುರುತಿಸಿ ಕೆಲಸ ಮಾಡಬೇಕು. ಶಾಲೆ ಬಿಟ್ಟ ನಂತರ ಪಾಲಕರು ಮಕ್ಕಳೊಂದಿಗೆ ಬೆರೆತು ಅವರಲ್ಲಿ ▸▸3ನೇ ಪುಟಕ್ಕೆ

### ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಗುರು ಪುಟ್ಟರಾಜರ ಗಾನ ಲಹರಿ ಕಾರ್ಯಕ್ರಮ

# ಗುರುವಿನ ಕರುಣೆಯಿಂದಲೇ ನೆಮ್ಮದಿ

■ವಿಜಯಸಾಕ್ಷಿ ಸುದ್ದಿ, ಗದಗ

ಗುರುವಿನ ಕರುಣೆಯಿಂದಲೇ ವಿದ್ಯೆಯ ಸಂಪತ್ತು ಹೆಚ್ಚಾಗುತ್ತದೆ. ತನ್ಮೂಲಕ ಸಮಾಜದಲ್ಲಿ ಸುಂದರ ಬದುಕು ನಿರ್ಮಾಣ ಮಾಡಿಕೊಳ್ಳಲು ಸಾಧ್ಯ. ಈ ನಿಟ್ಟಿನಲ್ಲಿ ಪಂಡಿತ್ ಪಂಚಾಕ್ಷರಿ ಗವಾಯಿಗಳು ಹಾಗೂ ಡಾ. ಪುಟ್ಟರಾಜ ಗವಾಯಿಗಳ ಕರುಣೆಯ ಮೂಲಕ ಹಲವಾರು ಶಿಷ್ಯಂದಿರು ಬದುಕು ಕಟ್ಟಿಕೊಂಡಿದ್ದು, ನೆಮ್ಮದಿಯ



ಬದುಕಿಗೆ ಆಶ್ರಯದಾತರಾಗಿದ್ದಾರೆ. ಆಶ್ರಮದ ಎಲ್ಲ ವಿದ್ಯಾರ್ಥಿಗಳು ಗುರುವಿನ ಕರುಣೆ ಪಡೆಯಲು ಶ್ರಮಿಸಬೇಕೆಂದು ಪರಮಪೂಜ್ಯ ಕಲ್ಲಯ್ಯಜ್ಜನವರು ನುಡಿದರು.

ಶ್ರೀ ವೀರೇಶ್ವರ ಪುಣ್ಯಾಶ್ರಮದಲ್ಲಿ ಅಮಾವಾಸ್ಯೆ ಪ್ರಯುಕ್ತ ನಡೆಯುವ ಗುರು ಪುಟ್ಟರಾಜರ ಗಾನ ಲಹರಿ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಪಾಲ್ಗೊಂಡಿದ್ದ ಡಾ. ಶರಣಯ್ಯಸ್ವಾಮಿ ಹಿರೇಮಠ ಮಾತನಾಡಿ, ಜೀವನದಲ್ಲಿ ಶಿಸ್ತು ಅತ್ಯಗತ್ಯ. ಶಿಸ್ತಿನಿಂದ ಕಲಿತ ವಿದ್ಯೆ ಮಾತ್ರ ಶಾಶ್ವತ. ಇಂಥ ವಿದ್ಯೆ ಈ ಆಶ್ರಮದ ▸▸3 ನೇ ಪುಟಕ್ಕೆ

## ಅನ್ನಭಾಗ್ಯ ಹಣ ವರ್ಗಾವಣೆಗೆ ಸಹಾಯವಾಣಿ ಕೇಂದ್ರ

■ವಿಜಯಸಾಕ್ಷಿ ಸುದ್ದಿ, ಗದಗ

ಅನ್ನಭಾಗ್ಯ ಯೋಜನೆಯಡಿ ಅಂತ್ಯೋದಯ ಹಾಗೂ ಆದ್ಯತಾ ಪಡಿತರ ಫಲಾನುಭವಿಗಳಿಗೆ 05 ಕೆ.ಜಿ. ಅಕ್ಕಿಯ ಬದಲಾಗಿ ಪ್ರತಿ ಫಲಾನುಭವಿಗೆ ರೂ.170/- ನ್ನು ನೇರವಾಗಿ ಬ್ಯಾಂಕ್ ಖಾತೆಗೆ ಜಮೆ ಮಾಡುವ ಕುರಿತಂತೆ ಜಿಲ್ಲೆಯ 1,88,833 ಪಡಿತರ ಕುಟುಂಬಗಳ 6,43,423 ಫಲಾನುಭವಿಗಳಿಗೆ ರೂ.10.37 ಕೋಟಿ ಹಣ ಬಿಡುಗಡೆ ಮಾಡಿದ್ದು, ಈಗಾಗಲೇ ಮಾನ್ಯ ಜಿಲ್ಲಾ ಉಸ್ತುವಾರಿ ಸಚಿವರು ನೇರ ನಗದು ವರ್ಗಾವಣೆಗೆ ಚಾಲನೆ ನೀಡಿರುತ್ತಾರೆ. ಪಡಿತರ ಫಲಾನುಭವಿಗಳಿಗೆ ನೇರ ನಗದು ವರ್ಗಾವಣೆಗೆ ಸಂಬಂಧಿಸಿದಂತೆ ಇರುವ ಗೊಂದಲಗಳನ್ನು/ಸಮಸ್ಯೆಗಳನ್ನು ಅಥವಾ ಅದಕ್ಕೆ ಸಂಬಂಧಿಸಿದಂತೆ ಇರುವ ಯಾವುದೇ ವಿಷಯವನ್ನು ಪರಿಹರಿಸಿಕೊಳ್ಳಲು ಜಿಲ್ಲೆಯಲ್ಲಿ ಸಹಾಯವಾಣಿ ಕೇಂದ್ರ ತೆರೆಯಲಾಗಿದ್ದು, ಪಡಿತರ ಫಲಾನುಭವಿಗಳು ಈ ನಂಬರಗೆ ಕರೆ ಮಾಡಿ ತಮ್ಮ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳಬಹುದಾಗಿದೆ.

ಉಪನಿರ್ದೇಶಕರ ಕಚೇರಿ ಗದಗ-08372-239443, ಸಹಾಯಕ ನಿರ್ದೇಶಕರ ಕಛೇರಿ, ಗದಗ ಪಡಿತರ-90089-13514, ಗದಗ ಗ್ರಾಮೀಣ ಪ್ರದೇಶ- 63643-81607, ನರಗುಂದ ತಾಲೂಕು - 96062-81029, ರೋಣ ತಾಲೂಕು-99168-90282, ಗಜೇಂದ್ರಗಡ ತಾಲೂಕು - 98441-89672, ಮುಂಡರಗಿ ತಾಲೂಕು-96631-31498, ಶಿರಹಟ್ಟಿ ತಾಲೂಕು -78299-60469, ಲಕ್ಷ್ಮೇಶ್ವರ ತಾಲೂಕು- 91642-49118 ಸಂಪರ್ಕಿಸಬಹುದಾಗಿದೆ.

## ಕೆಟ್ಟ ಹುಳುಗಳ ಪೋಷಕ ಸ್ಥಾನದಲ್ಲಿ ಕಾಂಗ್ರೆಸ್ ಸರ್ಕಾರವಿದೆ

■ವಿಜಯಸಾಕ್ಷಿ ಸುದ್ದಿ, ಧಾರವಾಡ

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ಭಯೋತ್ಪಾದಕರಂತಹ ಕೆಟ್ಟ ಹುಳುಗಳು ಹೊರಬರುತ್ತಿವೆ ಎಂದು ಶ್ರೀರಾಮ ಸೇನೆಯ ಮುಖ್ಯಸ್ಥ ಪ್ರಮೋದ್ ಮುತಾಲಿಕ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಧಾರವಾಡದಲ್ಲಿ ಸುದ್ದಿಗಾರರ ಜೊತೆಗೆ ಮಾತನಾಡಿದ ಅವರು, ಇಂತಹ ಉಗ್ರರನ್ನೇ ಪೋಷಣೆ ಮಾಡುತ್ತ ಬಂದಿದ್ದಾರೆ. ಬೆಂಗಳೂರಿನಲ್ಲಿ ಶಂಕಿತ ಉಗ್ರರ ಬಂಧನ ಅತ್ಯಂತ ಕೆಟ್ಟ ವಿಚಾರವಾಗಿದ್ದು, ಸಿಸಿಬಿ ಪೊಲೀಸರು ಶಂಕಿತ ಉಗ್ರರನ್ನು ಬಂಧಿಸಿದ್ದಾರೆ. ನಾನು ಈ ಬಗ್ಗೆ ಮಾಹಿತಿ ಪಡೆದುಕೊಂಡೆ. ಅವರ ಬಳಿ ಜೀವಂತ ಬಾಂಬ್ ಸೇರಿ ಅನೇಕ ವಸ್ತುಗಳು ಸಿಕ್ಕಿವೆ ಎಂದು ಹೇಳಿದರು.

ಸುಲ್ತಾನಪಾಳ್ಯದಲ್ಲಿ ಇವರು ವಾಸವಾಗಿದ್ದರು ಎನ್ನಲಾಗಿದೆ. ಇವರ ಜೊತೆಗೆ ಇಬ್ಬರು ಮಹಿಳೆಯರ ಉಲ್ಲೇಖವೂ ಆಗಿದೆ. ಕರ್ನಾಟಕದಲ್ಲಿ ಕಾಂಗ್ರೆಸ್ ಸರ್ಕಾರ ಬಂದ ಮೇಲೆ ಈ ರೀತಿ ಕೆಟ್ಟ ಹುಳುಗಳು ಹೊರ ಬರುತ್ತಿವೆ. ಹಾವು, ಚೇಳುಗಳು ಇವೆಲ್ಲವೂ ಹೊರಗೆ ಬರುತ್ತವೆ. ಈಗ ಇವರಿಗೆಲ್ಲ ಪೋಷಕ ಸ್ಥಾನದಲ್ಲಿ ಕಾಂಗ್ರೆಸ್ ಸರ್ಕಾರವಿದೆ ಎಂದು ಗಂಭೀರ ಸ್ವರೂಪದ ಆರೋಪ ಮಾಡಿದರು.

## ಹಾಕಿ, ಜಿಮ್ನಾಸ್ಟಿಕ್ಸ್ ಹೈ ಪರ್ಫಾರ್ಮೆನ್ಸ್ ಸೆಂಟರ್ ಉದ್ಘಾಟಿಸಿದ ಸಿಎಂ ನವೀನ್ ಪಟ್ನಾಯಕ್



■ವಿಜಯಸಾಕ್ಷಿ ಸುದ್ದಿ, ಒಡಿಶಾ

ಮುಖ್ಯಮಂತ್ರಿ ನವೀನ್ ಪಟ್ನಾಯಕ್ ಅವರು ಬುಧವಾರ ಕಳಿಂಗ ಸ್ಟೇಡಿಯಂನಲ್ಲಿ ಜಿಮ್ನಾಸ್ಟಿಕ್ಸ್ ಹೈ ಪರ್ಫಾರ್ಮೆನ್ಸ್ ಸೆಂಟರ್ ಮತ್ತು ಹೊಸ ಹಾಕಿ ಹೈ ಪರ್ಫಾರ್ಮೆನ್ಸ್ ಸೆಂಟರ್ ಅನ್ನು ಉದ್ಘಾಟಿಸಿದರು.

ಜಿಮ್ನಾಸ್ಟಿಕ್ಸ್ ಹೈ ಪರ್ಫಾರ್ಮೆನ್ಸ್ ಸೆಂಟರ್, ಆರ್ಸೆಲರ್ ಮಿತ್ತಲ್ ನಿಪ್ಪಾನ್ ಸ್ಟೀಲ್ ಇಂಡಿಯಾ ಜೊತೆಗಿನ ಜಂಟಿ ಉಪಕ್ರಮವಾಗಿದ್ದು, ಹಾಕಿ ಹೈ ಪರ್ಫಾರ್ಮೆನ್ಸ್ ಸೆಂಟರ್ ಟಾಟಾ ಸ್ಟೀಲ್ ಮತ್ತು ಟಾಟಾ ಟ್ರಸ್ಟ್‌ಗಳ ಸಹಭಾಗಿತ್ವದಲ್ಲಿದೆ. ಈ ಸಂದರ್ಭದಲ್ಲಿ ಮುಖ್ಯಮಂತ್ರಿಗಳು ಒಡಿಯಾ ಜಿಮ್ನಾಸ್ಟ್‌ಗಳಾದ ರಾಕೇಶ್ ಪಾತ್ರ ಮತ್ತು ತಪನ್ ಮೊಹಂತಿ ಅವರಿಗೆ ಮುಂಬರುವ ಏಷ್ಯನ್ ಗೇಮ್ಸ್ 2023ಕ್ಕೆ ಅರ್ಹತೆಗಾಗಿ 10 ಲಕ್ಷ ರೂಪಾಯಿಗಳ ಚೆಕ್ ನೀಡಿದರು.

ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ನವೀನ್ ಪಟ್ನಾಯಕ್, "ಒಡಿಶಾ ಕ್ರೀಡಾ ಶ್ರೇಷ್ಠತೆಗಾಗಿ ಪಾಲುದಾರಿಕೆ ಮಾದರಿಯನ್ನು ಅನುಸರಿಸುತ್ತದೆ. ಹೊಸ ಹಾಕಿ ಹೈ ಪರ್ಫಾರ್ಮೆನ್ಸ್ ಸೆಂಟರ್ ಮತ್ತು ಜಿಮ್ನಾಸ್ಟಿಕ್ ಹೈ ಪರ್ಫಾರ್ಮೆನ್ಸ್ ಸೆಂಟರ್ ಉದ್ಘಾಟನೆಯೊಂದಿಗೆ, ಒಡಿಶಾದ ಕ್ರೀಡಾ ಪರಿಸರ ವ್ಯವಸ್ಥೆಯು ಇನ್ನಷ್ಟು ಸದೃಢವಾಗಿದೆ. ರಾಷ್ಟ್ರೀಯ ಮತ್ತು ಅಂತರಾಷ್ಟ್ರೀಯ ಸ್ಪರ್ಧೆಗಳಲ್ಲಿ ಸ್ಪರ್ಧಿಸಲು ಮತ್ತು ಮಿಂಚಲು ಕ್ರೀಡಾಪಟುಗಳ ಸಾಮರ್ಥ್ಯವನ್ನು ಹೆಚ್ಚಿಸುತ್ತದೆ. ಈ ಹೊಸ ಕೇಂದ್ರಗಳು ಪ್ರತಿಭೆಗಳನ್ನು ಕಂಡು ಹಿಡಿಯುವಲ್ಲಿ ಮತ್ತು ಸಂಭಾವ್ಯ ಪದಕ ವಿಜೇತ ಕ್ರೀಡಾಪಟುಗಳನ್ನು ಪೋಷಿಸುವಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತವೆ" ಎಂದರು.

ಜಿಮ್ನಾಸ್ಟಿಕ್ಸ್ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು ಒತ್ತು: ಜಿಮ್ನಾಸ್ಟಿಕ್ಸ್ ಹೈ ಪರ್ಫಾರ್ಮೆನ್ಸ್ ಸೆಂಟರ್ ಅನ್ನು ಭಾರತದ ಜಿಮ್ನಾಸ್ಟ್‌ಗಳಿಗೆ ಅರ್ಪಿಸಿದ ಮುಖ್ಯಮಂತ್ರಿ, "ಜಿಮ್ನಾಸ್ಟಿಕ್ಸ್ ಅಭಿವೃದ್ಧಿಗೆ ಒಡಿಶಾ ಬದ್ಧವಾಗಿದೆ. ಜಿಮ್ನಾಸ್ಟಿಕ್ಸ್ ಅಭಿವೃದ್ಧಿಯತ್ತ ನಮ್ಮ ರಾಜ್ಯ ಮತ್ತು ಎಎಂ, ಎನ್‌ಎಸ್ ಭಾರತ ಒಟ್ಟಾಗಿರುವುದನ್ನು ನೋಡಲು ನನಗೆ ಸಂತೋಷವಾಗಿದೆ. ಈ ಪಾಲುದಾರಿಕೆಯು ದೇಶದಲ್ಲಿ ರೋಮಾಂಚಕ ಜಿಮ್ನಾಸ್ಟಿಕ್ಸ್ ಪರಿಸರ ವ್ಯವಸ್ಥೆಯನ್ನು ನಿರ್ಮಿಸಲು, ಭವಿಷ್ಯಕ್ಕಾಗಿ ಯುವ ಪ್ರತಿಭೆಗಳನ್ನು ಗುರುತಿಸಲು ಮತ್ತು ಪೋಷಿಸಲು ಸಹಾಯ ಮಾಡುತ್ತದೆ.

ಇಂದು 'ವಿಶ್ವ ಚೆಸ್ ದಿನ'ದ ನಿಮಿತ್ತ ವಿಶೇಷ ಲೇಖನ

# ವಿಶ್ವಕ್ಕೆ ಭಾರತದ ಬೌದ್ಧಿಕ ಶ್ರೇಷ್ಠತೆಯ ಕೊಡುಗೆ



ಬುದ್ಧಿವಂತಿಕೆಯ ಆಟ, ಬುದ್ಧಿವಂತರ ಆಟ ಹಾಗೂ ಬುದ್ಧಿವಂತರ ನೆಲವಾದ ಭಾರತವು ಜಗತ್ತಿಗೆ ನೀಡಿದ ಅತ್ಯಮೂಲ್ಯ ಕೊಡುಗೆಯಾದ ಚದುರಂಗ ಆಟದ ಮಹತ್ವ ಸಾರುವ ದಿನವಾಗಿ ಚೆಸ್ ದಿನವನ್ನಾಗಿ ಜುಲೈ 20ನ್ನು ಇಡೀ ಜಗತ್ತು ಆಚರಿಸುತ್ತಿದೆ. ಈ ದಿನವನ್ನು ಅಂತಾರಾಷ್ಟ್ರೀಯ ಚೆಸ್ ದಿನವನ್ನಾಗಿ ಆಚರಿಸುವ ಕಲ್ಪನೆಯನ್ನು ಯುನೆಸ್ಕೋ ಪ್ರಸ್ತಾಪಿಸಿ 1966ರಿಂದ ಆಚರಿಸಲಾಗುತ್ತಿದೆ. 1924ರಲ್ಲಿ ಪ್ಯಾರಿಸ್‌ನಲ್ಲಿ ಅಂತಾರರಾಷ್ಟ್ರೀಯ ಚೆಸ್ ಫೆಡರೇಶನ್ ಸ್ಥಾಪನೆಯಾದ ಈ ದಿನವನ್ನೇ 12 ವಿಶ್ವ ಚೆಸ್ ದಿನವಾಗಿ ಪ್ರಕಟಿಸಲಾಯಿತು.

ಇತ್ತೀಚಿನ ದಿನಗಳಲ್ಲಿ ಚೆಸ್ ನಿಜವಾದ ಜಾಗತಿಕ ಕ್ರೀಡೆಯಾಗಿ ಬೆಳೆದು ನಿಂತಿದೆ. ಜಗತ್ತಿನ ಎಲ್ಲಾ ಖಂಡಗಳಲ್ಲಿ ಮಿಲಿಯನ್‌ಗಟ್ಟಲೆ ಆಟಗಾರರನ್ನು ಹೊಂದಿದೆ. ಇನ್ನೂ ವಿಶೇಷವೆಂದರೆ, ಪ್ರತಿದಿನ ಸರಾಸರಿ 60 ಮಿಲಿಯನ್ ಆಟಗಳನ್ನು ಆಡಲಾಗುತ್ತದೆ ಎಂದಾದರೆ, ಚೆಸ್ ಆಟದ ಜನಪ್ರಿಯತೆಯನ್ನು ಊಹಿಸಬಹುದು. ಚೆಸ್ ಇಬ್ಬರು ಆಟಗಾರರು ತಂತ್ರಗಾರಿಕೆಯ ಮೂಲಕ ಆಡುವ ಬೌದ್ಧಿಕ ಚಾಣಾಕ್ಷತೆಯ ಆಟ. ಆರಂಭದಿಂದ ಇಂದಿನವರೆಗೆ ಈ ಆಟದಲ್ಲಿ 2 ಸಾವಿರಕ್ಕೂ ಹೆಚ್ಚು ಗುರುತಿಸಬಹುದಾದ ರೂಪಾಂತರನ್ನು ನಾವು ಕಾಣಬಹುದು.

ಭಾರತದ ಬಹುತೇಕ ಪುರಾಣ–ಇತಿಹಾಸಗಳಲ್ಲಿ ಚದುರಂಗದ ಉಲ್ಲೇಖವಿದೆ. ಚತುರಂಗ ಎಂದು ಕರೆಯಲ್ಪಡುವ ಚದುರಂಗದಂತಹ ಆರಂಭಿಕ ಆಟವು ಉತ್ತರ ಭಾರತದಲ್ಲಿ ಗುಪ್ತರ ಅವಧಿಯಲ್ಲಿ ಕ್ರಿ.ಶ 319–ಕ್ರಿ.ಶ 543ರ ಅವಧಿಯಲ್ಲಿ ಹುಟ್ಟಿಕೊಂಡಿತು. ನಂತರ ಪಶ್ಚಿಮಕ್ಕೆ ಪರ್ಷಿಯಾವರೆಗೆ ಹರಡಿತು ಎಂಬುದು ಒಂದು ಸಿದ್ಧಾಂತ.

ವಿಶ್ವನಾಥನ್ ಆನಂದ್ ಭಾರತೀಯ ಚೆಸ್ ಗ್ರ್ಯಾಂಡ್ ಮಾಸ್ಟರ್ ಮತ್ತು ಮಾಜಿ ವಿಶ್ವ ಚೆಸ್ ಚಾಂಪಿಯನ್. ವಿಶ್ವನಾಥನ್ ಆನಂದ್ ಅವರು 1988ರಲ್ಲಿ ಭಾರತದ ಮೊದಲ ಗ್ರ್ಯಾಂಡ್ ಮಾಸ್ಟರ್ ಆದರು. 2000ರಿಂದ 2002ರವರೆಗೆ FIDE ವಿಶ್ವ ಚೆಸ್ ಚಾಂಪಿಯನ್‌ಶಿಪ್ ಅನ್ನು ನಡೆಸಲಾಯಿತು. ಅವರು ಭಾರತದಲ್ಲಿ ಚೆಸ್‌ನ ಸಂಪೂರ್ಣ ಸನ್ನಿವೇಶವನ್ನು ಬದಲಾಯಿಸುವಲ್ಲಿ ಕೊಡುಗೆ ನೀಡಿದ್ದಾರೆ. ಆನಂದ್ ಚೆಸ್‌ನ ಎಲ್ಲಾ ಮೂರು ಮಾದರಿಗಳಲ್ಲಿ ವಿಶ್ವ ಚಾಂಪಿಯನ್‌ಶಿಪ್ ಗೆದ್ದು ಭಾರತಕ್ಕೆ ಕೀರ್ತಿ ತಂದಿದ್ದಾರೆ. ಇದುವರೆಗೆ ವಿಶ್ವದ ಯಾವುದೇ ಚೆಸ್ ಆಟಗಾರರು ಈ ಸಾಧನೆ ಮಾಡಿಲ್ಲ.

ಪ್ರವೀಣ್ ಮಹದೇವ್ ಥಿಪ್ಸೆ ಭಾರತೀಯ ಚೆಸ್ ಗ್ರ್ಯಾಂಡ್ ಮಾಸ್ಟರ್. ಅವರು 1982, 1984, 1985, 1989, 1992, 1993 ಮತ್ತು 1994ರಲ್ಲಿ ಭಾರತೀಯ ಚೆಸ್ ಚಾಂಪಿಯನ್‌ಶಿಪ್ ಗೆದ್ದರು. ಆರ್ ಕೃಷ್ಣನ್ 1994ರ ಚೆಸ್ ಒಲಿಂಪಿಯಾಡ್‌ಗಳಲ್ಲಿ ಭಾರತಕ್ಕಾಗಿ ಆಡಿದರು. ಪೆಂಟಾಲ್ ಹರಿಕೃಷ್ಣ ಅವರು ಆಂಧ್ರಪ್ರದೇಶದ ಗುಂಟೂರು ಜಿಲ್ಲೆಯ ಚೆಸ್ ಗ್ರ್ಯಾಂಡ್‌ಮಾಸ್ಟರ್. ಅವರು ಸೆಪ್ಟೆಂಬರ್ 12, 2001ರಂದು ಭಾರತದ ಅತ್ಯಂತ ಕಿರಿಯ ಗ್ರ್ಯಾಂಡ್ ಮಾಸ್ಟರ್ ಆದವರು. ಇದು ಈಗ ಪರಿಮಾರ್ಜನ್ ನೇಗಿ ಅವರ ಹೆಸರಿನಲ್ಲಿದೆ. ಅವರು 2001ರಲ್ಲಿ ಕಾಮನ್‌ವೆಲ್ತ್ ಚಾಂಪಿಯನ್, 2004ರಲ್ಲಿ ವಿಶ್ವ ಜೂನಿಯರ್ ಚಾಂಪಿಯನ್ ಮತ್ತು 2011ರಲ್ಲಿ ಏಷ್ಯನ್ ವೈಯಕ್ತಿಕ ಚಾಂಪಿಯನ್ ಆಗಿದ್ದರು.

ಅಭಿಜಿತ್ ಕುಂಟೆ ಅವರು ಭಾರತೀಯ ಚೆಸ್ ಚಾಂಪಿಯನ್‌ಶಿಪ್‌ನಲ್ಲಿ ಅನೇಕ ಬಾರಿ ಭಾಗವಹಿಸಿದ್ದಾರೆ. ಎರಡು ಚಿನ್ನದ ಪದಕಗಳನ್ನು (1997, 2000) ಮತ್ತು ನಾಲ್ಕು ಕಂಚಿನ ಪದಕಗಳನ್ನು (1999, 2001, 2003, 2005) ಗೆದ್ದಿದ್ದಾರೆ. ಹಂಪಿ ಕೊನೇರು ವಿಜಯವಾಡದಿಂದ ಬಂದವರು. ಅವರು ಕೂಡ ಭಾರತೀಯ ಚೆಸ್ ಗ್ರ್ಯಾಂಡ್ ಮಾಸ್ಟರ್ ಆಗಿದ್ದಾರೆ. ಸೂರ್ಯ ಶೇಖರ್ ಗಂಗೂಲಿ 2009ರ ಏಷ್ಯನ್ ಕೌನ್ ಮತ್ತು ಆರು ಬಾರಿ ಭಾರತೀಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದವರು.

ಚೆಸ್ ಒಬ್ಬ ವ್ಯಕ್ತಿಯ ಜೀವನದ ಯಾವುದೇ ಹಂತದ ಯಶಸ್ಸಿಗೆ ಕೌಶಲ್ಯಗಳನ್ನು ನಿರ್ಮಿಸಲು ಸಶಕ್ತವಾಗಿದೆ. ವರ್ಲ್ಡ್ ಎಕನಾಮಿಕ್ ಫೋರಮ್ ಪ್ರಕಾರ, ಭವಿಷ್ಯಕ್ಕಾಗಿ ಟಾಪ್ 10 ಉದ್ಯೋಗ ಕೌಶಲ್ಯಗಳಲ್ಲಿ ವಿಶ್ಲೇಷಣಾತ್ಮಕ ಚಿಂತನೆ, ಸಂಕೀರ್ಣ ಸಮಸ್ಯೆ–ಪರಿಹಾರ, ಸಕ್ರಿಯ ಕಲಿಕೆ, ಕೌಶಲ್ಯ ಮತ್ತು ಉಪಕ್ರಮ, ವಿಮರ್ಶಾತ್ಮಕ ಚಿಂತನೆ ಮತ್ತು ಸ್ಥಿತಿಸ್ಥಾಪಕತ್ವ, ಒತ್ತಡ ಸಹಿಷ್ಣುತೆ ಇವುಗಳೆಲ್ಲವನ್ನೂ ಯುವಕರಲ್ಲಿ ಚದುರಂಗದ ಆಟದ ಕೌಶಲ್ಯಗಳ ಮೂಲಕ ಬೆಳೆಸಬಹುದು. ಚೆಸ್ ಮಾನಸಿಕ ಸಾಮರ್ಥ್ಯವನ್ನು ತೀಕ್ಷ್ಣಗೊಳಿಸಲು ಸಹಾಯ ಮಾಡುತ್ತದೆ.

ಗಣಿತ ಮತ್ತು ಚೆಸ್ ನಡುವೆ ಬಲವಾದ ಸಂಬಂಧವಿದೆ. ಜರ್ಮನಿಯ ಇಮ್ಯಾನುಯೆಲ್ ಲಾಸ್ಕರ್ ಮತ್ತು ನೆದರ್‌ಲ್ಯಾಂಡ್‌ನ ಮ್ಯಾಚ್‌ಗಿಲಿಸ್ ಎಂಬ ಇಬ್ಬರು ಮಾಜಿ ವಿಶ್ವ ಚೆಸ್ ಸ್ಪರ್ಧಿಗಳು, ಗಣಿತ ಮತ್ತು ಚೆಸ್ ಎರಡರಲ್ಲೂ ದೊಡ್ಡ ಪ್ರಯೋಜನಗಳ ಗುರುತು ಸಾಮ್ಯತೆ ಗಮನಿಸಿದ್ದಾರೆ. ನಮ್ಮ ದಾರಿಯಲ್ಲಿ ಬರುವ ಯಾವುದೇ ಅಡೆತಡೆಗಳನ್ನು ನಿಭಾಯಿಸಲು ನಮಗೆ ಸಹಾಯ ಮಾಡುವ ಶಕ್ತಿಗಳನ್ನು ಚೆಸ್ ನೀಡುತ್ತದೆ. ಹೀಗೆ ಭಾರತದ ಪವಿತ್ರ ನೆಲದಲ್ಲಿ ಅವಿರ್ಭವಿಸಿದ ಹಲವಾರು ಶ್ರೇಷ್ಠತೆಗಳಲ್ಲಿ ಒಂದಾದ ಚದುರಂಗ ಪ್ರಪಂಚದ 199 ರಾಷ್ಟ್ರಗಳನ್ನು ವ್ಯಾಪಿಸಿದೆ ಎಂಬುದೇ ನಮ್ಮೆಲ್ಲರ ಹೆಮ್ಮೆ.



– ಈಶ್ವರ ಎಸ್ ಮೆಡ್ಲೇರಿ.
ಅಧ್ಯಕ್ಷರು ಕಸಾಪ–ಲಕ್ಷ್ಮೇಶ್ವರ.

## ಶ್ರೀ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳ ಮೌನ ಶಿವಾನುಷ್ಠಾನ



■ವಿಜಯಸಾಕ್ಷಿ ಸುದ್ದಿ, ಸೊರಬ

ತಾಲೂಕಿನ ದುಗ್ಲಿ ಸುಕ್ಷೇತ್ರದ ಶ್ರೀಮದ್ ರಂಭಾಪುರಿ ಶಾಖಾ ಶ್ರೀ ಗುರು ರೇವಣಸಿದ್ಧೇಶ್ವರ ಮಠದಲ್ಲಿ ಲೋಕ ಕಲ್ಯಾಣಾರ್ಥವಾಗಿ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಅಧಿಕ ಶ್ರಾವಣ ಮಾಸದ ನಿಮಿತ್ತ ಜುಲೈ 21, ಶುಕ್ರವಾರದಿಂದ 29ರ ಶನಿವಾರದವರೆಗೆ ಒಂಬತ್ತು ದಿನಗಳ ಮೌನ ಶಿವಾನುಷ್ಠಾನವನ್ನು ಆಚರಿಸುವರು.

ಜುಲೈ 30, ಭಾನುವಾರ ಬ್ರಾಹ್ಮೀ ಮುಹೂರ್ತದಲ್ಲಿ ಹರ–ಗುರು–ಚರಮೂರ್ತಿಗಳ ನೇತೃತ್ವದಲ್ಲಿ ಶ್ರೀ ಜಗದ್ಗುರು ರೇಣುಕಾಚಾರ್ಯರಿಗೆ, ಶಕ್ತಿಮಾತೆ ಶ್ರೀ ಚೌಡೇಶ್ವರಿ ದೇವಿಗೆ, ಲಿಂ. ಶ್ರೀ ಮುರುಘೇಂದ್ರ ಸ್ವಾಮಿಗಳವರ ಗದ್ದುಗೆಗೆ ಮಹಾರುದ್ರಾಭಿಷೇಕ, ಶಿವಾಷ್ಟೋತ್ತರ, ಮಹಾಮಂಗಳಾರತಿ ಪೂಜೆ ನೆರವೇರಿಸುವರು. ಶಿವಪಂಚಾಕ್ಷರಿ ಹೋಮ–ಪೂರ್ಣಾಹುತಿ ನಂತರ ರೇವಣಸಿದ್ಧೇಶ್ವರ ಶಿವಾಚಾರ್ಯ ಸ್ವಾಮಿಗಳು ಕ್ರಿಯಾ ಪಾದೋದಕ ಪ್ರಸಾದ ಸ್ವೀಕರಿಸುವ ಮೂಲಕ ಶಿವಾನುಷ್ಠಾನ ಮಂಗಲಗೊಳಿಸುವರು.

ಶ್ರೀಗಳವರು ಒಂಭತ್ತು ದಿನಗಳ ಶಿವಾನುಷ್ಠಾನ ಕೈಗೊಂಡ ಸಂದರ್ಭದಲ್ಲಿ ಭಕ್ತರಿಗೆ ದರ್ಶನಕ್ಕೆ ಅವಕಾಶ ಇರುವುದಿಲ್ಲ. ಅನುಷ್ಠಾನ ಮಂಗಲದ ನಂತರ ಶ್ರೀಗಳವರ ದರ್ಶನಾಶೀರ್ವಾದ ಪಡೆಯಬಹುದು. ಈ ಕಾರ್ಯದಲ್ಲಿ ಸಮಸ್ತ ಜನತೆ ಆಗಮಿಸಿ ಗುರುಕೃಪೆಗೆ ಪಾತ್ರರಾಗಬೇಕೆಂದು ದುಗ್ಲಿ ಗ್ರಾಮದ ಅಭಿವೃದ್ಧಿ ಸಮಿತಿ ಹಾಗೂ ಶ್ರೀ ಜಗದ್ಗುರು ರೇವಣಸಿದ್ಧೇಶ್ವರ ಜಾತ್ರಾ ಮಹೋತ್ಸವ ಸೇವಾ ಸಮಿತಿಯವರು ವಿನಂತಿಸಿದ್ದಾರೆ.

## 'ಅಸಮಾಧಾನ' ವರದಿ ತಿರಸ್ಕರಿಸಿದ ನಿತೀಶ್ ಕುಮಾರ್



■ವಿಜಯಸಾಕ್ಷಿ ಸುದ್ದಿ, ಪಾಟ್ನಾ

ಕರ್ನಾಟಕ ರಾಜಧಾನಿ ಬೆಂಗಳೂರಿನಲ್ಲಿ ನಡೆದ ವಿಪಕ್ಷಗಳ ಸಭೆಯಲ್ಲಿ ತಮಗೆ ಅಸಮಾಧಾನವಿದೆ ಎಂಬ ಮಾಧ್ಯಮಗಳ ವರದಿಯನ್ನು ಬಿಹಾರ ಮುಖ್ಯಮಂತ್ರಿ ಮತ್ತು ಜೆಡಿಯು ಮುಖ್ಯಸ್ಥ ನಿತೀಶ್ ಕುಮಾರ್ ತಳ್ಳಿ ಹಾಕಿದ್ದಾರೆ.

ಬೆಂಗಳೂರಿನಲ್ಲಿ ನಡೆದ ಪ್ರತಿಪಕ್ಷಗಳ ಸಮಾವೇಶದ ಸಭೆ ಬಳಿಕ ನಡೆದ ಸುದ್ದಿಗೋಷ್ಠಿಗೆ ಗೈರಾಗಿದ್ದ ವಿಚಾರವಾಗಿ ಮಾಧ್ಯಮಗಳು ತಪ್ಪಾಗಿ ಅರ್ಥೈಸಿಕೊಂಡಿವೆ. ನನಗೆ ಯಾವುದೇ ರೀತಿಯ ಅಸಮಾಧಾನವಿಲ್ಲ. ನಾವೆಲ್ಲರೂ ಒಗ್ಗಾಟ್ಟಾಗಿದ್ದೇವೆ.. ಒಗ್ಗೂಡಿ ಬಿಜೆಪಿಯನ್ನು ಎದುರಿಸುತ್ತೇವೆ. ರಾಜ್ ಗಿರ್ ನಲ್ಲಿ ಕಾರ್ಯಕ್ರಮ ಇದ್ದಿದ್ದರಿಂದ ನಾನು ಸುದ್ದಿಗೋಷ್ಠಿಗೆ ಗೈರಾಗಿದ್ದೆ ಎಂದು ನಿತೀಶ್ ಕುಮಾರ್ ಹೇಳಿದ್ದಾರೆ. ಇದೇ ವಿಚಾರವಾಗಿ ಮಾತನಾಡಿದ್ದ ಜೆಡಿಯು ಅಧ್ಯಕ್ಷ ರಾಜೀವ್ ರಂಜನ್ ಸಿಂಗ್ 'ಲಾಲನ್' ಅವರು ವಿರೋಧ ಪಕ್ಷದ ಸಭೆಯಲ್ಲಿ ವಿಷಯಗಳು ನಡೆದ ರೀತಿಯ ಬಗ್ಗೆ ನಿತೀಶ್ ಅಸಮಾಧಾನಗೊಂಡಿದ್ದಾರೆ ಎಂಬ ಸುದ್ದಿಗಳು ಸತ್ಯಕ್ಕೆ ದೂರವಾದದ್ದು ಎಂದು ಹೇಳಿದ್ದರು. ಪಾಟ್ನಾದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಭಾರತೀಯ ಜನತಾ ಪಕ್ಷದ ನೇತೃತ್ವದ ರಾಷ್ಟ್ರೀಯ ಪ್ರಜಾಸತ್ತಾತ್ಮಕ ಒಕ್ಕೂಟದ 'ದುಷ್ಪಚಾರ' (ಕ್ಯಾನಾರ್ಡ್) ಎಂದು ಬಣ್ಣಿಸಿದರು.

ದೇಶದ ಗೌರವಾನ್ವಿತ ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಎನ್‌ಡಿಎಯ ಕಡೆಯಿಂದ ಇದೆಲ್ಲವೂ ದುಷ್ಪಚಾರ ಮತ್ತು ವದಂತಿಗಳಷ್ಟೇ. ಇಂಡಿಯಾ ಎಂಬ ಹೆಸರು ಪ್ರತಿಪಕ್ಷ ಸಭೆಯಲ್ಲಿ ಹಾಜರಿದ್ದ ಎಲ್ಲಾ ನಾಯಕರಿಂದ ಅನುಮೋದನೆಯ ಮುದ್ರೆಯನ್ನು ಹೊಂದಿತ್ತು ಎಂದು ಲಾಲನ್ ಹೇಳಿದರು.

ನಿತೀಶ್ ಕುಮಾರ್ ಅವರನ್ನು ಸಂಚಾಲಕರನ್ನಾಗಿ ಮಾಡಲಾಗುತ್ತದೆ ಎಂಬ ಊಹಾಪೋಹಗಳ ಬಗ್ಗೆ ಮಾತನಾಡಿದ ಜೆಡಿಯು ಮುಖ್ಯಸ್ಥರು, "ಇದು ನಿನ್ನೆಯ ಸಭೆಯ ಅಜೆಂಡಾದಲ್ಲಿ ಇರಲಿಲ್ಲ, ಮುಂಬೈನಲ್ಲಿ ಮುಂದಿನ ಸಭೆ ಯಾವಾಗ ನಡೆಯಲಿದೆ ಎಂದು ಯೋಚಿಸಬಹುದು" ಎಂದು ಹೇಳಿದರು.

## ವಿಧಾನಸಭೆ: 10 ಬಿಜೆಪಿ ಸದಸ್ಯರ ಅಮಾನತು



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕರ್ನಾಟಕ ವಿಧಾನಸಭೆಯಲ್ಲಿ ಹೈಡ್ರಾಮಾ ನಡೆದಿದ್ದು, ಉಪ ಸಭಾಪತಿ ಮೇಲೆ ಕಾಗದ ಪತ್ರ ಎಸೆದು ಸ್ಪೀಕರ್ ಸ್ಥಾನಕ್ಕೆ ಅಗೌರವ ತೋರಿದ ಹಿನ್ನಲೆಯಲ್ಲಿ ಬಿಜೆಪಿಯ 10 ಸದಸ್ಯರನ್ನು ಹಾಲಿ ಅಧಿವೇಶನದಿಂದ ಅಮಾನತುಗೊಳಿಸಲಾಗಿದೆ.

ಹೌದು.. ಸದನದಲ್ಲಿ ಅಗೌರವ ತೋರಿದ 10 ಬಿಜೆಪಿ ಶಾಸಕರನ್ನು ಅಮಾನತು ಮಾಡಲಾಗಿದೆ. ಬಿಜೆಪಿಯ ಡಾ.ಅಶ್ವತ್ಥ್ ನಾರಾಯಣ, ವೇದವ್ಯಾಸ ಕಾಮತ್, ಅರವಿಂದ ಬೆಲ್ಲದ್, ಧೀರಜ್ ಮುನಿರಾಜು, ಯಶಪಾಲ್ ಸುವರ್ಣ, ಸುನೀಲ್ ಕುಮಾರ್, ಆರ್.ಅಶೋಕ್, ಉಮಾನಾಥ್ ಕೋಟ್ಯಾನ್, ಆರಗ ಜ್ಞಾನೇಂದ್ರ, ಮತ್ತು ಭರತ್ ಶೆಟ್ಟಿ ಅವರನ್ನು ಸ್ಪೀಕರ್ ಯುಟಿ ಖಾದರ್ ಅವರು ಅಮಾನತು ಮಾಡಿದ್ದಾರೆ. ಈ 10 ಸದಸ್ಯರನ್ನು ಈ ಅಧಿವೇಶನ ಮುಗಿಯುವವರೆಗೂ ಅಮಾನತು ಮಾಡಲಾಗಿದೆ ಎಂದು ಸ್ಪೀಕರ್ ಯುಟಿ ಖಾದರ್ ತಿಳಿಸಿದ್ದಾರೆ.

ಕಲಾಪದ ವೇಳೆ ಬಿಜೆಪಿ ಸದಸ್ಯರಿಂದ ಡೆಪ್ಯುಟಿ ಸ್ಪೀಕರ್ ಮೇಲೆ ಕಾಗದ ಪತ್ರ ಎಸೆಯಲಾಗಿದ್ದು, ಈ ಸಂಬಂಧ ಸ್ಪೀಕರ್ ಯುಟಿ ಖಾದರ್ ಅವರಿಗೆ ಬಿಜೆಪಿ ಶಾಸಕರ ವಿರುದ್ಧ ಕಾಂಗ್ರೆಸ್ ಸದಸ್ಯರು ದೂರು ನೀಡಿದ್ದಾರೆ. ಇದೀಗ ಈ ದೂರಿನ ಅಧಾರದ ಮೇಲೆ ಸ್ಪೀಕರ್ ಸ್ಥಾನಕ್ಕೆ ಅಗೌರವ ತೋರಿ, ಸದನದಲ್ಲಿ ಅಸಭ್ಯವಾಗಿ ವರ್ತಿಸಿದ್ದಾರೆ ಎಂದು ಆರೋಪಿಸಿ ಕ್ರಮ ಕೈಗೊಂಡಿರುವ ಸ್ಪೀಕರ್ ಯುಟಿ ಖಾದರ್ ಅವರು ಬಿಜೆಪಿಯ 10 ಸದಸ್ಯರನ್ನು ಅಮಾನತು ಮಾಡಿದ್ದಾರೆ.

### ಇಷ್ಟಕ್ಕೂ ಅಗಿದ್ದೇನು?

ಈ ಹಿಂದೆ ಬೆಂಗಳೂರಿನಲ್ಲಿ ನಡೆದ ಎರಡು ದಿನಗಳ ಪ್ರತಿಪಕ್ಷ ನಾಯಕರ ಸಭೆಗೆ ನಾಯಕರ ಆಹ್ವಾನಕ್ಕೆ ಐಎಎಸ್ ಅಧಿಕಾರಿಗಳನ್ನು ದುರುಪಯೋಗಪಡಿಸಿಕೊಂಡ ಆರೋಪದ ಮೇಲೆ ಕಾಂಗ್ರೆಸ್ ಸರ್ಕಾರದ ವಿರುದ್ಧ ಬಿಜೆಪಿ ಪ್ರತಿಭಟನೆ ನಡೆಸಿತ್ತು. ಈ ವೇಳೆ ಉಪ ಸಭಾಪತಿಗಳು ಭೋಜನ ವಿರಾಮವನ್ನೂ ನೀಡದೇ ಕಲಾಪ ಮುಂದುವರೆಸಿದ್ದರಿಂದ ಬಿಜೆಪಿ ಸದಸ್ಯರು ಇದಕ್ಕೆ ವಿರೋಧ ವ್ಯಕ್ತಪಡಿಸಿದರು.

## ವಿಧಾನಸಭೆ ಸ್ಪೀಕರ್ ವಿರುದ್ಧ ಜಂಟಿ ಅವಿಶ್ವಾಸ ನೋಟಿಸ್



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

10 ಬಿಜೆಪಿ ಸದಸ್ಯರನ್ನು ಅಧಿವೇಶನದಿಂದ ಅಮಾನತು ಮಾಡಿದ ಪ್ರಕರಣದ ಬೆನ್ನಲ್ಲೇ ಕರ್ನಾಟಕ ವಿಧಾನಸಭೆ ಸ್ಪೀಕರ್ ಯುಟಿ ಖಾದರ್ ವಿರುದ್ಧ ಪ್ರತಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ಶಾಸಕರು ಬುಧವಾರ ವಿಧಾನಸಭೆ ಕಾರ್ಯದರ್ಶಿಗೆ ಜಂಟಿ ಅವಿಶ್ವಾಸ ನೋಟಿಸ್ ನೀಡಿದ್ದಾರೆ.

ತಾಜ್ ವೆಸ್ಟೆಂಡ್ ಹೋಟೆಲ್ ನಲ್ಲಿ ನಿನ್ನೆ ಪ್ರತಿಪಕ್ಷಗಳ ಸಭೆ ವೇಳೆ ವಿಧಾನಸಭೆ ಸ್ಪೀಕರ್ ಯು.ಟಿ ಖಾದರ್ ಭೇಟಿ ನೀಡಿದ್ದನ್ನು ವಿರೋಧಿಸಿ ಅವರ ವಿರುದ್ಧ ಪ್ರತಿಪಕ್ಷ ಬಿಜೆಪಿ ಮತ್ತು ಜೆಡಿಎಸ್ ಅವಿಶ್ವಾಸ ನಿರ್ಣಯಕ್ಕೆ ನೋಟಿಸ್ ನೀಡಿವೆ. ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಹೆಚ್.ಡಿ ಕುಮಾರಸ್ವಾಮಿ ಸೇರಿದಂತೆ ಹಲವು ಬಿಜೆಪಿ ಮತ್ತು ಜೆಡಿಎಸ್ ಶಾಸಕರು ನೋಟಿಸ್‌ಗೆ ಸಹಿ ಹಾಕಿದ್ದಾರೆ ಎಂದು ತಿಳಿದುಬಂದಿದೆ.

"ಕರ್ನಾಟಕ ವಿಧಾನಸಭೆಯ ಎಲ್ಲಾ ಸದಸ್ಯರಿಂದ ಚುನಾಯಿತರಾಗಿರುವ ಸ್ಪೀಕರ್ ಅವರು ಸದನದ ವಿಶ್ವಾಸವನ್ನು ಕಳೆದುಕೊಂಡಿದ್ದಾರೆ, ಅವರನ್ನು ಸ್ಥಾನದಿಂದ ತೆಗೆದುಹಾಕಲು, ನಾವು ಕಾರ್ಯವಿಧಾನದ ನಿಯಮಗಳು ಮತ್ತು ನಿಯಮ 169 ರ ಪ್ರಕಾರ ಕರ್ನಾಟಕ ವಿಧಾನಸಭೆಯಲ್ಲಿ ವ್ಯವಹಾರ ನಡೆಸುವುದರ ವಿರುದ್ಧ ಪ್ರಸ್ತಾವನೆಯನ್ನು ಮಂಡಿಸಲು ಅವಕಾಶವನ್ನು ಕೋರುತ್ತೇವೆ ಎಂದು ನೋಟಿಸ್‌ನಲ್ಲಿ ಹೇಳಲಾಗಿದೆ.

### ಕವನ

## ಮಲೆನಾಡಿನ ಮಲ್ಲಿಗೆ ಹೂವು

ಮಲೆನಾಡಿನ ತಂಪಿನ ಈ ಮಲ್ಲಿಗೆ ಹೂವು
ನೋಡಲು ಬಲು ಗಮಲು ಈ ಹೂವು
ನಾಲ್ಕು ಗೋಡೆಗಳ ಮಧ್ಯ ಇದೆ ಈ ಸುಮವು
ದೂರದ ಊರಲ್ಲಿ ಈ ತಂಗಾಳಿಯ ಪರಿಮಳವು

ಯಾವ ಹೆಸರಿನಿಂದ ಕರೆಯಬೇಕು ನಿನ್ನ ಚೆಲುವೇ
ನಾನು ಏನೆಂದು ಹೊಗಳಬೇಕು ನಿನ್ನ ನನ್ನ ಒಲವೇ
ನಮ್ಮ ಮನೆಯ ಅಮ್ಮನ ಸೊಸೆಯಾದೇನು ಅಂದು
ಮನಕ್ಕೆ ಆನಂದ ಸಂತಸ ಸಂತೋಷವ ತಂದೆ ನೀ ಇಂದು.

ಒಮ್ಮೊಮ್ಮೆ ನಿನ್ನ ನೋಡಿದಾಗ ನನ್ನ ಮನಸ್ಸು ಮಿಂಚುತ್ತದೆ
ಒಮ್ಮೊಮ್ಮೆ ನಿನ್ನ ನೋಡಿದಾಗ ಮನಸ್ಸು ಖುಷಿಯಾಗುತ್ತದೆ
ಒಮ್ಮೊಮ್ಮೆ ನಿನ್ನ ನೋಡಿದಾಗ ನನಗೆ ಬಹಳ ಕೋಪ ಬರುತ್ತದೆ
ನಿನ್ನ ಪ್ರೀತಿಯಿಂದ ನೋಡುತ ಮುದ್ದಿಸಬೇಕೆಂದು ಎನಿಸುತ್ತದೆ.

– ಸಿ. ಆರ್. ಗಡಾದ ಗದಗ.



ಶ್ರೀ ಜಗದ್ಗುರು ಸಿದ್ಧರಾಮೇಶ್ವರ ಮಹಾಸಂಸ್ಥಾನ ಭೋವಿ ಗುರುಪೀಠದ ಪೀಠಾಧ್ಯಕ್ಷರಾದ ಜಗದ್ಗುರು ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿಗಳ ದಿವ್ಯ ಸಾನ್ನಿಧ್ಯದಲ್ಲಿ ಇತ್ತೀಚೆಗೆ ಜರುಗಿದ ಇಮ್ಮಡಿ ಸಿದ್ಧರಾಮೇಶ್ವರ ಸ್ವಾಮೀಜಿಗಳ ದೀಕ್ಷಾ ರಜತ ಮಹೋತ್ಸವ ಹಿನ್ನೆಲೆಯಲ್ಲಿ ನಡೆದ ರಾಜ್ಯಮಟ್ಟದ ಭೋವಿ ವಡ್ಡರ ಪ್ರತಿಭಾ ಪುರಸ್ಕಾರ, ವಧು ವರರ ಮತ್ತು ಪಾಲಕರ ಸಮಾವೇಶ ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷರು ಹಾಗೂ ಗದಗ ಜಿಲ್ಲಾ ಭೋವಿ ಸಮಾಜದ ಗೌರವಾಧ್ಯಕ್ಷ ರವಿ ಎಲ್ ಗುಂಜೀಕರ, ಸರಕಾರಿ ನೌಕರ ಸಂಘದ ಗೌರವಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ, ಗದಗ ಜಿಲ್ಲಾ ಭೋವಿ ಸಮಾಜದ ಅಧ್ಯಕ್ಷ ಎಚ್ ವೈ ಸಂದಕದ ಸೇರಿದಂತೆ ಹಲವರಿದ್ದರು.

ಜೀವಣ್ಣಗೌಡ–ಲೀಲಾತಾಯಿ ಪಾಟೀಲಕುಲಕರ್ಣಿ ದತ್ತಿ ಕಾರ್ಯಕ್ರಮದಲ್ಲಿ ಜಗದೀಶ ಶೆಟ್ಟರ ಅಭಿಪ್ರಾಯ

# ನಮ್ಮ ಪರಂಪರೆಯ ಪುನರಾವರ್ತನೆಯಾಗಬೇಕು



ಜೀವಣ್ಣಗೌಡ–ಲೀಲಾತಾಯಿ ದಂಪತಿಗಳ ಪುಟ್ಟ ಚರಿತ್ರೆ ಪುಸ್ತಕವಾಗಿದೆ. ಅವರು ಬಾಳಿ ಬದುಕಿದ ಹಾಗೂ ಸ್ವಾತಂತ್ರ್ಯ ಹೋರಾಟದಲ್ಲಿಯ ಅವರ ನೆನಪುಗಳನ್ನು ಹಾಗೂ ಸಕ್ರಿಯ ಪಾತ್ರವನ್ನು ಇಂದಿನ ಪೀಳಿಗೆಗೆ ಮನದಟ್ಟು ಮಾಡಿಕೊಡಬೇಕು ಎಂದರಲ್ಲದೆ, ಜೀವ–ಲೀಲಾ ಕೃತಿಯನ್ನು ಮುಕ್ತ ಕಂಠದಿಂದ ಹೊಗಳಿದ ಜಗದೀಶ ಶೆಟ್ಟರ, ಲೇಖಕಿ ಸರೋಜಾ ರಾಮರಾವ ಕುಲಕರ್ಣಿಯವರ ಪ್ರಯತ್ನವನ್ನು ಶ್ಲಾಘಿಸಿದರು.

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಆಧುನಿಕ ಯುಗದಲ್ಲಿ ಹೆಚ್ಚುತ್ತಿರುವ ವೃದ್ಧಾಶ್ರಮಗಳ ಶಮನಕ್ಕಾಗಿ ನಮ್ಮ ಹಿರಿಯರು ಹಾಕಿಕೊಟ್ಟ ಹಾದಿಯಲ್ಲಿ ನಡೆದು, ಸಂಸ್ಕೃತಿ, ಪರಂಪರೆಯ ಪುನರಾವರ್ತನೆ ಆಗಬೇಕಿದೆ ಎಂದು ವಿಧಾನ ಪರಿಷತ್ ಸದಸ್ಯ ಹಾಗೂ ಮಾಜಿ ಮುಖ್ಯಮಂತ್ರಿ ಜಗದೀಶ ಶೆಟ್ಟರ ಅಭಿಪ್ರಾಯಪಟ್ಟರು.

ಅವರು ಕರ್ನಾಟಕ ವಿದ್ಯಾವರ್ಧಕ ಸಂಘದಲ್ಲಿ ಜೀವಣ್ಣಗೌಡ–ಲೀಲಾತಾಯಿ ಪಾಟೀಲಕುಲಕರ್ಣಿ ದತ್ತಿ ಕಾರ್ಯಕ್ರಮದ ಅಂಗವಾಗಿ ಜೀವಣ್ಣಗೌಡರ 101ನೇ ಜಯಂತಿ ಆಚರಣೆಯ ಅಂಗವಾಗಿ ಹೊರತಂದ 'ಜೀವ–ಲೀಲಾ' ಪುಸ್ತಕ ಬಿಡುಗಡೆ ಮಾಡಿ ಮಾತನಾಡಿದರು.

ಶಿಕ್ಷಣ ಇಲಾಖೆಯ ನಿವೃತ್ತ ಜಂಟಿ ನಿರ್ದೇಶಕ ಶಿವಶಂಕರ ಹಿರೇಮಠ ಮಾತನಾಡಿ, ಜೀವಣ್ಣಗೌಡ ಮತ್ತು ಲೀಲಾತಾಯಿ ಅವರ ಬದುಕನ್ನು ಪ್ರತ್ಯಕ್ಷ ಕಂಡ ಹಾಗೂ ಅವರೊಂದಿಗಿನ ಅನುಭವಗಳನ್ನು ಹಂಚಿಕೊಂಡರು.

ಹಿರಿಯ ನಟ, ನಾಟಕಕಾರ ಡಾ. ಗೋವಿಂದ ಮಣ್ಣೂರ ಮಾತನಾಡಿ, ಜೀವ–ಲೀಲಾ ಪುಸ್ತಕ ಇಂದಿನ ಪೀಳಿಗೆಗೆ ಪ್ರೇರಕ ಶಕ್ತಿಯಾಗಿದೆ. ಅತ್ಯುತ್ತಮ ಚಲನಚಿತ್ರ ಆಗುವಲ್ಲಿ ಅರ್ಹತೆ ಪಡೆದಿದೆ ಎಂದು ವರ್ಣಿಸಿ, ಪುಸ್ತಕದಲ್ಲಿಯ ಕೆಲವು ಘಟನೆಗಳನ್ನು ನೆನೆದು ಭಾವುಕರಾದರು.

ಜೀವಣ್ಣಗೌಡರ ಹಿರಿಯ ಸಹೋದರ ಮತ್ತು ನಿವೃತ್ತ ಮುಖ್ಯೋಪಾಧ್ಯಾಯ ಕೆ ಬಿ ಪಾಟೀಲಕುಲಕರ್ಣಿ ಮಾತನಾಡಿ, ತಮ್ಮ ಅಣ್ಣ ಮತ್ತು ಅತ್ತಿಗೆಯವರ ಬದುಕನ್ನು ಸ್ಮರಿಸಿಕೊಂಡರು. ಅಧ್ಯಕ್ಷತೆಯನ್ನು ಚಂದ್ರಕಾಂತ ಬೆಲ್ಲದ ವಹಿಸಿದ್ದರು.

ಸಮಾರಂಭದಲ್ಲಿ ಕನ್ನಡದ ಪರಿಪೂರ್ಣ ಕಾರ್ಯಕರ್ತ ಎಂಬ ಗೌರವದೊಂದಿಗೆ ರಾಮದುರ್ಗ ತಾಲೂಕು ಸಾಲಹಳ್ಳಿ ಸುರೇಶ ದೇಸಾಯಿ ಅವರನ್ನು ದತ್ತಿಯ ಅಂಗವಾಗಿ ಸನ್ಮಾನಿಸಲಾಯಿತು. ಲೇಖಕಿ ಸರೋಜಾ ಕುಲಕರ್ಣಿಯವರನ್ನು ಜಗದೀಶ ಶೆಟ್ಟರ ಸನ್ಮಾನಿಸಿದರು. ಶಿವಾನಂದ ಭಾವಿಕಟ್ಟಿ ಸ್ವಾಗತಿಸಿದರು. ಶಂಕರ ಕುಂಬಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಮನೋಜ ಪಾಟೀಲ ಆಶಯ ಭಾಷಣ ಮಾಡಿದರು. ಶಂಕರ ಹಲಗತ್ತಿ ಸನ್ಮಾನ ಪತ್ರವನ್ನು ವಾಚಿಸಿದರು. ಗುರು ಹಿರೇಮಠ ಕಾರ್ಯಕ್ರಮ ನಿರೂಪಿಸಿದರು.

ಸಮಾರಂಭದಲ್ಲಿ ಬಸವಪ್ರಭು ಹೊಸಕೇರಿ, ಬಿ.ಎಲ್. ಪಾಟೀಲ. ಶ್ರೀಶೈಲ ಜತ್ತಿ, ಸಿ.ಎಸ್. ಪೊಲೀಸಪಾಟೀಲ, ಎಂ.ಬಿ. ಕಟ್ಟಿ, ಚನಬಸಪ್ಪ ಮರದ, ನಿಂಗಣ್ಣ ಕುಂಟಿ, ಚನಬಸಪ್ಪ ಕರಗಣ್ಣವರ, ಹರ್ಷ ಡಂಬಳ, ವಿಠ್ಠಲ ಕಮ್ಮಾರ, ದುಷ್ಯಂತ ನಾಡಗೌಡ, ನರಸಿಂಹ ಪರಾಂಜಪೆ, ಡಾ. ಲಿಂಗರಾಜ ಅಂಗಡಿ, ಡಾ. ಮಂದಾಕಿನಿ ಪುರೋಹಿತ, ಡಾ. ಬಸವರಾಜ ನಾಗೂರ, ಡಾ. ಶ್ರೀಶೈಲ ಮಾದಣ್ಣವರ, ಸದಾಶಿವ ಚೌಶೆಟ್ಟಿ, ಈರಣ್ಣ ಇಜಗಣ್ಣವರ, ನಾಗೇಶ ಕಲಬುರ್ಗಿ, ಡಾ. ಬಾಳಪ್ಪ ಚಿನಗುಡಿ, ಚಳ್ಳಮರದ ಶೇಖ್, ಮಹಾಂತೇಶ ನರೇಗಲ್ ಸೇರಿದಂತೆ ಪಾಟೀಲಕುಲಕರ್ಣಿ ಪರಿವಾರದವರು ಭಾಗವಹಿಸಿದ್ದರು.

## 6 ವರ್ಷದಲ್ಲಿ 13 ಕನ್ನಡ ಶಾಲೆಗಳಿಗೆ ಬೀಗ!

■ವಿಜಯಸಾಕ್ಷಿ ಸುದ್ದಿ, ಕಾರವಾರ

ಸರ್ಕಾರಿ ಶಾಲೆಗಳನ್ನು ಉಳಿಸಿ ಬೆಳೆಸಬೇಕು ಎಂದು ಸರ್ಕಾರ ನಾನಾ ಕಾರ್ಯಕ್ರಮಗಳನ್ನು ಜಾರಿಗೆ ತರುತ್ತಿದೆ.

ಆದರೂ ಸರ್ಕಾರಿ ಶಾಲೆಗಳಿಗೆ ಹೋಗುವ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತಲೇ ಇದೆ. ಇದಕ್ಕೆ ಉದಾಹರಣೆ ಎಂಬಂತೆ ಗಡಿ ಜಿಲ್ಲೆ ಉತ್ತರ ಕನ್ನಡದಲ್ಲಿ ಸರ್ಕಾರಿ ಶಾಲೆಗಳು ಅವನತಿಯತ್ತ ಸಾಗಿದ್ದು, ಕಳೆದ 6 ವರ್ಷಗಳಲ್ಲಿ ಬರೋಬ್ಬರಿ 13 ಸರ್ಕಾರಿ ಶಾಲೆಗಳು ವಿದ್ಯಾರ್ಥಿಗಳೇ ಇಲ್ಲದೇ ಬಾಗಿಲು ಮುಚ್ಚಿವೆ.

ಹೌದು, ಕಾರವಾರ ಕರ್ನಾಟಕದ ಗಡಿ ಪ್ರದೇಶವಾಗಿದ್ದು, ಗೋವಾ ಗಡಿಯಲ್ಲಿ ಬರುವ ಕಾರವಾರ ತಾಲೂಕಿನಲ್ಲಿ ಕೊಂಕಣಿ, ಮರಾಠಿ ಭಾಷಿಗರು ಹೆಚ್ಚಿದ್ದರೂ ಸಹ ಕನ್ನಡ ಶಾಲೆಗಳಿಗೆ ಈ ಹಿಂದೆ ಸಾಕಷ್ಟು ಬೇಡಿಕೆ ಇತ್ತು. ಗಡಿಭಾಗದಲ್ಲಿ ಸರ್ಕಾರದ ಶಾಲೆಗಳು ಜೊತೆ ಹಲವು ಅನುಧಾನಿತ ಕನ್ನಡ ಶಾಲೆಗಳು ತಲೆ ಎತ್ತಿದ್ದವು. ಆದರೆ ಕಳೆದ ಕೆಲ ವರ್ಷದಿಂದ ಗಡಿ ಭಾಗದಲ್ಲಿ ವಿದ್ಯಾರ್ಥಿಗಳ ಸಂಖ್ಯೆ ಕಡಿಮೆಯಾಗುತ್ತ ಬಂದಿದ್ದು ಹಲವು ಶಾಲೆಗಳು ಬಂದ್ ಆಗಿವೆ.

2017–18 ನೇ ಸಾಲಿನಲ್ಲಿ ಮೂರು ಸರ್ಕಾರಿ ಶಾಲೆಗಳಿಗೆ ಬೀಗ ಬಿದ್ದಿದ್ದರೆ, 2019–20 ನೇ ಸಾಲಿನಲ್ಲಿ ಎರಡು, 20–21 ನೇ ಸಾಲಿನಲ್ಲಿ ಒಂದು ಶಾಲೆ, 2021–22 ನೇ ಸಾಲಿನಲ್ಲಿ ಎರಡು ಶಾಲೆಗಳು ವಿದ್ಯಾರ್ಥಿಗಳಿಲ್ಲದೇ ಬಂದ್ ಆಗಿತ್ತು.

### ನೀವೂ ನಮ್ಮ ಜೊತೆ ಕೈಜೋಡಿಸಿ

'ವಿಜಯಸಾಕ್ಷಿ'

ನಿಮ್ಮ ಮನೆಯ, ಮನದ ಪತ್ರಿಕೆ ಆಗಲೆಂದು ನಾವು ಬಯಸುತ್ತೇವೆ. ಇಲ್ಲಿ ನಿಮ್ಮ ಅಭಿಪ್ರಾಯ ಹಂಚಿಕೊಳ್ಳಲು ಮುಕ್ತ ಸ್ವಾಗತವಿದೆ.
ನೀವು ಪತ್ರಿಕೆಯ ಕುರಿತು ತಮ್ಮ ಸಲಹೆ, ಮೆಚ್ಚುಗೆ ನಮಗೆ ಬರೆದು ಕಳಿಸಿ..
ಲೇಖನ, ಸಣ್ಣ ಕತೆ, ಕವನ, ಪ್ರಬಂಧ, ಪ್ರವಾಸ ಅನುಭವ ಈ ಕುರಿತು ನೀವೂ ಬರೆಯಬಹುದು.
E-mail: vijayasakshidaily@gmail.com
ಮೊ : 9019256545



ಗದಗ ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಗಳಾಗಿ ಅಧಿಕಾರ ಸ್ವೀಕರಿಸಿರುವ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ರಾಜ್ಯ ಉಪಾಧ್ಯಕ್ಷ ಹಾಗೂ ಗದಗ ಜಿಲ್ಲಾ ಸರಕಾರಿ ನೌಕರ ಸಂಘಧ ಜಿಲ್ಲಾಧ್ಯಕ್ಷ ರವಿ ಗುಂಜೀಕರ, ಗದಗ ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಅಧಿಕಾರಿಗಳಾಗಿ ಅಧಿಕಾರ ಸ್ವೀಕರಿಸಿರುವ ಕರ್ನಾಟಕ ರಾಜ್ಯ ಸರಕಾರಿ ನೌಕರ ಸಂಘದ ಗೌರವಾಧ್ಯಕ್ಷ ಡಾ. ಬಸವರಾಜ ಬಳ್ಳಾರಿ ಅವರನ್ನು ಪತ್ರಕರ್ತರಾದ ಸುನೀಲಸಿಂಗ್ ಲದ್ದಿಗೇರಿ, ಸಾಮಾಜಿಕ ಕಾರ್ಯಕರ್ತ ಸುರೇಂದ್ರಸಿಂಗ್ ಪಿ ಕಾಟೇವಾಲ ಅವರು ಸನ್ಮಾನಿಸಿ, ಶುಭ ಕೋರಿದರು.

## ಮಕ್ಕಳಿಗೆ ಅಂಕ ಗಳಿಕೆಯ ಒತ್ತಡ ಹೇರಬೇಡಿ

▸▸ ಮೊದಲನೇ ಪುಟದಿಂದ

> ಶಾಲೆಯಲ್ಲಿ ಶಿಕ್ಷಕರು ಮಕ್ಕಳಿಗೆ ಸೃಜನಶೀಲ ಚಟುವಟಿಕೆಗಳ ಮೂಲಕ ಶಿಕ್ಷಣ ನೀಡಿದರೆ ಮಕ್ಕಳಲ್ಲಿ ಕಲಿಕಾ ಆಸಕ್ತಿ ಮೂಡುತ್ತದೆ. ಶಿಕ್ಷಕರು ಸಂಬಳಕ್ಕಾಗಿ ದುಡಿಯದೆ ಮಕ್ಕಳ ಮನೋವಿಕಾಸಕ್ಕಾಗಿ ಕೆಲಸ ಮಾಡಬೇಕು. ಮಕ್ಕಳಿಗೆ ಮೀಡಿಯಂ ಮುಖ್ಯವಲ್ಲ, ವಿದ್ಯೆ ಕಲಿಸುವ ಮೇಡಂ ಮುಖ್ಯ.
>
> **– ಎಂ ಎಸ್ ಪೂಜಾರ.**
> ನಿವೃತ್ತ ಶಿಕ್ಷಕರು, ಅಣ್ಣಿಗೇರಿ.

ಶೈಕ್ಷಣಿಕ ಬದಲಾವಣೆಯನ್ನು ಗಮನಿಸುತ್ತಿರಬೇಕು ಎಂದು ಹೇಳಿದರು. ಮುಖ್ಯೋಪಾಧ್ಯಾಯರಾದ ಎಚ್ ಎಂ ನದಾಫ್ ಮಾತನಾಡಿ, ನಮ್ಮ ಶಾಲೆಯಲ್ಲಿ ಮಕ್ಕಳಿಗೆ ಕಲಿಕಾ ಆಸಕ್ತಿ ಮೂಡಲು ಹಲವಾರು ಸೃಜನಶೀಲ ಚಟುವಟಿಕೆಗಳನ್ನು ಮಾಡಿಸಲಾಗುತ್ತದೆ. ಮಕ್ಕಳ ಕಲಿಕಾಸಕ್ತಿ ಮತ್ತು ಅವರ ಚಟುವಟಿಕೆಗಳನ್ನು ಗಮನಿಸಿ ಪಾಠ ಮಾಡುವದರಿಂದ ಅವರಲ್ಲಿ ಸಾಕಷ್ಟು ಬದಲಾವಣೆಯನ್ನು ಕಾಣಬಹುದು ಎಂದು ಹೇಳಿದರು.

ಈ ಸಂದರ್ಭದಲ್ಲಿ ಶ್ರೀ ದುರ್ಗಾದೇವಿ ಶಿಕ್ಷಣ ಸಂಸ್ಥೆಯ ಸಲಹಾ ಸಮಿತಿ ಸದಸ್ಯ ಮುತ್ತ ಜಡಿ, ಶಿಕ್ಷಕರಾದ ಮಂಜುಳಾ ಹಿಡ್ಕಿಮಠ, ರೇಖಾ ಅಂಗಡಿ, ಸುಧಾ ತಿರಕಣ್ಣವರ, ವಂದನಾ ಕಲ್ಮನಿ, ಜ್ಯೋತಿ ಅರಸಿದ್ದಿ, ಎಸ್ ಎ ಕರಿಸಾಬಣ್ಣವರ, ಸಿಬ್ಬಂದಿಗಳಾದ ಲಕ್ಷ್ಮೀ ಕಮಡೊಳ್ಳಿ, ಸೈನಾಜ್ ರೋಣದ ಮುಂತಾದವರಿದ್ದರು.

## ಗುರುವಿನ ಕರುಣೆಯಿಂದಲೇ ನೆಮ್ಮದಿ

▸▸ ಮೊದಲನೇ ಪುಟದಿಂದ

ವಿದ್ಯಾರ್ಥಿಗಳಿಗೆ ಒದಗಿದ್ದು, ಪರಿಶ್ರಮದ ಮೂಲಕ ಆಶ್ರಮದಲ್ಲಿ ದೊರೆಯುವ ಸಂಗೀತ, ಸಾಹಿತ್ಯ, ಪುರಾಣ ಪ್ರವಚನಗಳನ್ನು ಕಲಿತು ಸುಂದರ ಬದುಕು ಕಟ್ಟಿಕೊಳ್ಳಿ ಎಂದು ಶುಭ ಹಾರೈಸಿದರು.

ತಬಲಾ ವಾದನದಲ್ಲಿ ಸಾಧನೆಗೈದು ಮೈಸೂರು ನಗರದಲ್ಲಿ ನೂರಾರು ವಿದ್ಯಾರ್ಥಿಗಳಿಗೆ ಸಂಗೀತ ಕಲಿಸುತ್ತಿರುವ ಡಾ. ಪುಟ್ಟರಾಜ ಗವಾಯಿಗಳವರ ಶಿಷ್ಯರಾದ ಭೀಮಾಶಂಕರ್ ಮಾತನಾಡಿ, ಗುರು-ಶಿಷ್ಯರ ನಡುವಿನ ಸಂಬಂಧವನ್ನು ಮಾರ್ಮಿಕವಾಗಿ ಪ್ರಸ್ತಾಪಿಸಿದರು. ಅಲ್ಲದೆ ತಮ್ಮೊಂದಿಗೆ ತಮ್ಮ ಶಿಷ್ಯಂದಿರಾದ ರೋಹಿತ್ ಕಳಲೆ, ರಜಿತ್ ಪ್ರಣವ್, ಸಂತೋಷ್ ಹಾಗೂ ಪಂಚಲ್‌ರೊಡನೆ ತಬಲಾ ಸೋಲೋ ಕಾರ್ಯಕ್ರಮ ನಡೆಸಿಕೊಟ್ಟರು.

ವೇದಿಕೆಯಲ್ಲಿ ವೇ. ಮೂ. ಪಂಚಾಕ್ಷರಸ್ವಾಮಿ ಉಪಸ್ಥಿತರಿದ್ದರು. ಪುಣ್ಯಾಶ್ರಮದ ವ್ಯವಸ್ಥಾಪಕರಾದ ಹೇಮರಾಜ್ ಶಾಸ್ತ್ರೀ ಹಿರೇಮಠ ಸ್ವಾಗತಿಸಿದರು. ಸಹ ವ್ಯವಸ್ಥಾಪಕರಾದ ವೇದಮೂರ್ತಿ ಶರಣಯ್ಯಸ್ವಾಮಿ ಹಿಡ್ಕಿಮಠ ವಂದನಾರ್ಪಣೆಗೈದರು.

## ಬೆಂಗಳೂರಿನಲ್ಲಿ ಶಂಕಿತ ಉಗ್ರರ ಬಂಧನ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಬೆಂಗಳೂರಿನಲ್ಲಿ ಬಂಧಿಸಲಾಗಿದ್ದ ಐವರು ಶಂಕಿತ ಉಗ್ರರನ್ನು 7 ದಿನಗಳ ಕಾಲ ಸಿಸಿಬಿ ಪೊಲೀಸರ ಕಸ್ಟಡಿಗೆ ನೀಡಲಾಗಿದೆ.

ಬಂಧಿತ ಸಯ್ಯದ್ ಸುಹೇಲ್, ಉಮರ್, ಜುನೇದ್ ಮುದಾಶೀರ್, ಜಾಹಿದ್ ನನ್ನು ಇಂದು ಸಿಸಿಬಿ ಕೋರ್ಟ್ ಗೆ ಹಾಜರುಪಡಿಸಿದ್ದು 15 ದಿನಗಳ ಕಸ್ಟಡಿಗೆ ನೀಡುವಂತೆ ಮನವಿ ಮಾಡಿತ್ತು. ಆದರೆ ನ್ಯಾಯಾಲಯ 7 ದಿನಗಳ ಕಾಲ ಕಸ್ಟಡಿಗೆ ನೀಡಿದೆ.

ಬಂಧಿತ ಶಂತಕ ಉಗ್ರರು ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಭಾರಿ ವಿಧ್ವಂಸಕ ಕೃತ್ಯಕ್ಕೆ ಸಂಚು ರೂಪಿಸಿದ್ದರು ಎಂದು ತಿಳಿದುಬಂದಿದೆ. 2017ರ ಅಕ್ಟೋಬರ್‌ನಲ್ಲಿ ಬೆಂಗಳೂರಿನ ಆರ್.ಟಿ.ನಗರದಲ್ಲಿ ನಡೆದಿದ್ದ ಮೂವರ ಕಿಡ್ನ್ಯಾಪ್, ಓರ್ವನ ಹತ್ಯೆ ಪ್ರಕರಣದಲ್ಲಿ ಜೈಲುಪಾಲಾಗಿದ್ದ ಹಲವು ಆರೋಪಿಗಳು, ಪರಪ್ಪನ ಅಗ್ರಹಾರ ಜೈಲಿನಿಂದ ಉಗ್ರರ ಜೊತೆಗೆ ಸಂಪರ್ಕ ಹೊಂದಿದ್ದರು ಎನ್ನಲಾಗಿದ್ದು, ಈ ಬಗ್ಗೆ ಐವರು ಶಂಕಿತ ಉಗ್ರರನ್ನು ಸಿಸಿಬಿ ಪೊಲೀಸರು ಬಂಧಿಸಿ ವಿಚಾರಣೆಗೊಳಪಡಿಸಿದ್ದಾರೆ.

ಸಿಸಿಬಿಯು ನಗರದ ವಿವಿಧ ಪ್ರದೇಶಗಳಿಂದ ಐವರು ಶಂಕಿತ ಭಯೋತ್ಪಾದಕರನ್ನು ಬಂಧಿಸಿ ಅವರಿಂದ ಅನೇಕ ಸ್ಫೋಟಕ ವಸ್ತುಗಳನ್ನು ವಶಪಡಿಸಿಕೊಂಡಿದೆ.

### ಗ್ರಂಥಾಲಯದ ಮೇಲ್ವಿಚಾರಕರಿಗೆ ಮೂರು ದಿನಗಳ ತರಬೇತಿ ಕಾರ್ಯಕ್ರಮ

# ಗ್ರಂಥಾಲಯವನ್ನು ಸ್ನೇಹಮಯಿಯಾಗಿಸಿ



> ಸಂಪನ್ಮೂಲ ವ್ಯಕ್ತಿಗಳು ತರಬೇತಿ ಆಯೋಜನೆ, ರೂಪುರೇಷೆ, ಉದ್ದೇಶ ಹಾಗೂ ಗ್ರಂಥಾಲಯಗಳ ಮಹತ್ವದ ಕುರಿತು ಮಾತನಾಡಿದರು. ತರಬೇತಿ ಸಂಯೋಜಕರಾದ ಮಂಜುನಾಥ ಮುಧೋಳ ತರಬೇತಿಯಲ್ಲಿ ಗ್ರಂಥಾಲಯ ಮೇಲ್ವಿಚಾರಕರುಗಳಿಗೆ ಮಕ್ಕಳ ಸ್ನೇಹಿ ಗ್ರಂಥಾಲಯದ ಪರಿಕಲ್ಪನೆ ಮತ್ತು ಮಹತ್ವ, ಮಾನವ ಸಂಪನ್ಮೂಲ, ಓದುವ ಸಂಪನ್ಮೂಲ ಸಂಗ್ರಹ, ಚಟುವಟಿಕೆಗಳು, ಪತ್ರ ಬರೆಯುವದು, ಗಟ್ಟಿ ಓದು, ಕಟ್ಟು ಕಟ್ಟು ಕಥೆ ಕಟ್ಟು, ಪುಸ್ತಕ ಜೋಡಣೆ ಮತ್ತು ಪ್ರದರ್ಶನ, ಮಕ್ಕಳ ಹಕ್ಕುಗಳು, ಕಾಯ್ದೆಗಳು ಹಾಗೂ ಗ್ರಂಥಾಲಯಗಳ ವೈಜ್ಞಾನಿಕ ನಿರ್ವಹಣೆಗಳ ಕುರಿತು ಮಾಹಿತಿ ನೀಡಿದರು.

**■ ವಿಜಯಸಾಕ್ಷಿ ಸುದ್ದಿ, ಮುಂಡರಗಿ**

ಎಲ್ಲಾ ಗ್ರಂಥಾಲಯಗಳೂ ಮಕ್ಕಳ ಸ್ನೇಹಿಯಾಗಬೇಕು. ಮೇಲ್ವಿಚಾರಕರು ಸರಿಯಾಗಿ ಕಾರ್ಯನಿರ್ವಹಿಸಿ, ಸರಕಾರ ಯೋಜನೆಯನ್ನು ಯಶಸ್ವಿಗೊಳಿಸಬೇಕು. ಈ ತರಬೇತಿಯಲ್ಲಿ ನೀವು ಗ್ರಹಿಸಿದ ಮಾಹಿತಿಗಳನ್ನು ನಿಮ್ಮ ನಿಮ್ಮ ಗ್ರಂಥಾಲಯಗಳಲ್ಲಿ ಅಳವಡಿಸಿ, ಎಲ್ಲರ ಸಹಕಾರದಿಂದ ನಿಮ್ಮ ಗ್ರಂಥಾಲಯವನ್ನು ಸ್ನೇಹಮಯಿಯಾಗಿಸಬೇಕು ಎಂದು ತಾ ಪಂ ಕಾರ್ಯನಿರ್ವಾಹಕ ಅಧಿಕಾರಿಗಳಾದ ಯುವರಾಜ ಹನಗುಂಡಿ ತಿಳಿಸಿದರು.

ಅವರು ಅಬ್ದುಲ್ ನಜೀರ್‌ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ಮೈಸೂರು, ಜಿಲ್ಲಾ ಪಂಚಾಯತ ಗದಗ, ತಾಲೂಕು ಪಂಚಾಯತ ಮುಂಡರಗಿ ಇವರುಗಳ ಸಂಯುಕ್ತಾಶ್ರಯದಲ್ಲಿ ತಾಲೂಕು ಪಂಚಾಯತ ಸಾಮರ್ಥ್ಯಸೌಧದಲ್ಲಿ ಮಕ್ಕಳ ಸ್ನೇಹಿ ಗ್ರಾಮೀಣ ಗ್ರಂಥಾಲಯ ಕುರಿತು ಗ್ರಂಥಾಲಯದ ಮೇಲ್ವಿಚಾರಕರಿಗೆ ಹಮ್ಮಿಕೊಂಡಿದ್ದ ಮೂರು ದಿನಗಳ ತರಬೇತಿ ಕಾರ್ಯಕ್ರಮದಲ್ಲಿ ಗ್ರಂಥಾಲಯ ಮೇಲ್ವಿಚಾರಕರಿಗೆ ಕೈಪಿಡಿ ವಿತರಿಸಿ ಮಾತನಾಡಿದರು.

ಸಹಾಯಕ ನಿರ್ದೇಶಕ ವಿಶ್ವನಾಥ ಹೊಸಮನಿ ಹಾಗೂ ಮಂಜುಳಾ ಬಾರಕೇರ ತರಬೇತಿ ಕೇಂದ್ರಕ್ಕೆ ಆಗಮಿಸಿ ಮಾತನಾಡಿ, ಗ್ರಂಥಾಲಯಗಳು ವಿಶ್ವಕೋಶವಿದ್ದಂತೆ. ಮಕ್ಕಳಿಗೆ, ವೃದ್ಧರಿಗೆ, ಯುವಕರಿಗೆ ಗ್ರಂಥಾಲಯಗಳ ಅವಶ್ಯಕತೆ ಇದೆ. ಅದಕ್ಕಾಗಿ, ಸರಕಾರ ಗ್ರಾಮೀಣ ಪ್ರದೇಶದ ಜನರು ಕೂಡ ಗ್ರಂಥಾಲಯದ ಕಡೆ ಬರುವ ಹಾಗೆ ಮಾಡುವದು, ಮಕ್ಕಳನ್ನು ಓದಿನೆಡೆಗೆ ಪ್ರೇರೇಪಿಸುವದು, ಕಥೆ, ಕಾದಂಬರಿ, ನಾಟಕ, ಸ್ಪರ್ಧಾತ್ಮಕ ಪುಸ್ತಕಗಳ ಸಂಗ್ರಹ, ಒಳಾಂಗಣ ಆಟಗಳಾದ ಕೇರಂ, ಚೆಸ್ ಹಾಗೂ ದೇಶೀಯ ಆಟಗಳನ್ನು ಆಡಿಸುವದರಿಂದ ಮಕ್ಕಳು ಸಂತಸದಿಂದ ಗ್ರಂಥಾಲಯದ ಕಡೆ ಬರುತ್ತಾರೆ ಎಂದು ತಿಳಿಸಿ, ಗ್ರಂಥಾಲಯ ಅಭಿವೃದ್ಧಿಯಲ್ಲಿ ಶಾಲೆ, ಸರ್ಕಾರೇತರ ಸಂಸ್ಥೆಗಳು, ಇತರೆ ಇಲಾಖೆಗಳು ಯಾವ ರೀತಿ ಬಾಗಿಯಾಗಬೇಕು ಎಂಬ ಕುರಿತು ಮಾಹಿತಿ ನೀಡಿದರು.

ಸಂಯೋಜಕರಾದ ಕೀರ್ತಿ ದೇಸಾಯಿ, ತಾಲೂಕು ಗ್ರಂಥಾಲಯ ಮೇಲ್ವಿಚಾರಕರು ತರಬೇತಿಯಲ್ಲಿ ಗಟ್ಟಿ ಓದು, ಕ್ರಿಡೆಗಳು, ನಿಧಿಶೋಧ, ಬಾಲಕಿಯರ ಒಳಗೊಳ್ಳುವಿಕೆಗೆ ಇರುವ ಸವಾಲುಗಳು ಹಾಗೂ ಎಲ್ಲಾ ಮಕ್ಕಳ ಒಳಗೊಳ್ಳುವಿಕೆಯ ಕುರಿತು ಮಾತನಾಡಿದರು.

ಮೂರು ದಿನಗಳ ಈ ತರಬೇತಿಯಲ್ಲಿ ಚಟುವಟಿಕೆಗಳ ಮುಖಾಂತರ ತರಬೇತಿಯನ್ನು ಅರ್ಥಪೂರ್ಣವಾಗಿ ನಡೆಸಲಾಯಿತು. ತರಬೇತಿ ಸಂಯೋಜಕರಾಗಿ ಮಂಜುನಾಥ ಮುಧೋಳ, ಕೀರ್ತಿ ದೇಸಾಯಿ, ವಿಷಯ ನಿರ್ವಾಹಕರಾದ ಸಿ ಬಿ ಪಾಟೀಲ ಪಾಲ್ಗೊಂಡಿದ್ದರು.

## ವಡಿಗೇರಿ ದಂಪತಿಗಳಿಂದ ದೇಹದಾನ

**■ ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ನಿವೃತ್ತ ಶಿಕ್ಷಕ, ರೋಣ ತಾಲೂಕಿನ ಹಿರೇಹಾಳ ಗ್ರಾಮದ ಚಂದ್ರಶೇಖರ ವಡಿಗೇರಿ ಮತ್ತು ಅವರ ಪತ್ನಿ ರೇಣುಕಾ ದಂಪತಿಗಳು ತಮ್ಮ ನಿಧನದ ನಂತರ ತಮ್ಮ ದೇಹವನ್ನು ಗದುಗಿನ ವೈದ್ಯಕೀಯ ವಿಜ್ಞಾನಗಳ ಸಂಸ್ಥೆಗೆ ದಾನ ಮಾಡಿ ಆದರ್ಶ ಮೆರೆದಿದ್ದಾರೆ.

ಚಂದ್ರಶೇಖರ ವಡಿಗೇರಿ ಮೂಲತಃ ರೋಣ ತಾಲೂಕಿನ ಹಿರೇಹಾಳದವರು.

ಆಕಾಶವಾಣಿ ಕಲಾವಿದರಾಗಿ ತಮ್ಮ ದನಿಯನ್ನು ನಾಡಿಗೆ ಪರಿಚಯಿಸಿದವರು. ಈಗ ಗದುಗಿನ ನಿವಾಸಿಯಾಗಿರುವ ಚಂದ್ರಶೇಖರ ಎಂ ವಡಗೇರಿ ಹಾಗೂ ಅವರ ಪತ್ನಿ



ರೇಣುಕಾ ಅವರು ಈಚೆಗೆ ಗದಗ ಸರ್ಕಾರಿ ವೈದ್ಯಕೀಯ ವಿಜ್ಞಾನ ಮಹಾವಿದ್ಯಾಲಯ ಸಂಸ್ಥೆಯ ಅಂಗರಚನಾ ಶಾಸ್ತ್ರ ವಿಭಾಗದ ಮುಖ್ಯಸ್ಥೆ ಡಾ.ರೂಪಾ ಅವರ ಸಮ್ಮುಖದಲ್ಲಿ ಸ್ವ-ಇಚ್ಛೆಯಿಂದ ಕಾನೂನಿನ ಪ್ರಕಾರ ತಮ್ಮ ನಿಧನದ ನಂತರ ದೇಹದಾನ ವಾಗ್ದಾನ ಪತ್ರಕ್ಕೆ ಸಹಿ ಹಾಕಿದ್ದು, ಇವರ ಈ ನಿರ್ಧಾರಕ್ಕೆ ಪುತ್ರಿಯರಾದ ವಿಜಯಶ್ರೀ, ವಿದ್ಯಾಶ್ರೀ ಸಮ್ಮತಿಯನ್ನು ಸೂಚಿಸಿದ್ದಾರೆ.

## ಡ್ರ್ಯಾಗನ್ ಫ್ರೂಟ್ ಬೆಳೆದು ಯಶಸ್ವಿಯಾದ ಕರಾವಳಿ ಉದ್ಯಮಿ

**■ ವಿಜಯಸಾಕ್ಷಿ ಸುದ್ದಿ, ಬಂಟ್ವಾಳ**

ಇತ್ತೀಚಿನ ಕೆಲ ದಿನಗಳಿಂದ ಟೊಮೆಟೊ ಸೇರಿದಂತೆ ತರಕಾರಿಗಳ ಬೆಲೆ ಗಗನಕ್ಕೇರಿರುವುದು ನಿತ್ಯ ಸುದ್ದಿಯಾಗ್ತಿದೆ.

ಈ ನಡುವೆದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳ ತಾಲೂಕಿನ ಕುರಿಯಾಳ ಗ್ರಾಮದ ನೋರ್ನಡ್ಕಪಡು ಎಂಬಲ್ಲಿ ಉದ್ಯಮಿಯೊಬ್ಬರು ತಮ್ಮ 14 ಎಕರೆ ಜಮೀನಿನಲ್ಲಿ ಎರಡು ಎಕರೆಯಷ್ಟು ಪ್ರದೇಶದಲ್ಲಿ ಡ್ರ್ಯಾಗನ್ ಫ್ರೂಟ್ ಬೆಳೆದಿದ್ದಾರೆ. ಈ ಬೆಳೆಯಲ್ಲಿ ಉತ್ತಮ ಲಾಭ ಪಡೆದು ತೋರಿಸಿದ್ದಾರೆ ಬಂಟ್ವಾಳದ ಹೋಟೆಲ್ ಉದ್ಯಮಿ ಚಂದ್ರಹಾಸ ಶೆಟ್ಟಿ.

ಡ್ರ್ಯಾಗನ್ ಫ್ರೂಟ್ ಬೆಳೆದು ಯಶಸ್ಸಿ ಕಂಡಿರುವ ಚಂದ್ರಹಾಸ ಶೆಟ್ಟಿ ತಮ್ಮ ಅನುಭವನ್ನು ಹೀಗೆ ಹಂಚಿಕೊಳ್ಳುತ್ತಾರೆ. "ಡ್ರ್ಯಾಗನ್ ಫ್ರೂಟ್ ಬೆಳೆಗೆ ಪ್ರಾಣಿಗಳ ಕಾಟವಿಲ್ಲ, ನವಿಲು ಇಲ್ಲೆಲ್ಲಾ ಓಡಾಡುತ್ತಿದ್ದರೂ ಹಣ್ಣಿನ ಹತ್ತಿರ ಬರುವುದಿಲ್ಲ. ಈ ಬೆಳೆಗೆ ರೋಗಗಳ ಭಯವಿಲ್ಲ. ಬೆಳೆಗೆ ಕೇವಲ ಹಟ್ಟಿ ಗೊಬ್ಬರವನ್ನಷ್ಟೇ ಹಾಕಲಾಗಿದೆ. ಯಾವುದೇ ರಾಸಾಯನಿಕ ಹಾಕದೇ ಬೆಳೆಸಿದ್ದರಿಂದ ಉತ್ತಮ ಫಸಲೂ ಕೂಡಾ ಬಂದಿದೆ" ಎಂದು



ತಿಳಿಸಿದರು. "ಲಾಕ್ ಡೌನ್ ಸಂದರ್ಭ ಯೂಟ್ಯೂಬ್‌ನಲ್ಲಿ ಬರುವ ವಿಡಿಯೋಗಳನ್ನೆಲ್ಲಾ ನೋಡುತ್ತಿದ್ದ ಸಂದರ್ಭ ಬೆಂಗಳೂರಿನ ಯಲಹಂಕದಲ್ಲಿ ಶ್ರೀನಿವಾಸ ರೆಡ್ಡಿ ಎಂಬವರು ಡ್ರ್ಯಾಗನ್ ಫ್ರೂಟ್ ಬೆಳೆದದ್ದನ್ನು ಗಮನಿಸಿದೆ. ನಮ್ಮ ಜಾಗದಲ್ಲೂ ನೆಟ್ಟಿದ್ದೇನೆ. 1 ವರ್ಷ ಮೂರು ತಿಂಗಳು ಆಯಿತು. ಮೂರು ತಿಂಗಳಲ್ಲಿ ಫಸಲು ಬಂದಿದೆ. ಇದುವರೆಗೆ 5 ಟನ್ ಡ್ರ್ಯಾಗನ್ ಫ್ರೂಟ್ ಬೆಳೆಸಿದ್ದೇನೆ. ಇನ್ನು ಮೂರು ಟನ್ ಇಳುವರಿ ಬರುವ ನಿರೀಕ್ಷೆ ಇದೆ. 1 ಸಾವಿರ ಕಂಬಗಳಲ್ಲಿ 4 ಸಾವಿರ ಗಿಡ ನೆಟ್ಟಿದ್ದೇನೆ" ಎನ್ನುತ್ತಾರೆ.

"ನಮ್ಮ ದಕ್ಷಿಣ ಕನ್ನಡದಲ್ಲಿ ಇಷ್ಟು ದೊಡ್ಡ ಪ್ರಮಾಣದಲ್ಲಿ ಬೆಳೆಸಿದವರು ಇಲ್ಲ. ಈ ಬೆಳೆಗಳ ನಿರ್ವಹಣೆ ಕಾರ್ಯಗಳು ಕಡಿಮೆ. ಕಳೆದ ವರ್ಷ 500 ಕಂಬಗಳಲ್ಲಿ 2 ಸಾವಿರ ಗಿಡ ನೆಟ್ಟಿದ್ದೆ. ಎಪ್ರಿಲ್ ಕೊನೆಗೆ ಹೂವು ಬಿಡಲು ಆರಂಭವಾದರೆ, ನವೆಂಬರ್ ಕೊನೆಯಲ್ಲಿ ಹಣ್ಣು ದೊರಕುತ್ತದೆ. ಈ ಗಿಡ 30 ವರ್ಷ ಬಾಳಿಕೆ ಬರುತ್ತದೆ ಎನ್ನುತ್ತಾರೆ ಶೆಟ್ಟಿ. ದಕ್ಷಿಣ ಕನ್ನಡ ಜಿಲ್ಲೆಯ ಹವಾಮಾನಕ್ಕೂ ಇದು ಹೊಂದಿಕೆ ಆಗುತ್ತದೆ ಎಂಬುದು ಈಗ ಸಾಬೀತಾಗಿದೆ. ಕುರಿಯಾಳ ಗ್ರಾಮದ ನೋರ್ನಡ್ಕಪಡು ಎಂಬಲ್ಲಿರುವ ಚಂದ್ರಹಾಸ ಶೆಟ್ಟಿ ಅವರ ಜಮೀನಿನಲ್ಲಿ ಡ್ರ್ಯಾಗನ್ ಫ್ರೂಟ್ ಈಗ ಎಲ್ಲರ ಕುತೂಹಲಕ್ಕೂ ಕಾರಣವಾಗಿದೆ.

## ಪರಿಷತ್‌ನಲ್ಲಿ ಐಎಎಸ್ ಅಧಿಕಾರಿಗಳ ಬಳಕೆಗೆ ವಿರೋಧ: ಕಲಾಪ ಮುಂದೂಡಿಕೆ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ವಿಧಾನ ಪರಿಷತ್ ಕಲಾಪದಲ್ಲಿಯೂ ಸಹ ಕೇಂದ್ರ ಪ್ರತಿಪಕ್ಷ ನಾಯಕರ ಸಭೆಗೆ ಆಗಮಿಸಿದ ಗಣ್ಯರ ಆಹ್ವಾನಕ್ಕೆ ಐಎಎಸ್ ಅಧಿಕಾರಿ ಬಳಕೆ ಮಾಡಿಕೊಂಡಿರುವ ವಿಚಾರ ಪ್ರಸ್ತಾಪವಾಗಿ ಗದ್ದಲದ ವಾತಾವರಣ ನಿರ್ಮಾಣವಾಯಿತು.

ಕಾಂಗ್ರೆಸ್ ಕಾರ್ಯಕ್ರಮಕ್ಕೆ ಐಎಎಸ್ ಅಧಿಕಾರಿಗಳ ಬಳಕೆ ಸರಿಯಲ್ಲ ಎಂದು ಪ್ರತಿಪಕ್ಷ ನಾಯಕರು ಕಿಡಿಕಾರಿದರು.

ಆಡಳಿತ-ಪ್ರತಿಪಕ್ಷ ಶಾಸಕರು ವಾಗ್ವಾದ ನಡೆಸಿದಾಗ ನಿಮಗೆ ಈ ವಿಚಾರದ ಮೇಲೆ ಚರ್ಚೆಗೆ ಅವಕಾಶ ನೀಡುತ್ತೇನೆ. ಬರವಣಿಗೆಯಲ್ಲಿ ನೀಡಿ. ಸೂಕ್ತ ನಿಯಮದ ಅಡಿ ಚರ್ಚೆಗೆ ಅವಕಾಶ ಮಾಡಿಕೊಡುತ್ತೇನೆ. ಪೀಠದಿಂದ ಚರ್ಚೆಗೆ ಅವಕಾಶದ ಭರವಸೆ ನೀಡುತ್ತೇನೆ ಎಂದು ಸಭಾಪತಿ ಪೀಠದಲ್ಲಿದ್ದ ಪ್ರಾಣೇಶ್ ಭರವಸೆ ಕೊಟ್ಟರು.

ಆದರೆ, ಸಮಾಧಾನಗೊಳ್ಳದ



ಬಿಜೆಪಿ ಸದಸ್ಯರು ನಮಗೆ 10 ನಿಮಿಷ ವಿಷಯ ಪ್ರಸ್ತಾಪಕ್ಕೆ ಅವಕಾಶ ಮಾಡಿಕೊಡಿ. ಗಂಭೀರ ವಿಚಾರ ಇದು. ಯಾವುದೇ ಹುದ್ದೆ ಇಲ್ಲದ ನಾಯಕರ ಆಹ್ವಾನಕ್ಕೆ 40 ಐಎಎಸ್ ಅಧಿಕಾರಿಗಳನ್ನು ಬಳಸಿಕೊಂಡಿದ್ದು ಏಕೆ? ನಾವು ಸಹಿಸಲ್ಲ ಎಂದು ಬಿಜೆಪಿ ಸದಸ್ಯರು ಸದನದ ಬಾವಿಗಿಳಿದು ಧರಣಿ ಆರಂಭಿಸಿ ಕಾಂಗ್ರೆಸ್ ಸರ್ಕಾರದ ವಿರುದ್ಧ ಧಿಕ್ಕಾರ ಕೂಗಿದರು.

ಈ ಸಂದರ್ಭದಲ್ಲಿ ಸಭಾಪತಿಗಳು ಕಲಾಪವನ್ನು 10 ನಿಮಿಷ ಮುಂದೂಡಿದರು. ಕಲಾಪ ಮರು ಆರಂಭವಾದಾಗಲೂ ಬಿಜೆಪಿ ಶಾಸಕರ ಹೋರಾಟ ಮುಂದುವರಿಯಿತು. ಸಭಾಪತಿಗಳು ಮನವೊಲಿಸುವ ಯತ್ನ ಮಾಡಿದರು. ಇದರಿಂದ ಬಜೆಟ್ ಮೇಲೆ ಮಾತನಾಡಬೇಕಿದ್ದ ಕಾಂಗ್ರೆಸ್ ಶಾಸಕ ಮಂಜುನಾಥ್ ಭಂಡಾರಿ ತಮ್ಮ ಅವಕಾಶಕ್ಕಾಗಿ ಕಾಯುತ್ತಲೇ ಕೂರಬೇಕಾಗಿ ಬಂತು.

ಸಭಾಪತಿಗಳು ಈ ವೇಳೆ ಸ್ಥಳಕ್ಕೆ ತೆರಳಿ ಮಾತುಕತೆ ನಡೆಸೋಣ. ಗದ್ದಲ ಬೇಡ. ಸದ್ಯ ಬಜೆಟ್ ಮೇಲೆ ಚರ್ಚೆ ನಡೆಯುತ್ತಿದೆ. ಬೇರೆ ಅವಕಾಶ ಲಭಿಸಲಿದೆ, ನಿಮ್ಮ ಸ್ಥಳಕ್ಕೆ ಬನ್ನಿ ಎಂದರು. ಬಿಜೆಪಿ ನಾಯಕರು ಒಪ್ಪಲಿಲ್ಲ. ಗದ್ದಲ ಮುಂದುವರಿಯಿತು.

## ಜೈನಮುನಿ ಹತ್ಯೆ ಪ್ರಕರಣ ಸಿಐಡಿ ತನಿಖೆಗೆ: ವಿಧಾನಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಪ್ರಕಟ

**■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ರಾಜ್ಯಾದ್ಯಂತ ಭಾರೀ ಸುದ್ದಿ ಮಾಡಿದ ಬೆಳಗಾವಿ ಜಿಲ್ಲೆಯ ಜೈನಮುನಿ ನಂದಿ ಕಾಮಕುಮಾರ ಸ್ವಾಮೀಜಿ ಹತ್ಯೆ ಪ್ರಕರಣವನ್ನು ಸಿಐಡಿ ತನಿಖೆಗೆ ಒಪ್ಪಿಸಿ ರಾಜ್ಯ ಸರ್ಕಾರ ಆದೇಶ ನೀಡಿದೆ.

ಇಂದು ಬುಧವಾರ ವಿಧಾನಸಭೆಯಲ್ಲಿ ಸಿಎಂ ಸಿದ್ದರಾಮಯ್ಯ ಅವರು ಈ ವಿಚಾರವನ್ನು ಪ್ರಕಟಿಸಿದ್ದಾರೆ. ಜೈನ ಮುನಿಯನ್ನು ಹಣಕಾಸು ವಿಚಾರಕ್ಕೆ ಸಂಬಂಧಿಸಿದಂತೆ ಹತ್ಯೆ ಮಾಡಲಾಗಿತ್ತು ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ.

ಆದರೆ ಹತ್ಯೆ ಪ್ರಕರಣದಲ್ಲಿ ಬೇರೆ ಆಯಾಮ ಇದೆ. ಈ ಹಿನ್ನೆಲೆಯಲ್ಲಿ ಇದನ್ನು ಸಿಬಿಐ ತನಿಖೆಗೆ ನೀಡಬೇಕು ಎಂದು ಬಿಜೆಪಿ ಆಗ್ರಹಿಸಿತ್ತು. ಆದರೆ



ಇದೀಗ ಸರ್ಕಾರ ಸಿಐಡಿ ತನಿಖೆಗೆ ನೀಡಲು ನಿರ್ಧಾರ ಮಾಡಿದೆ ಎಂದು ತಿಳಿಸಿದರು. ನಡೆದ ಘಟನೆಯೇನು?: ಕಳೆದ ಜುಲೈ 6ರಂದು ಬೆಳಗ್ಗೆಯಿಂದ ನಂದಿ ಕಾಮಕುಮಾರ ಸ್ವಾಮಿಗಳು ಆಶ್ರಮದಲ್ಲಿ ಕಾಣಸಿಗಲಿಲ್ಲ. ಆಗ ಆತಂಕಗೊಂಡ ಭಕ್ತರು ಎಲ್ಲ ಕಡೆ ಹುಡುಕಿದರೂ ಮುನಿಗಳು ಪತ್ತೆಯಾಗಿರಲಿಲ್ಲ. ಹೀಗಾಗಿ ಚಿಕ್ಕೋಡಿ ಪೊಲೀಸ್ ಠಾಣೆಗೆ ದೂರು ನೀಡಿದ್ದರು. ಬಳಿಕ ಪೊಲೀಸರು ತನಿಖೆ ಆರಂಭಿಸಿದ್ದರು. ಶುಕ್ರವಾರ ರಾತ್ರಿ ಪೊಲೀಸರು ಶಂಕಿತ ಆರೋಪಿಗಳನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದ್ದರು. ಆರೋಪಿಗಳು ರಾಯಬಾಗ ತಾಲೂಕಿನ ಕಟಕಬಾವಿ ಗ್ರಾಮದ ಹೊರವಲಯದ ಬೋರ್‌ವೆಲ್‌ನಲ್ಲಿ ಜೈನ ಮುನಿಗಳ ಶವ ಎಸೆದಿರುವುದಾಗಿ ಮಾಹಿತಿ ನೀಡಿದ್ದರು. ಹೀಗಾಗಿ ಪೊಲೀಸರು ರಾತ್ರಿಯಿಂದಲೇ ಕಾರಯಾಚರಣೆ ಆರಂಭಿಸಿದ್ದರು. ಜೈನ ಮುನಿಗಳ ದೇಹದ ತುಂಡುಗಳನ್ನು ಬಟ್ಟೆಯಲ್ಲಿ ಕಟ್ಟಿ ತೆರೆದ ಕೊಳವೆ ಬಾವಿಯಲ್ಲಿ ಆರೋಪಿಗಳು ಎಸೆದಿದ್ದರು. 20 ಅಡಿ ಆಳದಲ್ಲಿ ಶವದ ಭಾಗಗಳು ಪತ್ತೆಯಾಗಿತ್ತು.

## ಮನೋರಮಾ ಕಾಲೇಜಿನಲ್ಲಿ ಮೆಹಂದಿ ಸ್ಪರ್ಧೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀಮತಿ ಮನೋರಮಾಬಾಯಿ ಮೋಹನ್ ಕುಡತರಕರ್ ಫೌಂಡೇಶನ್‌ನ ಮನೋರಮಾ ಸ್ವತಂತ್ರ ಪದವಿಪೂರ್ವ ಕಾಲೇಜಿನಲ್ಲಿ ಮೆಹಂದಿ ಸ್ಪರ್ಧೆ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸಂಸ್ಥೆಯ ಚೇರಮನ್ ಎನ್ ಎಮ್ ಕುಡತರಕರ ಮಾತನಾಡಿ, ಸ್ಪರ್ಧೆಯಲ್ಲಿ ಭಾಗವಹಿಸಿದ ವಿದ್ಯಾರ್ಥಿಗನ್ನು ಅಭಿನಂದಿಸಿ, ಚಿತ್ರಕಲೆ, ಆಟ-ಪಾಠಗಳೊಂದಿಗೆ ಇಂತಹ ಸ್ಪರ್ದೆಗಳು ಮನಸ್ಸಿಗೆ ಉಲ್ಲಾಸ ನೀಡುತ್ತದೆ ಎಂದರು.

ಪ್ರಾಚಾರ್ಯ ಬಿ ಎಸ್ ಹಿರೇಮಠ ಸ್ಪರ್ಧೆಯಲ್ಲಿ ವಿಜೇತರಾದ ಯಾಸ್ಮಿನ ಮಾಡಲಗೇರಿ, ಸಾಲಿಯಾ ಕಾಗದಗಾರ, ಸಾನಿಯಾ ಬಳ್ಳಾರಿ, ಕೋಮಲ್ ಭಾಂಡಗೆ ಅವರಿಗೆ ಶುಭ ಹಾರೈಸಿ ಮಾತನಾಡಿ, ಪಠ್ಯ-ಪಠ್ಯೇತರ ಚಟುವಟಿಕೆಗಳೊಂದಿಗೆ ವಿದ್ಯಾರ್ಥಿಗಳು ಅಧ್ಯಯನಶೀಲರಾಗಿ. ಕಾಲೇಜಿನಲ್ಲಿ ಜರುಗುವ ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿ ಎಂದು ಪ್ರೋತ್ಸಾಹಿಸಿದರು. ನಿರ್ಣಾಯಕರಾಗಿ ಪ್ರೊ. ಶಾಹಿದಾ ಶಿರಹಟ್ಟಿ ಹಾಗೂ ಪ್ರೊ. ರೇಣುಕಾ ಪಾಟೀಲ ತೀರ್ಪು ನೀಡಿದರು.

ಈ ಸಂಧರ್ಭದಲ್ಲಿ ಆಡಳಿತಾಧಿಕಾರಿ ಕಿಶೋರ ಮುದಗಲ್ಲ, ಸಂಸ್ಥೆಯ ನಿರ್ದೇಶಕ ಮಂಜುನಾಥ ಕುಡತರಕರ, ಸಂಜಯಕುಮಾರ ಕುಡತರಕರ, ಚೇತನ ಕುಡತರಕರ, ಪಿಯುಸಿ ಸಹಸಂಯೋಜಕರಾದ ಪ್ರೊ. ರಾಘವೇಂದ್ರ ನವಲಗುಂದ, ಪ್ರೊ. ನಿವೇದಿತಾ ಪೊಲೀಸ್‌ಪಾಟೀಲ, ಪ್ರೊ. ಸವಿತಾ ಪೂಜಾರ, ಪ್ರೊ. ಸಂಗಮೇಶ ಹಾದಿಮನಿ, ಪ್ರೊ. ಮೇನಕಾ ತುಮ್ಮರಮಟ್ಟಿ, ಪ್ರೊ. ಚೈತ್ರಾ ದಲಬಂಜನ, ಹರೀಶ ಬಾರಕೇರ, ಆಫೀಸ್ ಸುಪರಿಡೆಂಡೆಂಟ್ ಉಮಾ ದಿನ್ನಿ, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು.

### ಕಸಾಪ ಆಯೋಜಿಸಿದ್ದ 'ಮನೆಯಂಗಳದಲ್ಲಿ ಸಾಹಿತ್ಯ' ಕಾರ್ಯಕ್ರಮದಲ್ಲಿ ಶಿಶುನಾಳ ಶರೀಫರ ಸ್ಮರಣೆ

# ಧರೆಗಿಳಿದು ಬಂದ ದೇವಮಾನವ ಶರೀಫಜ್ಜ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರುನಾಡು ಕಂಡ ಶ್ರೇಷ್ಠ ಸಂತ ಶರೀಫರು. ತಮ್ಮ ಅನುಭವ ಮತ್ತು ಮಾತುಗಳನ್ನೇ ತತ್ವ ಪದಗಳಲ್ಲಿ ಕಟ್ಟಿಕೊಟ್ಟ ಪದಗಾರುಡಿಗ, ಮಹಾನ್ ಪವಾಡ ಪುರುಷ, ಸಮಾಜದ ಏಳ್ಗೆಗೆ ತಮ್ಮ ಬದುಕನ್ನೇ ಸಮರ್ಪಿಸಿದ ಯುಗ ಪುರುಷ ಸಂತ ಶಿಶುನಾಳ ಶರೀಫರು ಎಂದು ಜನಪದ ಕಲಾವಿದ ಗವಿಸಿದ್ದಯ್ಯ ಹಳ್ಳಿಕೇರಿಮಠ ಅಭಿಮತ ವ್ಯಕ್ತಪಡಿಸಿದರು.

ತಾಲೂಕಾ ಕನ್ನಡ ಸಾಹಿತ್ಯ ಪರಿಷತ್ತು ಗದಗ ಆಯೋಜಿಸಿದ್ದ 'ಮನೆಯಂಗಳದಲ್ಲಿ ಸಾಹಿತ್ಯ' ಕಾರ್ಯಕ್ರಮವನ್ನು ನರಸಾಪೂರದ ಕೆ ಜಿ ಹೊನ್ನಮ್ಮದೇವಿ ಇವರ ಮನೆಯಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಕ್ರಮದಲ್ಲಿ ಶರೀಫಜ್ಜನ ಸ್ಮರಣೆ ಮತ್ತು ಸ್ವರಚಿತತತ್ವ



ಪದಗೋಷ್ಠಿ ಕಾರ್ಯಕ್ರಮದ ಅತಿಥಿಗಳಾಗಿ ಶರೀಫಜ್ಜನ ಜೀವನಜೋಕಾಲಿ ಕುರಿತು ಉಪನ್ಯಾಸ ನೀಡಿ ಮಾತನಾಡುತ್ತ, ಆರನ್ನು ಅದುಮಿಟ್ಟು ಬದುಕಿದವರು ಮಾತ್ರ ಈ ಸಮಾಜದ ಶ್ರೇಷ್ಠರಾಗಿ ಬದುಕಿ ಬಾಳುತ್ತಾರೆ. ಮೋಹದ ಮಾಯೆಗೆ ಮರುಳಾದವರು ನೆನಪಿಲ್ಲದೆ ಮಾಯವಾಗುತ್ತಾರೆ ಎಂಬುವದನ್ನು ಶರೀಫರತತ್ವ ಪದಗಳಲ್ಲಿ ನಾವು ಕಂಡಿದ್ದೇವೆ. ಕೇಳಿದ್ದೇವೆ ಎಂದು ತಿಳಿಸಿ, ಹಲವಾರು ತತ್ವ ಪದಗಳ ಮೂಲಕ ಮನ ಸೆಳೆದರು.

ಕಾರ್ಯಕ್ರಮ ಉದ್ಘಾಟಿಸಿದ ದೊಡ್ಡಾಟ ಕಲಾವಿದ ಅಶೋಕ ಸುತಾರ ಮಾತನಾಡಿ, ಶರೀಫರು ಕರುನಾಡು ಕಂಡ ಮಹಾನ್ ಸಂತ. ಅವರ ಜೀವನ ಓದುವದೇ ನಮ್ಮ ಬದುಕಿಗೆ ಮಾರ್ಗದರ್ಶನ. ಅವರ ತತ್ವಪದ ಮತ್ತು ಸಿದ್ಧಾಂತಗಳನ್ನು ಸ್ಮರಿಸಿ ಅವರ ಸನ್ಮಾರ್ಗದಲ್ಲಿ ಸಾಗಬೇಕು ಎಂದರು.

> ಈ ಕಾರ್ಯಕ್ರಮದ ಉದ್ದೇಶ, ಕನ್ನಡ ಸಾಹಿತ್ಯ ಮನೆ ಮನೆಗೂ ತಲುಪಬೇಕು ಎಂಬುದಾಗಿದೆ. ಕುಟುಂಬಗಳನ್ನು ಬಾಂಧವ್ಯದಿಂದ ಗಟ್ಟಿಗೊಳಿಸುವ ಶಕ್ತಿ ಸಾಹಿತ್ಯಕ್ಕಿದೆ. ಸಾಹಿತ್ಯ ಸೇವೆಗೆ ಯಾರು ಇಚ್ಛಿಸುತ್ತಾರೋ ಅವರ ಮನೆ ಅಂಗಳಕ್ಕೆ ಕಲಾವಿದರು, ಕವಿಗಳು ಬರುತ್ತೇವೆ. ನಾವೆಲ್ಲರೂ ಸಂಸ್ಕೃತಿ-ಸಂಪ್ರದಾಯಗಳನ್ನು ಉಳಿಸಿ ಬೆಳೆಸುವಲ್ಲಿ ಶ್ರಮಿಸೋಣ.
>
> **– ಡಾ. ರಶ್ಮಿ ಅಂಗಡಿ.**

ವೇದಿಕೆಯ ಮೇಲೆ ಡಾ. ರಾಜೇಂದ್ರ ಗಡಾದ, ಶಿವಾನಂದ ಭಜಂತ್ರಿ, ಶರಣೆ ರತ್ನಕ್ಕ ಪಾಟೀಲ, ಕೆ ಜಿ ಹೊನ್ನಮ್ಮದೇವಿ, ಧರ್ಮೇಂದ್ರ ಇಟಗಿ, ಚಂದ್ರಕಲಾ ಇಟಗಿಮಠ, ನಿರ್ಮಲಾ ತರವಾಡೆ, ನಿಖಿತಾ ಸುತಾರ ಉಪಸ್ಥಿತದ್ದರು. ಕಳಕಪ್ಪ ಜಲ್ಲಿಗೇರಿ, ಅಶ್ವಿನಿ ಜೋಶಿ, ಶಿವಲೀಲಾ ಧನ್ನಾ, ಮಧುರಾಜ್ ರಾಂಪೂರ, ಸೌಭಾಗ್ಯ ಆರೇರ್, ಕೊಟ್ರೇಶ ಜವಳಿ, ಕೆ ಜಿ ಹೊನ್ನಾದೇವಿ ಮುಂತಾದವರು ತತ್ವಪದಗಳನ್ನು ವಾಚಿಸಿದರು. ಗೌರವ ಕಾರ್ಯದರ್ಶಿ ಪ್ರೊ. ಬಸವರಾಜ ನೆಲಜೇರಿ, ನಿರೂಪಿಸಿದರು. ಕರಿಬಸಪ್ಪ ಬಾಳಿಕಾಯಿ ವಂದಿಸಿದರು.

# ದೇಶದ ಅಭಿವೃದ್ಧಿಗೆ ರಾಷ್ಟ್ರೀಕೃತ ಬ್ಯಾಂಕುಗಳ ಪಾತ್ರ ಮಹತ್ವದ್ದು

■ವಿಜಯಸಾಕ್ಷಿ ಸುದ್ದಿ, ಗದಗ

ದೇಶದ ಜನ ಸಾಮಾನ್ಯರಿಗೂ ಬ್ಯಾಂಕುಗಳ ಸೇವೆ ದೊರೆಯುವುದರ ಜೊತೆಗೆ ದೇಶದ ಆರ್ಥಿಕತೆಯ ಅಭಿವೃದ್ಧಿಗೆ ರಾಷ್ಟ್ರೀಕೃತ ಬ್ಯಾಂಕುಗಳು ಪಾತ್ರ ಮಹತ್ವದ್ದಾಗಿದೆ ಎಂದು ಜಿಲ್ಲಾ ಬ್ಯಾಂಕ್ ನೌಕರರ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಹನುಮೇಶ ಗಂಗರಾಹುತರ ಹೇಳಿದರು.



ಅವರು ಹರ್ಲಾಪೂರ ಕೆನರಾ ಬ್ಯಾಂಕ್ ಹಾಗೂ ಗದಗ ಜಿಲ್ಲಾ ಬ್ಯಾಂಕ್ ನೌಕರರ ಸಂಘಟನೆಯಿಂದ ಆಯೋಜಿಸಿದ್ದ ಬ್ಯಾಂಕುಗಳು ರಾಷ್ಟ್ರೀಕರಣಗೂಂಡು 55ನೇ ವರ್ಷ ಪೂರೈಸಿದ ಪ್ರಯುಕ್ತ ಜಿಲ್ಲಾದ್ಯಂತ ಕೆನರಾ ಬ್ಯಾಂಕ್, ಬ್ಯಾಂಕ್ ಆಫ್ ಬರೋಡಾ, ಯೂನಿಯನ್ ಬ್ಯಾಂಕ್, ಪಂಜಾಬ್ ನ್ಯಾಷನಲ್ ಬ್ಯಾಂಕ್ ಹಾಗೂ ಇನ್ನೂಳಿದ ಎಲ್ಲಾ ರಾಷ್ಟ್ರೀಕೃತ ಬ್ಯಾಂಕುಗಳು 55ನೆಯ ವಾರ್ಷಿಕೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

19 ಜುಲೈ 1969 ರಂದು 14 ಬ್ಯಾಂಕುಗಳನ್ನು ಅಂದಿನ ಪ್ರಧಾನಿ ಶ್ರೀಮತಿ ಇಂದಿರಾಗಾಂಧಿ ಬ್ಯಾಂಕುಗಳನ್ನು ರಾಷ್ಟ್ರೀಕರಣಗೊಳಿಸಿ ದೇಶದ ಜನ ಸಾಮಾನ್ಯರಿಗೂ ಬ್ಯಾಂಕುಗಳ ಸೇವೆ ಸಿಗುವುದರ ಜೋತೆಗೆ ದೇಶದ ಆರ್ಥಿಕತೆಯ ಅಭಿವೃದ್ಧಿಗೆ ಸಾಕ್ಷಿಯಾದರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಹರ್ಲಾಪೂರ ಕೆನರಾ ಬ್ಯಾಂಕ ಶಾಖಾ ವ್ಯವಸ್ಥಾಪಕರಾದ ಗವಿಸಿದ್ದಪ್ಪ ಅಳವುಂಡಿ, ಪ್ರಿಯಾ ಸಜ್ಜನರ, ಅಕ್ಕಮಹಾದೇವಿ, ಯಲ್ಲಪ್ಪ ಎಚ್ ಬಾಬರಿ, ರುದ್ರಗೌಡ ಗೌಡ್ರು, ಪರಪ್ಪ ಹರಿಜನ ಹಾಗೂ ಗದಗ ಶಾಖೆಯ ಗಣೇಶ, ಹರೀಶ, ಮೌಲಾಸಾಬ, ಮಂಜುನಾಥ, ಸಿದ್ದು ಉಮಚಗಿ, ಸುನೀಲಕುಮಾರ ಮತ್ತು ಗ್ರಾಹಕರು ಪಾಲ್ಗೊಂಡಿದ್ದರು.

# ಅಸ್ವಸ್ಥ ಗೊಂಡ ಶಾಸಕ ಯತ್ನಾಳ, ಬಿಜೆಪಿ ಪ್ರತಿಭಟನೆ



■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಪೀಠಕ್ಕೆ ಅಗೌರವ ತೋರಿಸಿದ ಹಿನ್ನೆಲೆಯಲ್ಲಿ ವಿಧಾನಸಭೆ ಅಧಿವೇಶನದಿಂದ 10 ಬಿಜೆಪಿ ಶಾಸಕರನ್ನು ಸ್ಪೀಕರ್ ಯು.ಟಿ.ಖಾದರ್ ಅಮಾನತು ಮಾಡಿ ಆದೇಶಿಸಿದ್ದಾರೆ.

ಈ ವೇಳೆ ಪ್ರತಿಭಟನಾ ನಿರತ ಬಿಜೆಪಿ ಸದಸ್ಯರನ್ನು ಮಾರ್ಷಲ್‌ಗಳು ಹೊತ್ತೊಯ್ದಿದ್ದಾರೆ. ಮತ್ತೊಂದು ಕಡೆ ಬಿಜೆಪಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಅಸ್ವಸ್ಥಗೊಂಡು ಕುಸಿದು ಬಿದ್ದ ಪ್ರಕರಣವೂ ನಡೆಯಿತು. ಅಸ್ವಸ್ಥಗೊಂಡ ಅವರನ್ನು ತಕ್ಷಣ ಸ್ಟ್ರೆಚರ್‌ನಲ್ಲಿ ಮಾರ್ಷಲ್‌ಗಳು ಹೊತ್ತು ಕೊಂಡು ಹೋಗಿ, ಆಸ್ಪತ್ರೆಗೆ ರವಾನಿಸಿದರು.

ಪ್ರವೇಶದ್ವಾರದ ಗ್ಲಾಸ್ ಪೀಸ್ ಪೀಸ್: ಅಮಾನತು ಆದೇಶವನ್ನು ಖಂಡಿಸಿ ಪ್ರತಿಪಕ್ಷ ಸದಸ್ಯರು ಮತ್ತಷ್ಟು ಆಕ್ರೋಶ ವ್ಯಕ್ತಪಡಿಸಿದರು. ಸ್ಪೀಕರ್ ಕಚೇರಿ ಮುಂದೆ ಪ್ರತಿಭಟನೆ ನಡೆಸುತ್ತಿದ್ದಾಗ ಮಾರ್ಷಲ್‌ಗಳು ಮಧ್ಯಪ್ರವೇಶಿಸಿದರು.

ಈ ವೇಳೆ, ವಿಧಾನಸಭೆ ಪ್ರವೇಶ ದ್ವಾರದ ಬಳಿ ಮಾರ್ಷಲ್ ಹಾಗೂ ಬಿಜೆಪಿ ಶಾಸಕರ ನಡುವೆ ಮಾತಿನ ಚಕಮಕಿ ನಡೆಯಿತು. ನೂಕು ನುಗ್ಗಲು ವೇಳೆ ವಿಧಾನಸಭೆ ಪ್ರವೇಶ ದ್ವಾರದ ಗ್ಲಾಸ್ ಬಾಗಿಲು ಪುಡಿ ಪುಡಿಯಾಯಿತು.

ಕಲಾಪ ರಣಾಂಗಣ: ಇದಕ್ಕೂ ಮುನ್ನ, ಭೋಜನ ವಿರಾಮದ ಬಳಿಕ ವಿಧಾನಸಭೆ ಕಲಾಪ ರಣಾಂಗಣವಾಗಿ ಮಾರ್ಪಟ್ಟಿತು. ಅಮಾನತಾದ 10 ಶಾಸಕರಾದ ಅಶ್ವತ್ಥನಾರಾಯಣ್, ಅರವಿಂದ ಬೆಲ್ಲದ್, ವೇದ ವ್ಯಾಸ್ ಕಾಮತ್, ಆರಗ ಜ್ಞಾನೇಂದ್ರ, ಧೀರಜ್ ಮುನಿರಾಜು, ಆರ್.ಅಶೋಕ್‌ರನ್ನು ಮಾರ್ಷಲ್‌ಗಳು ಹರಸಾಹಸ ಪಟ್ಟು ಸದನದಿಂದ ಹೊತ್ತೊಯ್ದು, ಹೊರಗೆ ಕಳುಹಿಸಿದರು.

ಇದಾದ ಬಳಿಕ ಅಮಾನತಾದ ಬಿಜೆಪಿ ಶಾಸಕರು ಇತರ ಬಿಜೆಪಿ ಶಾಸಕರು ಜೊತೆಗೂಡಿ ವಿಧಾನಸಭೆ ಮೊಗಸಾಲೆಯಲ್ಲಿನ ಸ್ಪೀಕರ್ ಕಚೇರಿ ಮುಂದೆ ಕೂತು ಪ್ರತಿಭಟನೆ ನಡೆಸಿದರು. ಈ ವೇಳೆ, ಸ್ಪೀಕರ್ ಹಾಗೂ ಸರ್ಕಾರದ ವಿರುದ್ಧ ಬಿಜೆಪಿ ಸದಸ್ಯರು ಧಿಕ್ಕಾರ ಕೂಗಿದರು.

# ಬೆಂಗಳೂರಲ್ಲಿ ಮೊದಲ ಬಾರಿಗೆ ಡ್ರೋನ್ ಮೂಲಕ ಬೀದಿ ನಾಯಿಗಳ ಸಮೀಕ್ಷೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ನಗರದಲ್ಲಿ ಬೀದಿ ನಾಯಿಗಳ ಸಮೀಕ್ಷೆ ನಡೆಸಲು ಪಾಲಿಕೆ ಡ್ರೋನ್ ಬಳಸಲು ಮುಂದಾಗಿದ್ದು, ಐತಿಹಾಸಿಕ ಕ್ರಮ ಎಂಬ ಶ್ಲಾಘನೆ ಎಲ್ಲೆಡೆ ವ್ಯಕ್ತವಾಗುತ್ತಿದೆ.

ಕಳೆದ ವಾರದಿಂದ ಸಿಬ್ಬಂದಿ ಗಣತಿ ನಡೆಸುತ್ತಿದ್ದಾರೆ. ಇದರ ಮುಂದುವರೆದ ಭಾಗವಾಗಿ ಪಾಲಿಕೆಯ ಪಶುಪಾಲನಾ ವಿಭಾಗ ಐಐಎಸ್‌ಸಿ ಸಹಯೋಗದಲ್ಲಿ ಡ್ರೋನ್ ಬಳಸಿ ನಿಖರವಾಗಿ ಬೀದಿ ನಾಯಿಗಳ ಸಂಖ್ಯೆ ಪತ್ತೆ ಹಚ್ಚಲಾಗುತ್ತಿದೆ.



ಪಾಲಿಕೆ ವ್ಯಾಪ್ತಿಯಲ್ಲಿ ಬೀದಿ ನಾಯಿಗಳ ಸಂಖ್ಯೆ ನಿಯಂತ್ರಣ ಹಾಗೂ ರೇಬಿಸ್ ರೋಗ ತಡೆಗಟ್ಟಲು ಬೀದಿ ನಾಯಿಗಳ ಸಂತಾನಹರಣ ಶಸ್ತ್ರ ಚಿಕಿತ್ಸೆ ಮತ್ತು ಆಯಂಟಿರೇಬಿಸ್ ಲಸಿಕಾ ಕಾರ್ಯಕ್ರಮವನ್ನು ಪಾಲಿಕೆಯ ಪಶುಪಾಲನಾ ವಿಭಾಗ ಕೈಗೆತ್ತಿಕೊಂಡಿದೆ. 2019ನೇ ಸಾಲಿನಲ್ಲಿ ಬೀದಿ ನಾಯಿಗಳ ಸಮೀಕ್ಷೆ ಮಾಡಲಾಗಿದ್ದು, 3.10 ಲಕ್ಷ ಬೀದಿ ನಾಯಿಗಳು ಇರುವುದಾಗಿ ಅಂದಾಜಿಸಲಾಗಿತ್ತು.

50 ಜನರ ತಂಡ ರಚನೆ: ಪಾಲಿಕೆಯ 8 ವಲಯಗಳಲ್ಲಿ ಸಂತಾನಹರಣ ಶಸ್ತ್ರ ಚಿಕಿತ್ಸೆ ಮತ್ತು ಆಯಂಟಿರೇಬಿಸ್ ಲಸಿಕಾ ಕಾರ್ಯಕ್ರಮ 2019ನೇ ಸಾಲಿನಿಂದ ಇಲ್ಲಿಯವರೆಗೆ ನಿರಂತರವಾಗಿ ನಡೆಸಲಾಗುತ್ತಿದೆ. ಕಾರ್ಯಕ್ರಮದ ಯಶಸ್ವಿ ಅನುಷ್ಠಾನದ ಬಗ್ಗೆ ತಿಳಿಯುವ ಸಲುವಾಗಿ ಬೀದಿ ನಾಯಿಗಳ ಸಮೀಕ್ಷೆಯನ್ನು ಮತ್ತೆ ಕೈಗೊಳ್ಳಲಾಗುತ್ತಿದೆ. ಬೀದಿ ನಾಯಿ ಸಮೀಕ್ಷೆಯನ್ನು ಕ್ರಮಬದ್ಧವಾಗಿ, ವ್ಯವಸ್ಥಿತವಾಗಿ ವಾರ್ಡ್‌ವಾರು ನಿರ್ವಹಿಸಲು ಒಂದು ತಂಡದಲ್ಲಿ ಇಬ್ಬರು ಸಮೀಕ್ಷಾದಾರರಂತೆ ಒಟ್ಟು 50 ಜನರ ತಂಡ ರಚಿಸಲಾಗಿದೆ. ಇದರ ಮೇಲ್ವಿಚಾರಣೆಗಾಗಿ 15 ಮೇಲ್ವಿಚಾರಕರನ್ನು ನಿಯೋಜಿಸಲಾಗಿದೆ.

ಡ್ರೋನ್ ಮೂಲಕ ಬೀದಿ ನಾಯಿಗಳ ಸಮೀಕ್ಷೆ

1,360 ಕಿರು ವಲಯಗಳಲ್ಲಿ ಸಮೀಕ್ಷೆ: ಒಟ್ಟು 840 ಚ.ಕಿ.ಮೀ ವ್ಯಾಪ್ತಿಯುಳ್ಳ ಬಿಬಿಎಂಪಿಯನ್ನು (ವಸತಿ ಪ್ರದೇಶ, ಕೊಳಚೆ ಪ್ರದೇಶ, ವಾಣಿಜ್ಯ ಪ್ರದೇಶ ಹಾಗೂ ಕೆರೆಗಳು) 0.5 ಚ.ಕಿ.ಮೀ. ವ್ಯಾಪ್ತಿಯ 6,850 ಕಿರು ವಲಯಗಳನ್ನಾಗಿ ವಿಂಗಡಿಸಲಾಗಿದೆ. ಅದರಲ್ಲಿ ಶೇ.20ರಷ್ಟು ಸ್ಯಾಂಪಲ್‌ಗಳನ್ನು ಅಂದರೆ 1,360 ಕಿರು ವಲಯಗಳಲ್ಲಿ ಸಮೀಕ್ಷೆಗೆ ಆಯ್ಕೆ ಮಾಡಲಾಗಿದೆ. ಅದರಂತೆ, ಬೆಂಗಳೂರು ನಗರ ಜಿಲ್ಲೆಯ ಪಶುಪಾಲನಾ ಹಾಗೂ ಪಶುವೈದ್ಯ ಸೇವಾ ಇಲಾಖೆಯ 70 ಅರೆತಾಂತ್ರಿಕ ಸಿಬ್ಬಂದಿ ಹಾಗೂ ಪಾಲಿಕೆಯ ಪಶುಪಾಲನಾ ವಿಭಾಗದ 30 ಸಿಬ್ಬಂದಿ ಸೇರಿದಂತೆ 100 ಮಂದಿಯ ಮೂಲಕ ಈ ಸಮೀಕ್ಷೆಯನ್ನು ಮಾಡಲಾಗುತ್ತಿದೆ.

# ಏಷ್ಯಾಕಪ್ ಟೂರ್ನಿ ವೇಳಾಪಟ್ಟಿ ಪ್ರಕಟ: ಸೆ.2ರಂದು ಭಾರತ – ಪಾಕ್ ಮುಖಾಮುಖಿ!

■ವಿಜಯಸಾಕ್ಷಿ ಸುದ್ದಿ, ಮುಂಬೈ

ಏಷ್ಯಾಕಪ್ ಕ್ರಿಕೆಟ್ ಟೂರ್ನಿಯ ವೇಳಾಪಟ್ಟಿಯನ್ನು ಏಷ್ಯನ್ ಕ್ರಿಕೆಟ್ ಕೌನ್ಸಿಲ್ ಬುಧವಾರ ಪ್ರಕಟಿಸಿದೆ. ಸೆಪ್ಟೆಂಬರ್ 2ರಂದು ಕ್ಯಾಂಡಿಯಲ್ಲಿ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನದ ವಿರುದ್ಧದ ಪಂದ್ಯದ ಮೂಲಕ ಟೀಂ ಇಂಡಿಯಾ ಏಷ್ಯಾಕಪ್ ಅಭಿಯಾನವನ್ನು ಪ್ರಾರಂಭಿಸಲಿದೆ.

ಸೆ.10ರಂದು ಕೊಲಂಬೊದಲ್ಲಿ ಸೂಪರ್ 4 ಪಂದ್ಯದಲ್ಲಿ ಮತ್ತೊಮ್ಮೆ ಭಾರತ ಹಾಗೂ ಪಾಕಿಸ್ತಾನ ಮುಖಾಮುಖಿಯಾಗಲಿವೆ.

ಈ ಏಷ್ಯಾಕಪ್ ಕ್ರಿಕೆಟ್ ಟೂರ್ನಿಯಲ್ಲಿ ಆರು ತಂಡಗಳು ಪಾಲ್ಗೊಳ್ಳಲಿವೆ. ಈ ಬಾರಿ ಏಷ್ಯಾಕಪ್ ಹೈಬ್ರಿಡ್ ಮಾದರಿಯಲ್ಲಿ ನಡೆಯುತ್ತಿದೆ. ನಾಲ್ಕು ಪಂದ್ಯಗಳು ಪಾಕಿಸ್ತಾನದಲ್ಲಿ ಜರುಗಲಿದ್ದು, ಫೈನಲ್ ಸೇರಿದಂತೆ ಒಂಬತ್ತು ಪಂದ್ಯಗಳು ಶ್ರೀಲಂಕಾದ ಕ್ಯಾಂಡಿ ಮತ್ತು ಕೊಲಂಬೊದಲ್ಲಿ ನಡೆಯಲಿವೆ. ಆಗಸ್ಟ್ 30ರಂದು ಮೊದಲ ಪಂದ್ಯವು ಮುಲ್ತಾನ್‌ನಲ್ಲಿ ಪಾಕಿಸ್ತಾನ ಹಾಗೂ ನೇಪಾಳ ನಡುವೆ ನಡೆಯಲಿದೆ. ಸೆ.17ರಂದು ಪ್ರೇಮದಾಸ ಕ್ರೀಡಾಂಗಣದಲ್ಲಿ ಫೈನಲ್ ಹಣಾಹಣಿ ನಡೆಯಲಿದೆ.

ಭಾರತ, ಪಾಕಿಸ್ತಾನ ಮತ್ತು ನೇಪಾಳ 'ಎ' ಗುಂಪಿನಲ್ಲಿದ್ದರೆ, ಅಫ್ಘಾನಿಸ್ತಾನ, ಶ್ರೀಲಂಕಾ ಮತ್ತು ಬಾಂಗ್ಲಾದೇಶ 'ಬಿ' ಗುಂಪಿನಲ್ಲಿವೆ. ಏಷ್ಯನ್ ಕ್ರಿಕೆಟ್ ಕೌನ್ಸಿಲ್ (ಎಸಿಸಿ) ಅಧ್ಯಕ್ಷ ಜಯ್ ಶಾ ವೇಳಾಪಟ್ಟಿಯನ್ನು ಬಿಡುಗಡೆ ಮಾಡಿದ್ದಾರೆ. ಈ ಕುರಿತ ಟ್ವೀಟ್ ಮಾಡಿರುವ ಜಯ್ ಶಾ, "ಬಹು ನಿರೀಕ್ಷಿತ ಪುರುಷರ ಏಕದಿನ ಏಷ್ಯಾಕಪ್ 2023ರ ವೇಳಾಪಟ್ಟಿಯನ್ನು ಪ್ರಕಟಿಸಲು ನನಗೆ ಸಂತೋಷವಾಗಿದೆ. ವೈವಿಧ್ಯಮಯ ರಾಷ್ಟಗಳನ್ನು ಒಟ್ಟಿಗೆ ಒಂದುಗೂಡಿಸುವ ಏಕತೆ ಮತ್ತು ಒಗ್ಗಟ್ಟಿನ ಸಂಕೇತ! ನಾವು ಕ್ರಿಕೆಟ್ ಶ್ರೇಷ್ಠತೆಯ ಸಂಭ್ರಮದಲ್ಲಿ ಕೈಜೋಡಿಸೋಣ ಮತ್ತು ನಮ್ಮೆಲ್ಲರನ್ನು ಸಂಪರ್ಕಿಸುವ ಬಂಧಗಳನ್ನು ಪಾಲಿಸೋಣ ಎಂದು ಹೇಳಿದ್ದಾರೆ.

ರೋಹಿತ್ ಶರ್ಮಾ ನೇತೃತ್ವದ ಭಾರತ ತಂಡ ಸೆಪ್ಟೆಂಬರ್ 2ರಂದು ಕ್ಯಾಂಡಿಯಲ್ಲಿ ಸಾಂಪ್ರದಾಯಿಕ ಎದುರಾಳಿ ಪಾಕಿಸ್ತಾನ ವಿರುದ್ಧ ತನ್ನ ಅಭಿಯಾನವನ್ನು ಪ್ರಾರಂಭಿಸಲಿದೆ. ಎರಡನೇ ಗುಂಪು ಹಂತದ ಪಂದ್ಯವನ್ನು ಸೆಪ್ಟೆಂಬರ್ 4ರಂದು ನೇಪಾಳ ವಿರುದ್ಧ ಇದೇ ಮೈದಾನದಲ್ಲಿ ಭಾರತ ಆಡಲಿದೆ. ಸೂಪರ್ ಫೋರ್ ಹಂತದ ಪಂದ್ಯಗಳು ಸೆಪ್ಟೆಂಬರ್ 6ರಿಂದ ಆರಂಭವಾಗಲಿವೆ. ಈ ಬಾರಿಯ ಏಷ್ಯಾಕಪ್ ಟೂರ್ನಿಯ ಆತಿಥ್ಯವನ್ನು ಪಾಕಿಸ್ತಾನ ವಹಿಸಬೇಕಿತ್ತು. ಭಾರತೀಯ ಕ್ರಿಕೆಟ್ ಮಂಡಳಿಯು ಪಾಕ್‌ಗೆ ತಂಡವನ್ನು ಕಳುಹಿಸಲು ನಿರಾಕರಿಸಿತ್ತು. ಇದರಿಂದ ಹೈಬ್ರಿಡ್ ಮಾದರಿಯಲ್ಲಿ ಟೂರ್ನಿಯನ್ನು ಆಯೋಜಿಸಲಾಗಿದೆ.

## ಇದೇ ನೋಡಿ ಐತಿಹಾಸಿಕ ಲಕ್ಕುಂಡಿ ಗ್ರಾಮದ ನೈಜ ದರ್ಶನ

# ಹೂಳು ಬಿದ್ದ ಗಟಾರು, ರಸ್ತೆಗೆ ಚರಂಡಿ ನೀರು!

■ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ಇಲ್ಲಿಯ ಸರಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಎದುರಿನ ರಸ್ತೆಯ ಮೇಲೆ ಚರಂಡಿ ನೀರು ಹರಿಯುತ್ತಿರುವುದರಿಂದ ಶಾಲಾ ಮಕ್ಕಳು ತೊಂದರೆ ಅನುಭವಿಸುವಂತಾಗಿದ್ದು, ಸಾರ್ವಜನಿಕರು ಚರಂಡಿ ನೀರಿನ ಗಬ್ಬು ವಾಸನೆಗೆ ಮೂಗು ಮುಚ್ಚಿಕೊಂಡು ಸಂಚರಿಸುವಂತಾಗಿದೆ.



ಕೊಪ್ಪಳ-ಬಳ್ಳಾರಿ ಮುಖ್ಯ ರಸ್ತೆಯ ಪಕ್ಕ ಇರುವ ದೊಡ್ಡ ಗಟಾರವು ಹಲವು ವರ್ಷಗಳಿಂದ ಹೂಳು ತುಂಬಿಕೊಂಡಿದ್ದು, ಕಳೆದ ಫೆಬ್ರುವರಿ ತಿಂಗಳಲ್ಲಿ ಡಾಂಬರು ರಸ್ತೆ ನಿರ್ಮಾಣ ಕಾಮಗಾರಿ ಸಮಯದಲ್ಲಿ ಈ ಗಟಾರು ಮೇಲೆ ಕೆಂಪು ಮಣ್ಣನ್ನು ಹಾಕಿದ್ದರಿಂದ ಸಂಪೂರ್ಣವಾಗಿ ಮುಚ್ಚಿ ಹೋಗಿದೆ. ಇದರಿಂದ, ಗಲ್ಲಿಗಳಿಂದ ಹರಿಯುವ ಸಣ್ಣ ಗಟಾರುಗಳ ಕೊಳಚೆ ನೀರು ಬಸ್ ನಿಲ್ದಾಣದ ಮುಂದಿರುವ ಚರಂಡಿ ಸೇರಿ, ಮುಂದೆ ಸಾಗಲು ದಾರಿ ಇಲ್ಲದೇ ಮುಖ್ಯ ರಸ್ತೆಯ ಮೇಲೆಯೇ ಹರಿಯುತ್ತಿರವುದರಿಂದ ಸಾರ್ವಜನಿಕರಿಗೆ ಸಹಿಸಲಸಾಧ್ಯವಾದ ಹಿಂಸೆಯಾಗುತ್ತಿದೆ ಎಂದು ಗ್ರಾಮಸ್ಥರು ದೂರಿದ್ದಾರೆ.

ಸರಕಾರಿ ಮಾದರಿಯ ಪ್ರಾಥಮಿಕ ಕನ್ನಡ ಗಂಡು ಮಕ್ಕಳ ಶಾಲೆ ಹಾಗೂ ಬಾಲಕಿಯರ ಸರಕಾರಿ ಪ್ರೌಢಶಾಲೆಯ ಸುಮಾರು 450ಕ್ಕೂ ಹೆಚ್ಚು ವಿದ್ಯಾರ್ಥಿಗಳು ಈ ರಸ್ತೆಯ ಮೇಲೆ ಹರಿಯುವ ಚರಂಡಿ ನೀರನ್ನು ತುಳಿದು ಅಥವಾ ದಾಟಿಕೊಂಡೇ ಪ್ರತಿನಿತ್ಯ ಶಾಲೆಗೆ ಹೋಗಿ ಬರುವ ಅನಿವಾರ್ಯತೆಯಿದೆ. ಹಲವಾರು ಸಾಂಕ್ರಾಮಿಕ ರೋಗಗಳು ಅನಾಯಾಸವಾಗಿ ಹರುಡುವ ಭಯ ವಿದ್ಯಾರ್ಥಿಗಳಲ್ಲಿ ಮೂಡಿದ್ದು, ಮಧ್ಯಾಹ್ನದ ಬಿಸಿಯೂಟವನ್ನು ಚರಂಡಿ ನೀರಿನ ಗಬ್ಬ ವಾಸನೆಯೊಂದಿಗೇ ಸೇವಿಸುವಂತಾಗಿದೆ. ಪ್ರಯಾಣಿಕರು ನಿಲ್ದಾಣದಲ್ಲಿ ಮೂಗು ಮುಚ್ಚಿಕೊಂಡೇ ಬಸ್ ಕಾಯುವ ಪರಿಸ್ಥಿತಿ ಬಂದಿದೆ ಎಂದು ಬಸ್ ಪ್ರಯಾಣಿಕರು ಮತ್ತು ವಿದ್ಯಾಥಿಗಳು ಅಳಲು ತೋಡಿಕೊಂಡಿದ್ದಾರೆ.

ಕಳೆದ ಹತ್ತಾರು ವರ್ಷಗಳಿಂದ ಸರಾಗವಾಗಿ ಗಟಾರು ಮೂಲಕ ಹರಿದು ಹೋಗುತ್ತಿದ್ದ ಚರಂಡಿ ನೀರು, 2 ತಿಂಗಳಿಂದ ಹೂಳು ತುಂಬಿದ್ದರಿಂದ ನೀರು ರಸ್ತೆಯ ಮೇಲೆ ಹರಿಯುತ್ತಿದೆ. ಈ ವಿಷಯವನ್ನು ಸಾಕಷ್ಟು ಬಾರಿ ಅಭಿವೃದ್ಧಿ ಅಧಿಕಾರಿಗಳ ಗಮನಕ್ಕೆ ತಂದರೂ, ನಿಷ್ಕಾಳಜಿ ವಹಿಸಿದ್ದಾರೆ. ಗ್ರಾ ಪಂ ಜನಪ್ರತಿನಿಧಿಗಳು ಈ ಸಮಸ್ಯೆಯ ಕುರಿತು ಗೊತ್ತಿದ್ದರೂ ಸಹ ಜಾಣ ಕಿವುಡರಾಗಿದ್ದು, ಕಂಡೂ ಕಾಣದವರಂತೆ ನಿರ್ಲಕ್ಷ್ಯದಿಂದ ಓಡಾಡುತ್ತಿದ್ದಾರೆ. ನೂರೊಂದು ಗುಡಿ-ದೇಗುಲಗಳ ಐತಿಹಾಸಿಕ ತಾಣವಾಗಿರುವ ಲಕ್ಕುಂಡಿ ಗ್ರಾಮಕ್ಕೆ ಇಂಥ ಸಮಸ್ಯೆಗಳು ಕಪ್ಪು ಚುಕ್ಕೆಯಾಗಿ ಗೋಚರಿಸುವಂತಾಗಿದೆ. ಶೀಘ್ರವಾಗಿ ಗಟಾರು ಹೂಳನ್ನು ಸ್ವಚ್ಛಗೊಳಿಸಿ, ಹೊಸ ಗಟಾರು ನಿರ್ಮಿಸಬೇಕೆಂದು ಗ್ರಾ ಪಂ ಮಾಜಿ ಸದಸ್ಯ ಪ್ರಕಾಶ ಅರಹುಣಶಿ, ಚಂದ್ರು ಬಣವಿ, ದೇವಪ್ಪ ಬಡಿಗೇರ, ಸುರೇಶ ಬಣವಿ, ಪರಸನಗೌಡ ಪಾಟೀಲ, ಪರಸಪ್ಪ ನೂಕಾಪೂರ ಮುಂತಾದವರು ಆಗ್ರಹಿಸಿದ್ದಾರೆ.



# ರೋಟರಿ ಗದಗ ಸೆಂಟ್ರಲ್‌ನಲ್ಲಿ ಹಿರಿಯ ಸದಸ್ಯರಿಗೆ ಸನ್ಮಾನ




■ವಿಜಯಸಾಕ್ಷಿ ಸುದ್ದಿ, ಗದಗ

ರೋಟರಿ ಸೋಶಿಯಲ್ ಆ್ಯಂಡ್ ಕಲ್ಚರಲ್ ಟ್ರಸ್ಟಿನ ರೋಟರಿ ಭವನದಲ್ಲಿ ಜರುಗಿದ ರೋಟರಿ ಗದಗ ಸೆಂಟ್ರಲ್‌ನ ನೂತನ ಪದಾಧಿಕಾರಿಗಳ ಪದಗ್ರಹಣ ಸಮಾರಂಭದಲ್ಲಿ ಧಾರ್ಮಿಕ, ಶೈಕ್ಷಣಿಕ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿದ ಹಿರಿಯರಾದ ಗಿರಿಜಾದೇವಿ ಎಸ್ ಹಿರೇಮಠ, ವನಜಾಕ್ಷಿ ಎಸ್ ತೋಟಗಂಟಿಮಠ, ಪಾರ್ವತಿದೇವಿ ಪಿ ಶಾಬಾದಿಮಠ ಹಾಗೂ ಪುಷ್ಪಾವತಿ ವಿ ಕಬಾಡಿ ಅವರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ರೋಟರಿ ಗದಗ ಸೆಂಟ್ರಲ್‌ನ ನೂತನ ಅಧ್ಯಕ್ಷ ರೋ. ವಿಜಯಕುಮಾರ ಎಸ್ ಹಿರೇಮಠ, ಕಾರ್ಯದರ್ಶಿ ರೋ. ಡಾ. ಸಂತೋಷ ತೋಟಗಂಟಿಮಠ, ಖಜಾಂಚಿ ರೋ. ಸುನೀಲ್ ಕಬಾಡಿ, ಅಸಿಸ್ಟಂಟ್ ಗವರ್ನರ್ ರೋ. ಶರಣಬಸಪ್ಪ ಗುಡಿಮನಿ, ಹಿರಿಯರಾದ ರೋ. ದೀಪಕ್ ಪಾಟೀಲ್, ರೋ. ಎಮ್ ಸಿ ಐಲಿ, ರೋ. ಎಸ್ ಸಿ ಲಕ್ಕುಂಡಿ, ರೋ. ವ್ಹಿ ಕೆ ಗುರುಮಠ, ರೋ. ಪ್ರಕಾಶ ಉಗಲಾಟ, ರೋ. ಎಂ ಐ ಬೆಲೇರಿ, ರೋ. ರಾಜು ಕಂಟಿಗೊನ್ನವರ ಮುಂತಾದವರು ಉಪಸ್ಥಿತರಿದ್ದರು.

# ಲಂಚ ಪಡೆದು ಲೋಕಾಯುಕ್ತ ಬಲೆಗೆ ಬಿದ್ದ ಸರ್ಕಾರಿ ನೌಕರ

■ವಿಜಯಸಾಕ್ಷಿ ಸುದ್ದಿ, ಮಂಡ್ಯ

ತಾಲೂಕು ಕಚೇರಿಯ ಕೊಪ್ಪ ಹೋಬಳಿಯ ಆರ್.ಟಿ.ಸಿ ತಿದ್ದುಪಡಿ ಶಾಖೆಯ ವಿಷಯ ನಿರ್ವಾಹಕ ಡಿ. ಜೆ ಮಂಜುನಾಥ್ ಸ್ವಾಮಿ ಅವರು ಲಂಚ ಪಡೆಯುತ್ತಿದ್ದಾಗ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಮದ್ದೂರು ತಾಲೂಕು ಕಚೇರಿಗೆ ಮಂಗಳವಾರ ಬೆಳಗ್ಗೆ ಜಿಲ್ಲಾಧಿಕಾರಿ ಡಾ ಕುಮಾರ್ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದ್ದ ವೇಳೆ, ಸಾರ್ವಜನಿಕರು ಕಚೇರಿಯ ವಿವಿಧ ಶಾಖೆಗಳಲ್ಲಿ ಸಾಕಷ್ಟು ಭ್ರಷ್ಟಾಚಾರ ನಡೆಯುತ್ತಿದೆ ಎಂಬ ಗಂಭೀರ ಆರೋಪ ಮಾಡಿದ್ದರು. ಈ ಆರೋಪದ ಬೆನ್ನಲ್ಲೇ ಬುಧವಾರ ಲೋಕಾಯುಕ್ತ ಬಲೆಗೆ ಬಿದ್ದಿದ್ದಾರೆ.

ಕೊಪ್ಪ ಹೋಬಳಿಯ ಬಿದರಮೊಳೆ ಕೊಪ್ಪಲು ಗ್ರಾಮದ ಮೋಹನ್ ಕುಮಾರ್ ಅವರ ಜಮೀನಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿ ಕೋರ್ಟ್ ಆದೇಶವನ್ನು ವಿಳಂಬ ಮಾಡಲು ಮಂಜುನಾಥ್ 10 ಸಾವಿರ ರೂ ಲಂಚಕ್ಕೆ ಬೇಡಿಕೆ ಇಟ್ಟಿದ್ದಾರೆ. ಈ ಸಂಬಂಧ ಮೋಹನ್ ಕುಮಾರ್ ಅವರು ಮಂಡ್ಯ ಲೋಕಾಯುಕ್ತ ಪೊಲೀಸರಿಗೆ ದೂರು ದಾಖಲಿಸಿದ್ದರು.

ಬುಧವಾರ ಮಧ್ಯಾಹ್ನ ಲೋಕಾಯುಕ್ತ ಪೊಲೀಸರು ನೀಡಿದ ಸೂಚನೆಯಂತೆ ವಿಷಯ ನಿರ್ವಾಹಕ ಮಂಜುನಾಥ್ ಅವರಿಗೆ ಮೋಹನ್ ಕುಮಾರ್ ತಾಲೂಕು ಕಚೇರಿಯ ಅಂಗಡಿ ಮಳಿಗೆಗಳ ಬಳಿ 10 ಸಾವಿರ ರೂಪಾಯಿ ಲಂಚವನ್ನು ನೀಡುತ್ತಿದ್ದರು. ಇದೇ ವೇಳೆ, ಲೋಕಾಯುಕ್ತ ಅಧಿಕಾರಿಗಳು ಧಿಡೀರ್ ದಾಳಿ ಮಾಡಿ, ಮಂಜುನಾಥ್ ಅವರನ್ನು ಲಂಚದ ಹಣದ ಸಮೇತ ವಶಕ್ಕೆ ತೆಗೆದುಕೊಂಡು ತಾಲೂಕು ಕಚೇರಿಯಲ್ಲಿ ವಿಚಾರಣೆ ನಡೆಸುತ್ತಿದ್ದಾರೆ.

# ಅಧಿಕಾರಿ ಸಾವು, ಮೂವರು ಯೋಧರಿಗೆ ಗಾಯ!

■ವಿಜಯಸಾಕ್ಷಿ ಸುದ್ದಿ, ಸಿಯಾಚಿನ್

ಸಿಯಾಚಿನ್ ಗ್ಲೇಸಿಯರ್‌ನಲ್ಲಿ ನಡೆದ ಅಗ್ನಿ ಅವಗಢದಲ್ಲಿ ಸೇನಾಧಿಕಾರಿ ಸಾವನ್ನಪ್ಪಿದ್ದು, ಮೂವರು ಯೋಧರಿಗೆ ಗಾಯಗಳಾಗಿವೆ.

ಮುಂಜಾನೆ ವೇಳೆ ಈ ದುರ್ಘಟನೆ ಸಂಭವಿಸಿದ್ದು, ಸೇನಾ ಸಿಬ್ಬಂದಿಗಳಿಗೆ ಗಾಯಗಳಾಗಿವೆ. ತೀವ್ರವಾಗಿ ಗಾಯಗೊಂಡ ರೆಜಿಮೆಂಟಲ್ ವೈದ್ಯಕೀಯ ಅಧಿಕಾರಿ, ಕ್ಯಾಪ್ಟನ್ ಅಂಶುಮಾನ್ ಸಿಂಗ್ ಅವರು ಗಂಭೀರ ಗಾಯಗಳಿಂದಾಗಿ ಮೃತಪಟ್ಟಿದ್ದಾರೆ. ಉಳಿದ ಮೂವರು ಸಿಬ್ಬಂದಿಗಳಿಗೆ ಹೊಗೆ ಉಸಿರಾಡುವಿಕೆ ಹಾಗೂ ಸೆಕೆಂಡ್ ಡಿಗ್ರಿ ಸುಟ್ಟ ಗಾಯಗಳಾಗಿದ್ದು ಚಿಕಿತ್ಸೆ ಪಡೆಯುತ್ತಿದ್ದಾರೆ.

ಗಾಯಗೊಂಡ ಯೋಧರನ್ನು ಏರ್ ಲಿಫ್ಟ್ ಮಾಡಲಾಗಿದ್ದು, ಅವರ ಆರೋಗ್ಯ ಸ್ಥಿರವಾಗಿದೆ ಎಂದು ತಿಳಿದುಬಂದಿದೆ.

# ಗೃಹಲಕ್ಷ್ಮೀ ಯೋಜನೆಯ ನೋಂದಣಿ ಪ್ರಕ್ರಿಯೆಗೆ ಸಿಎಂ ಸಿದ್ದರಾಮಯ್ಯ ಚಾಲನೆ

■ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಕಾಂಗ್ರೆಸ್ ಸರ್ಕಾರದ ಗ್ಯಾರಂಟಿಗಳಲ್ಲಿ ಒಂದಾದ ಗೃಹಲಕ್ಷ್ಮೀ ಯೋಜನೆಯ ನೋಂದಣಿ ಪ್ರಕ್ರಿಯೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ ನೀಡಿದರು.

ವಿಧಾನಸೌಧದ ಬ್ಯಾಂಕ್ವೆಟ್ ಹಾಲ್ ನಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಜ್ಯೋತಿ ಬೆಳಗುವುದರ ಮೂಲಕ ಸಿದ್ದರಾಮಯ್ಯ ಅವರು ಚಾಲನೆ ನೀಡಿದ್ದು ನಾಳೆಯಿಂದ ನೋಂದಣಿ ಪ್ರಕ್ರಿಯೆ ಆರಂಭವಾಗಲಿದೆ. ರಾಜ್ಯದಲ್ಲಿ 1.28 ಕೋಟಿ ಮಹಿಳೆಯರಿಗೆ ಗೃಹ ಲಕ್ಷ್ಮಿ ಯೋಜನೆಯ ಲಾಭ ಸಿಗಲಿದೆ. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಸಚಿವರಾದ ಲಕ್ಷ್ಮಿ ಹೆಬ್ಬಾಳಕರ್ ಹಾಗೂ ಸಚಿವರಾದ ರಾಮಲಿಂಗಾರೆಡ್ಡಿ, ಕೆ.ಎಚ್. ಮುನಿಯಪ್ಪ, ಡಾ. ಹೆಚ್. ಸಿ. ಮಹದೇವಪ್ಪ, ರಹೀಂ ಖಾನ್, ಬೈರತಿ ಸುರೇಶ್ ಮತ್ತು ಶಾಸಕರು, ಸರ್ಕಾರದ ಹಿರಿಯ ಅಧಿಕಾರಿಗಳು ಭಾಗವಹಿಸಿದ್ದರು.

ಯೋಜನೆಯಡಿ ಆಗಸ್ಟ್ 15ಕ್ಕೆ ಫಲಾನುಭವಿಗಳ ಬ್ಯಾಂಕ್ ಖಾತೆಗೆ ಹಣ ಸಂದಾಯ ಆಗಲಿದೆ. ರೇಷನ್ ಕಾರ್ಡ್‌ನಲ್ಲಿ ಮನೆಯ ಯಜಮಾನಿಯಾಗಿರುವವರು ಯೋಜನೆಯ ಫಲಾನುಭವಿ ಯಾಗಲಿದ್ದಾರೆ. ಅವರ ಬ್ಯಾಂಕ್ ಖಾತೆಗೆ ಆಧಾರ್ ಲಿಂಕ್ ಆಗಿರಬೇಕು. ಅವರ ಪತಿಯ ಆಧಾರ್ ಕಾರ್ಡ್ ನೀಡಬೇಕು. ಜಿಎಸ್‌ಟಿ ಹಾಗೂ ಆದಾಯ ತೆರಿಗೆ ಪಾವತಿದಾರರ ಪತ್ನಿಯರಿಗೆ ಈ ಯೋಜನೆ ಅನ್ವಯವಾಗುವುದಿಲ್ಲ. ಬೆಂಗಳೂರು ಒನ್, ಕರ್ನಾಟಕ ಒನ್, ಗ್ರಾಮ ಒನ್, ಗ್ರಾಪಂಗಳಲ್ಲಿರುವ ಬಾಪೂಜಿ ಸೇವಾ ಕೇಂದ್ರಗಳಲ್ಲಿ ನೋಂದಣಿಗೆ ಅವಕಾಶ ಇದೆ. ಸರ್ಕಾರ ನೇಮಕ ಮಾಡಿರುವ ಪ್ರಜಾಪ್ರತಿನಿಧಿಗಳು ಮನೆ ಬಾಗಿಲಿಗೆ ಬಂದು ನೋಂದಣಿ ಮಾಡಲಿದ್ದಾರೆ.

## ನಾಯಕತ್ವ ತರಬೇತಿ ಶಿಬಿರವನ್ನು ಉದ್ಘಾಟಿಸಿದ ಡಾ. ಎಂ ಬಿ ದಳಪತಿ ಅಭಿಮತ

# ನಾಯಕತ್ವ ಬೆಳೆಸಲು ತರಬೇತಿ ಶಿಬಿರ ಸಹಕಾರಿ



1969 ಸೆಪ್ಟಂಬರ್ 24ರಂದು ಎಲ್ಲ ಕಾಲೇಜುಗಳಲ್ಲಿ ಈ ಯೋಜನೆಯನ್ನು ಜಾರಿಗೆ ತರಲಾಯಿತು. ವಿದ್ಯಾರ್ಥಿಗಳಲ್ಲಿ ಸೇವಾ ಯೋಜನೆಯನ್ನು ಪರಿಚಯಿಸುವುದರ ಜೊತೆಗೆ ಅವರಲ್ಲಿ ಸಂಸ್ಕೃತಿ, ಸಂಸ್ಕಾರ, ಸಮಯದ ಮಹತ್ವ, ಶಿಸ್ತು, ಗ್ರಾಮಗಳ ಅಭಿವೃದ್ಧಿ, ದುಶ್ಚಟಗಳನ್ನು ದೂರಗೊಳಿಸುವಿಕೆ, ರಾಷ್ಟ್ರ ಪ್ರೇಮ ಇವೇ ಮುಂತಾದ ಅನೇಕ ಮಹತ್ವದ ಮೌಲ್ಯಗಳನ್ನು ಯುವಕರಲ್ಲಿ ಬೆಳೆಸುವ ದೃಷ್ಟಿಯಿಂದ ಈ ಶಿಬಿರಗಳನ್ನು ಏರ್ಪಡಿಸಲಾಗುತ್ತಿದೆ. ಶ್ರೀ ಅನ್ನದಾನೇಶ್ವರ ಕಾಲೇಜಿನ ಈ ಕನಸು ಬಹಳ ದಿನಗಳದ್ದು ಇಂದು ನನಸಾಗುತ್ತಿದೆ. ಇದರಲ್ಲಿ ಗದಗ, ಹಾವೇರಿ, ಧಾರವಾಡ ಮತ್ತು ಕಾರವಾರ ಜಿಲ್ಲೆಗಳ ಒಟ್ಟು 200 ವಿದ್ಯಾರ್ಥಿಗಳು ಪಾಲ್ಗೊಳ್ಳುತ್ತಿದ್ದಾರೆ.

**– ಡಾ. ಎಂ ಬಿ ದಳಪತಿ.**
ರಾಷ್ಟ್ರೀಯ ಸೇವಾ ಯೋಜನೆಯ ಸಂಯೋಜನಾಧಿಕಾರಿ.

■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಜಗತ್ತಿನಲ್ಲಿ ನಾಯಕರು ಹುಟ್ಟುತ್ತಾರೆ, ಬೆಳೆಯುತ್ತಾರೆ, ಸಾಯುತ್ತಾರೆ. ಆದರೆ ನಾಯಕತ್ವ ಎಂದಿಗೂ ಸಾಯುವುದಿಲ್ಲ. ಇಂತಹ ನಾಯಕತ್ವದ ಗುಣವನ್ನು ನಿಮಗೆ ವಿದ್ಯಾರ್ಥಿ ದೆಸೆಯಿಂದಲೇ ಒದಗಿಸುವ ಮಹತ್ತರ ಉದ್ದೇಶದಿಂದ ರಾಷ್ಟ್ರೀಯ ಸೇವಾ ಯೋಜನೆಯಲ್ಲಿ ನಾಯಕತ್ವ ತರಬೇತಿ ಶಿಬಿರ ಎನ್ನುವ ವಿಶೇಷವಾದ ಕಲ್ಪನೆಯನ್ನು ನಿಮಗೆ ಒದಗಿಸಲಾಗಿದೆ ಎಂದು ಕರ್ನಾಟಕ ವಿಶ್ವವಿದ್ಯಾಲಯದ ರಾಷ್ಟ್ರೀಯ ಸೇವಾ ಯೋಜನೆಯ ಸಂಯೋಜನಾಧಿಕಾರಿ ಡಾ. ಎಂ ಬಿ ದಳಪತಿ ಹೇಳಿದರು.

ಇಲ್ಲಿನ ಶ್ರೀ ಅನ್ನದಾನೇಶ್ವರ ಪದವಿ ಮಹಾವಿದ್ಯಾಲಯದಲ್ಲಿ ಮಂಗಳವಾರ ಕವಿವಿ ರಾಷ್ಟ್ರೀಯ ಸೇವಾ ಯೋಜನಾ ಕೋಶ, ಸ್ನಾತಕೋತ್ತರ ಕೇಂದ್ರ ಮತ್ತು ಶ್ರೀ ಅನ್ನದಾನೇಶ್ವರ ಪದವಿ ಕಾಲೇಜುಗಳ ಸಂಯುಕ್ತ ಆಶ್ರಯದಲ್ಲಿ ಏಳು ದಿನಗಳ ಕಾಲ ನಡೆಯಲಿರುವ ನಾಯಕತ್ವ ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ದೇಶದ ಎಲ್ಲ ಕಾಲೇಜುಗಳಲ್ಲಿ ರಾಷ್ಟ್ರೀಯ ಸೇವಾ ಯೋಜನೆ ಪ್ರಾರಂಭವಾಗಿ ಇಂದಿಗೆ 50 ವರ್ಷಗಳಾದವು. ದೇಶಕ್ಕೆ ಸ್ವಾತಂತ್ರ್ಯ ದೊರೆತು 75 ವರ್ಷಗಳಾದ ಹಿನ್ನೆಲೆಯಲ್ಲಿ, ಕರ್ನಾಟಕ ವಿಶ್ವವಿದ್ಯಾಲಯವು ಸ್ಥಾಪನೆಯಾಗಿ 75 ವರ್ಷಗಳು ತುಂಬಿದ ಅಂಗವಾಗಿ ಆಚರಿಸುತ್ತಿರುವ ಅಮೃತ ಮಹೋತ್ಸವದ ನಿಮಿತ್ತ ಈ ಶಿಬಿರಗಳನ್ನು ನಡೆಸಲಾಗುತ್ತಿದೆ. ಶಿಕ್ಷಣದೊಂದಿಗೆ ಸಮಾಜ ಸೇವೆ, ಸಮಾಜ ಸೇವೆಯೊಂದಿಗೆ ಶಿಕ್ಷಣ ಎಂಬ ಧ್ಯೇಯ ವಾಕ್ಯದೊಂದಿಗೆ ಈ ಯೋಜನೆ ದೇಶಾದ್ಯಂತ ಪ್ರಾರಂಭವಾಗಿದ್ದು, ಈ ಯೋಜನೆಯ ಕಾರ್ಯಕ್ಕೆ ಇಡೀ ದೇಶದಲ್ಲಿ ಮೆಚ್ಚುಗೆ ವ್ಯಕ್ತವಾಗಿದ್ದು, ಕರ್ನಾಟಕ ವಿಶ್ವವಿದ್ಯಾಲಯವು ಎನ್‌ಎಸ್‌ಎಸ್ ಅನುಷ್ಠಾನದಲ್ಲಿ ದೇಶದಲ್ಲಿ ಮುಂಚೂಣಿಯಲ್ಲಿರುವುದು ನಮಗೆಲ್ಲ ಹೆಮ್ಮೆಯ ವಿಷಯ ಎಂದರು.

ಸಮಾರಂಭದ ಅಧ್ಯಕ್ಷತೆಯನ್ನು ಕಾಲೇಜು ಆಡಳಿತ ಮಂಡಳಿ ಅಧ್ಯಕ್ಷ ಬಸವರಾಜ ವೀರಾಪೂರ ವಹಿಸಿದ್ದರು. ಸಭೆಯನ್ನುದ್ದೇಶಿಸಿ ಎಸ್‌ಎವಿವಿಪ ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ನಿವೃತ್ತ ಪ್ರಾಚಾರ್ಯ ಬಿ ಎಫ್ ಚೇಗರೆಡ್ಡಿ ಮಾತನಾಡಿ, ರಾಷ್ಟ್ರೀಯ ಸೇವಾ ಯೋಜನೆಯ ಮಹತ್ವವನ್ನು ಅರಿತುಕೊಂಡು ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಲು ಕರೆ ನೀಡಿದರು. ವೇದಿಕೆಯ ಮೇಲೆ ಜಿಲ್ಲಾ ನೋಡಲ್ ಅಧಿಕಾರಿ ವಿ ಎಚ್ ಕೊಳ್ಳಿ, ಸಂಸ್ಥೆಯ ಆಡಳಿತಾಧಿಕಾರಿ ಎನ್ ಆರ್ ಗೌಡರ ಉಪಸ್ಥಿತರಿದ್ದರು. ಪ್ರಾಚಾರ್ಯ ಎಸ್ ಜಿ ಕೇಶಣ್ಣವರ ಸ್ವಾಗತಿಸಿದರು. ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿ ಡಾ. ರತ್ನಾ ಹಿರೇಮಠ ನಿರೂಪಿಸಿದರು. ಡಾ. ಕಲ್ಲಯ್ಯ ಹಿರೇಮಠ ವಂದಿಸಿದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka